ಸಂಪುಟ: ೦೬/ ಸಂಚಿಕೆ: ೨೧೭/ಶುಕ್ರವಾರ ದಿನಾಂಕ: ೨೫-೧೦-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 217 / FRIDAY Date : 25-10-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ॥ ಸಪ್ತಋಷಿವಾಣಿ ॥

ಬದುಕಿನಲ್ಲಿ ತಾಳ್ಮೆಯೆಂಬ ಆಯುಧ ಮೌನವೆಂಬ ಕಿರೀಟ ಸಹಿಸಿಕೊಳ್ಳುವ ಆಭರಣ, ಇವುಗಳನ್ನು ಅನುಸರಿಸಿದವರನ್ನು ಸೋಲಿಸಲು ಯಾರಿಂದಲೂ ಸಾಧ್ಯವಿಲ್ಲ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ ಉಡುಪಿ

## ಮುಡಾ ತನಿಖೆಗೆ ಅನುಮತಿ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿದ ಸಿದ್ದರಾಮಯ್ಯ



ಬೆಂಗಳೂರು: ಮುಡಾ ಅಕ್ರಮದ ಬೆನ್ನು ಬಿದ್ದಿರುವ ಇಡಿ ಅಧಿಕಾರಿಗಳು ಇಂಚಿಂಚೂ ಶೋಧ ನಡೆಸುತ್ತಿದ್ದಾರೆ. ಈ ಮಧ್ಯೆ ಕೊಂಚ ಬಿಡುವಿನ ನಂತರ ಸಿಎಂ ಸಿದ್ದರಾಮಯ್ಯ ಮತ್ತೆ ಕಾನೂನು ಸಮರಕ್ಕೆ ಅಣಿಯಾಗುತ್ತಿದ್ದು, ಮುಡಾ ತನಿಖೆಗೆ ಅನುಮತಿ ನೀಡಿದ ರಾಜ್ಯಪಾಲರ ಕ್ರಮ ಪ್ರಶ್ನಿಸಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ.

ಮುಡಾ ಹಗರಣದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿದ್ದರು. ಸದ್ಯ ಈ ವಿಚಾರವಾಗಿ ಸೆಪ್ಟೆಂಬರ್ 24ರ ಆದೇಶ ಪ್ರಶ್ನಿಸಿ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದು, ಏಕಸದಸ್ಯ ಪೀಠದ ಆದೇಶ ರದ್ದುಪಡಿಸುವಂತೆ ಮನವಿ ಮಾಡಿದ್ದಾರೆ.

ತನಿಖೆಯ ಅಖಾಡಕ್ಕಿಳಿದಿರುವ ಕೇಂದ್ರದ ಜಾರಿನಿರ್ದೇಶಾನಲಯ ಇತ್ತೀಚೆಗೆ ಹಲವು ಸಾಕ್ಷ್ಯಾಧಾರಗಳನ್ನು ವಶಕ್ಕೆ ಪಡೆದಿತ್ತು. ಅಕ್ಟೋಬರ್ 18– 19ರಂದು ಎರಡು ದಿನ ನಡೆಸಿದ ದಾಳಿಯಲ್ಲಿ ಹಲವಾರು ದಾಖಲೆಗಳನ್ನು ಸಂಗ್ರಹಿಸಿದ್ದರು. ಬಂಡಲ್ ಗಟ್ಟಲೆ ದಾಖಲೆಗಳನ್ನು ತಮ್ಮೊಂದಿಗೆ ಕೊಂಡೊಯ್ದಿದ್ದಾರೆ. ಸಿಎಂ ಪತ್ನಿ ಹೆಸರಿಗೆ ಖಾತೆ ಮಾಡಿಸಿಕೊಡಲಾಗಿತ್ತು. ಲೇಔಟ್ ನಿರ್ಮಾಣಕ್ಕಾಗಿ ಕೆಸರೆ ಗ್ರಾಮದ 462ನೇ ಸರ್ವೇ ನಂಬರ್‌ನಲ್ಲಿರುವ 3 ಎಕರೆ 16 ಗುಂಟೆ ಜಾಗವನ್ನು ಮುಡಾ ತನ್ನ ಸುಪರ್ದಿಗೆ ತಗೆದುಕೊಂಡಿತ್ತು. ಆದರೆ, ಸ್ವಾಧೀನಪಡಿಸಿಕೊಳ್ಳುವಾಗ ತಮಗೆ ಮಾಹಿತಿ ನೀಡಿಲ್ಲ. ಹಾಗಾಗಿ, ತಮಗೆ ಪರಿಹಾರ ನೀಡಬೇಕೆಂದು ಅರ್ಜಿ ಸಲ್ಲಿಸಿದ್ದ ಪಾರ್ವತಿ ಸಿದ್ದರಾಮಯ್ಯನವರು ಮುಡಾ ಕಡೆಯಿಂದ ಪರಿಹಾರದ ರೂಪವಾಗಿ 2021ರಲ್ಲಿ ಮೈಸೂರಿನ ವಿಜಯನಗರದ ಮೂರನೇ ಹಂತದಲ್ಲಿ ಬೆಲೆಬಾಳುವ 14 ಸೈಟುಗಳನ್ನು ಖರೀದಿಸಿದ್ದರು. ಅವರ ಹೆಸರಿಗೆ ಆ ಸೈಟುಗಳ ಖಾತೆಯನ್ನೂ ಮಾಡಿಸಿಕೊಡಲಾಗಿತ್ತು.

ಪರಿಹಾರ ರೂಪವಾಗಿ ಅವರಿಗೆ ಸೈಟುಗಳನ್ನು ಕೊಟ್ಟು ಅವರಿಗೆ ಖಾತೆಯನ್ನೂ ಮಾಡಿಸಿರುವ ಮುಡಾ, ಇತ್ತ, ಬಡಾವಣೆಗಾಗಿ ತಾನು ವಶಪಡಿಸಿಕೊಂಡಿದ್ದ ಭೂಮಿಯ ಮಾಲೀಕತ್ವವನ್ನು ತಿದ್ದುಪಡಿ ಮಾಡಿಯೇ ಇಲ್ಲ. ಅದರಿಂದಾಗಿ, ವಶಪಡಿಸಿಕೊಂಡು ಬಡಾವಣೆ ನಿರ್ಮಿಸಲಾಗಿರುವ ಭೂಮಿಯ ಮಾಲೀಕತ್ವ ಇನ್ನೂ ಪಾರ್ವತಿಯವರ ಹೆಸರಿನಲ್ಲೇ ಇದೆ. ಕಾರ್ಡ್ಸ್ ಆಫ್ ರೈಟ್ಸ್‌ನಲ್ಲಿ, ಆರ್‌ಟಿಸಿ ದಾಖಲೆಗಳಲ್ಲಿ ಈಗಲೂ ಪಾರ್ವತಿಯವರ ಹೆಸರೇ ಇದೆ.

## ಮನೆ-ಮನೆಗೆ ತೆರಳಿ ಆರೋಗ್ಯ ತಪಾಸಣೆ


# ಗೃಹ ಆರೋಗ್ಯ- ಯೋಜನೆ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ

**ಬೆಂಗಳೂರು** : 'ಮನೆ ಮನೆಗೆ ತೆರಳಿ ರಾಜ್ಯದ ಜನರ ಆರೋಗ್ಯ ತಪಾಸಣೆ ನಡೆಸುವ ಮಹತ್ವದ ಜನಾರೋಗ್ಯ ಕಾರ್ಯಕ್ರಮವಾದ 'ಗೃಹ ಆರೋಗ್ಯ' ಯೋಜನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಾರ್ಪಣೆಗೊಳಿಸಿದ್ದಾರೆ.

ಗುರುವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನೂತನ ಯೋಜನೆಗೆ ಚಾಲನೆ ನೀಡಿ, ರೋಗಿಗಳೊಂದಿಗೆ ಮಾತುಕತೆ ನಡೆಸಿದ ಬಳಿಕ ಮಾತನಾಡಿದ ಅವರು, 'ಪ್ರತಿಯೊಬ್ಬರ ಮನೆಗೆ ತೆರಳಿ ಉಚಿತ ಚಿಕಿತ್ಸೆ ನೀಡುವ ಮಹತ್ವದ ಕಾರ್ಯಕ್ರಮ ಆರಂಭಿಸಿದ್ದೇವೆ. ಮನೆ ಬಾಗಿಲಿಗೆ ಆರೋಗ್ಯ ಸವಲತ್ತು ಒದಗಿಸುವ ಗುರಿ ನಮ್ಮ ಸರಕಾರದ್ದಾಗಿದೆ' ಎಂದರು.

'ಕಾಯಿಲೆಗಳನ್ನು, ಆರೋಗ್ಯ ಸಮಸ್ಯೆಗಳನ್ನು ಗುಟ್ಟಾಗಿ ಇಟ್ಟು ಅನಾಹುತ ತಂದುಕೊಳ್ಳಬಾರದು. ಆಸ್ಪತ್ರೆಗೆ ಹೋಗಲು ಸಾಧ್ಯವಾಗದ ಬಡವರಿಗೂ ತಪಾಸಣೆ ಮತ್ತು ಚಿಕಿತ್ಸೆ ಒದಗಿಸಲು ಸಾಧ್ಯ ಆಗಲಿ ಎನ್ನುವ ಕಾರಣದಿಂದಲೇ ಮನೆಬಾಗಿಲಿಗೆ ಆರೋಗ್ಯ ಕಾರ್ಯಕ್ರಮ ಆರಂಭಿಸಿದ್ದೇವೆ ಎಂದು ಸಿದ್ದರಾಮಯ್ಯ ಹೇಳಿದರು.

ಬಹಳ ಜನರಿಗೆ ವೈದ್ಯರಿಗೆ ತಪಾಸಣೆ ವೆಚ್ಚ ಕೊಡುವುದಕ್ಕೂ ಸಾಧ್ಯವಾಗುವುದಿಲ್ಲ. ಆದರೆ, ಇಂತಹವರಿಗೂ ಆರೋಗ್ಯದ ಹಕ್ಕು ಇದೆ. ತಪಾಸಣೆಯಿಂದ ಸಾಂಕ್ರಾಮಿಕ ರೋಗಗಳು, ಸಾಂಕ್ರಾಮಿಕವಲ್ಲದ ರೋಗಗಳೂ ಪತ್ತೆಯಾಗುತ್ತವೆ. ಬಹಳ ಜನ ಆರೋಗ್ಯ ತಪಾಸಣೆಯನ್ನೇ ಮಾಡಿಸಿಕೊಂಡಿರುವುದಿಲ್ಲ. ಹೀಗಾಗಿ ಮನೆ ಮನೆಗೆ ತೆರಳಿ ಪ್ರತಿಯೊಬ್ಬರ ಆರೋಗ್ಯ




ತಪಾಸಣೆ ನಡೆಸಿ ಉಚಿತ ಚಿಕಿತ್ಸೆ ನೀಡುವ ಯೋಜನೆಯನ್ನು ಜಾರಿಗೆ ತಂದಿದ್ದೇವೆ ಎಂದು ಸಿದ್ದರಾಮಯ್ಯ ತಿಳಿಸಿದರು. ಕ್ಯಾನ್ಸರ್ ಕೂಡಿ ಎಲ್ಲ ರೋಗಗಳು ಆರಂಭದಲ್ಲೇ ಪತ್ತೆಯಾದರೆ ಗುಣಪಡಿಸಲು ಸಾಧ್ಯವಿದೆ. ಸಕ್ಕರೆ ಕಾಯಿಲೆ, ರಕ್ತದೊತ್ತಡವನ್ನು ಯಶಸ್ವಿಯಾಗಿ ನಿಯಂತ್ರಿಸಬಹುದು. ಶಿಸ್ತಿನ ವ್ಯಾಯಾಮ ಯುಕ್ತ ಜೀವನಶೈಲಿ ಮುಖ್ಯ. ಒತ್ತಡದ ಜೀವನದಿಂದಲೂ ಕಾಯಿಲೆಗಳು ಬರುತ್ತವೆ. ಈಗ ರಸಾಯನಿಕ ಬಳಸಿದ ಆಹಾರದ ಸೇವನೆ ಹೆಚ್ಚಾಗಿರುವುದರಿಂದಲೂ ಆರೋಗ್ಯ ಸಮಸ್ಯೆ ಹೆಚ್ಚುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಮೊಟ್ಟೆ, ಮೀನು, ಮಾಂಸ ತಿಂದರೆ ಡಯಾಬಿಟಿಕ್ ಬರುತ್ತದೆ, ಹೆಚ್ಚುತ್ತದೆ ಎನ್ನುವ ತಪ್ಪುಕಲ್ಪನೆ ಇದೆ. ಹಾಗೇನೂ ಇಲ್ಲ. ಮೊಟ್ಟೆ ಮಾಂಸ ಬಿಟ್ಟು ಬರೀ ಅನ್ನ ತಿಂದರೆ ಹೇಗೆ, ಬ್ಯಾಲೆನ್ಸ್ ಆಹಾರ ಸೇವನೆ ಮುಖ್ಯ ಎಂದು ಸಿದ್ದರಾಮಯ್ಯ ತಿಳಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮುಖ್ಯ ಸಚೇತಕ ಅಶೋಕ್ ಪಟ್ಟಣ್, ಪರಿಷತ್ ಸದಸ್ಯ ಸುಧಾಮ ದಾಸ್, ಸಿಎಂ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**30 ವರ್ಷಗಳಿಂದ ಸಕ್ಕರೆ ಕಾಯಿಲೆ ನಿರ್ವಹಿಸುತ್ತಿದ್ದೇನೆ:** 'ನಾನು 30 ವರ್ಷಗಳಿಂದ ಸಕ್ಕರೆ ಕಾಯಿಲೆಯನ್ನು ನಿರ್ವಹಿಸುತ್ತಿದ್ದೇನೆ. ವ್ಯಾಯಾಮ, ಶಿಸ್ತಿನ ಜೀವನಶೈಲಿಯಿಂದ ಡಯಾಬಿಟಿಕ್ ನಿಯಂತ್ರಿಸಬಹುದು. ನಾನು ಸ್ಟಂಟ್ ಹಾಕಿಸಿಕೊಂಡು 24 ವರ್ಷವಾಯಿತು. ಪಕ್ಷದ ಕೆಲಸವನ್ನೂ ಮಾಡುತ್ತೇನೆ, ಸರಕಾರದ ಕೆಲಸವನ್ನೂ ಮಾಡುತ್ತೇನೆ, ವ್ಯಾಯಾಮವನ್ನೂ ಮಾಡುತ್ತೇನೆ, ಅರಾಮಾಗಿ ಎಲ್ಲ ಕೆಲಸ, ಕಾರ್ಯಗಳಲ್ಲೂ ಭಾಗವಹಿಸುತ್ತಿದ್ದೇನೆ. ಆದರೆ, ವೈದ್ಯರು ಹೇಳಿದಂತೆ ಕೇಳುತ್ತೇನೆ. ಹೀಗಾಗಿ ಎಲ್ಲವನ್ನೂ ಅಚ್ಚುಕಟ್ಟಾಗಿ ನಿರ್ವಹಿಸಲು ಸಾಧ್ಯವಾಗಿದೆ'.

## ಜನರ ಜೀವ ರಕ್ಷಣೆಯಲ್ಲಿ ಗೃಹ ಆರೋಗ್ಯ ಯೋಜನೆ ಮಹತ್ವದ್ದು

**ಬೆಂಗಳೂರು** : ಅಸಾಂಕ್ರಾಮಿಕ ರೋ ಗಗಳ ನಿಯಂತ್ರಣ ಮೂಲಕ ಜನರ ಜೀವ ರಕ್ಷಣೆಯಲ್ಲಿ 'ಗೃಹ ಆರೋಗ್ಯ' ಮಹತ್ವದ ಯೋಜನೆಯಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಗುರುವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆರೋಗ್ಯ ಇಲಾಖೆ ವತಿಯಿಂದ ಆಯೋಜಿಸಿದ್ದ 'ಗೃಹ ಆರೋಗ್ಯ' ನೂತನ ಯೋಜನೆಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಜನರ ಆರೋಗ್ಯ ರಕ್ಷಣೆ ವಿಚಾರದಲ್ಲಿ ಗೃಹ ಆರೋಗ್ಯ ದೂರದೃಷ್ಟಿಯ ಯೋಜನೆಯಾಗಿದೆ ಎಂದರು.

ಈ 'ಗೃಹ ಆರೋಗ್ಯ ಯೋಜನೆ ಕೋಲಾರ ಜಿಲ್ಲೆಯಿಂದ ಆರಂಭವಾಗಿ, ಜನವರಿ ತಿಂಗಳಿನಲ್ಲಿ ರಾಜ್ಯಾದ್ಯಂತ ಜಾರಿಗೆ ಬರಲಿದೆ. ಅಸಾಂಕ್ರಾಮಿಕ ರೋಗಗಳನ್ನು ಹತೋಟಿಗೆ ತರುವುದು ಗೃಹ ಆರೋಗ್ಯ ಯೋಜನೆಯ ಮುಖ್ಯ ಗುರಿಯಾಗಿದೆ. ಎಂದರು ದಿನೇಶ್ ಗುಂಡೂರಾವ್ ಹೇಳಿದರು.

ದೇಶದಲ್ಲಿ ಅಸಾಂಕ್ರಾಮಿಕ ರೋಗಗಳ ಪ್ರಮಾಣ ಹೆಚ್ಚುತ್ತಿದೆ. ವಿಶೇಷವಾಗಿ ಕರ್ನಾಟಕದಲ್ಲಿ ಶೇ.26.9ರಷ್ಟು ರಕ್ತದೊತ್ತಡ, ಶೇ.15.6ರಷ್ಟು ಮಧುಮೇಹ ರೋಗಗಳಿಂದ ಜನರು ಬಳಲುತ್ತಿದ್ದು, ಇದರಿಂದ ಉಂಟಾಗುತ್ತಿರುವ ಮರಣ ಹಾಗೂ ಅನಾರೋಗ್ಯ ತೊಡಕುಗಳನ್ನು ತಡೆಗಟ್ಟಲು ಗೃಹ ಆರೋಗ್ಯ ಯೋಜನೆ ಸಹಕಾರಿಯಾಗಿದೆ ಎಂದು ದಿನೇಶ್ ಗುಂಡೂರಾವ್ ತಿಳಿಸಿದರು.

ಅಲ್ಲದೇ ರಾಜ್ಯದಲ್ಲಿ ಶೇ.11.5ರಷ್ಟು ಬಾಯಿ ಕ್ಯಾನ್ಸರ್, ಶೇ. 26ರಷ್ಟು ಸ್ತನ ಕ್ಯಾನ್ಸರ್ ಹಾಗೂ ಶೇ.18.3ರಷ್ಟು ಗರ್ಭಕಂಠದ ಕ್ಯಾನ್ಸರ್ ರೋಗಗಳಿಂದ ಜನರು ತತ್ತರಿಸುತ್ತಿದ್ದು, ಈ ರೋಗಗಳಿಗೂ ಪರಿಹಾರ ಒದಗಿಸಲು ಗೃಹ ಆರೋಗ್ಯ ಯೋಜನೆಯಲ್ಲಿ ರೂಪ ರೇಷೆಗಳನ್ನು ಸಿದ್ಧಪಡಿಸಲಾಗಿದೆ. ಹಳ್ಳಿಗಾಡಿನ ಜನರು ರಕ್ತದೊತ್ತಡ, ಮಧುಮೇಹ ರೋಗಗಳ ತಪಾಸಣೆ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಹೀಗಾಗಿ ಇದೀಗ ಆರೋಗ್ಯ ಇಲಾಖೆಯನ್ನೇ ಜನರ ಮನೆ ಬಳಿಗೆ ಕಳಿಸುತ್ತಿದ್ದೇನೆ ಎಂದು ದಿನೇಶ್ ಗುಂಡೂರಾವ್ ಹೇಳಿದರು.

ನಮ್ಮ ಆರೋಗ್ಯ ಅಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತರು ಮನೆ ಮನೆಗೆ ತೆರಳಿ ಜನರ ರಕ್ತದೊತ್ತಡ, ಮಧುಮೇಹ ತಪಾಸಣೆ ನಡೆಸಲಿದ್ದಾರೆ.



ರೋಗಕ್ಕೆ ತುತ್ತಾದವರಿಗೆ ಸೂಕ್ತ ಔಷಧಿಗಳನ್ನು ತಲುಪಿಸಲಾಗುತ್ತದೆ. ಜನರು ಈ ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ದಿನೇಶ್ ಗುಂಡೂರಾವ್ ತಿಳಿಸಿದರು.

ಆರಂಭಿಕ ಹಂತದಲ್ಲಿ ರಕ್ತದೊತ್ತಡ ಮಧುಮೇಹವನ್ನು ಜನರು ನಿರ್ಲಕ್ಷಿಸುತ್ತಾರೆ. ಆದರೆ ದೀರ್ಘಾವಧಿಯಲ್ಲಿ ಈ ರೋಗಗಳೇ ಕಿಡ್ನಿ ವೈಫಲ್ಯ, ಹೃದಯಾಘಾತಗಳಿಗೆ ಕಾರಣವಾಗುತ್ತದೆ. ಗೃಹ ಆರೋಗ್ಯದ ಮುಖಾಂತರ ನಾವು ತಪಾಸಣೆ ನಡೆಸಿ ಔಷಧಿಗಳನ್ನು ಕೊಟ್ಟರೆ ಮುಂದೆ ಆಗುವ ಜೀವಪಾಯಗಳನ್ನು ತಡೆಗಟ್ಟಬಹುದು ಎಂದು ದಿನೇಶ್ ಗುಂಡೂರಾವ್ ಹೇಳಿದರು.

ಏನಿದು 'ಗೃಹ ಆರೋಗ್ಯ' ಯೋಜನೆ: ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಸುರಕ್ಷಾಣಾಧಿಕಾರಿಗಳು ಸೇರಿದಂತೆ ಆಶಾ ಕಾರ್ಯಕರ್ತೆಯರು ಪ್ರತಿ ಮನೆಗಳಿಗೆ ಭೇಟಿ ನೀಡಿ 30 ವರ್ಷ ಮೇಲ್ಪಟ್ಟ ಜನರ ರಕ್ತದೊತ್ತಡ, ಮಧುಮೇಹ ತಪಾಸಣೆ ನಡೆಸಲಿದ್ದಾರೆ.

–ವಾರದಲ್ಲಿ ಮಂಗಳವಾರ, ಬುಧವಾರ, ಶುಕ್ರವಾರ ಮತ್ತು ಶನಿವಾರದಂದು ದಿನಕ್ಕೆ 15 ಮನೆಗಳಂತೆ ಭೇಟಿ ನೀಡಿ ತಪಾಸಣೆ ಕಾರ್ಯ ನಡೆಸಲಿದ್ದಾರೆ.

–ಬಾಯಿ ಕ್ಯಾನ್ಸರ್, ಮಹಿಳೆಯರ ಗರ್ಭಕಂಠ ಮತ್ತು ಸ್ತನ ಕ್ಯಾನ್ಸರ್ ಸೇರಿದಂತೆ ಸಹ ಭೇಟಿಯ ಸಂದರ್ಭದಲ್ಲಿ ಪರೀಕ್ಷಿಸಲಾಗುತ್ತದೆ.

–ಅಸಂಕ್ರಾಮಿಕ ರೋಗಗಳಿಂದ ದೂರವಿರಲು ಜೀವನಶೈಲಿ ಮಾರ್ಪಾಡು ಮಾಡಲು ಆರೋಗ್ಯ ಸಿಬ್ಬಂದಿಯಿಂದ ಸಲಹೆ ನೀಡಲಾಗುತ್ತದೆ.

–ರೋಗಗಳಿಗೆ ದೃಢಪಟ್ಟ ಪ್ರಕರಣಗಳಿಗೆ ಅಗತ್ಯ ಔಷಧಿಗಳನ್ನು ಮಾತ್ರೆ ಪಟ್ಟಿಗೆ ಮುಖಾಂತರ ಜನರ ಬಳಿಗೆ ಒದಗಿಸಲು ಯೋಜನೆಯಲ್ಲಿ ರೂಪ ರೇಷೆ ಸಿದ್ಧಪಡಿಸಲಾಗಿದೆ. –ಕೋಲಾರ ಜಿಲ್ಲೆಯಿಂದ ಯೋಜನೆ ಆರಂಭವಾಗುತ್ತಿದ್ದು, ಜನವರಿ ತಿಂಗಳ ಬಳಿಕ ರಾಜ್ಯಾದ್ಯಂತ ಯೋಜನೆ ಜಾರಿಗೆ ಬರಲಿದೆ.

## ಭಾರೀ ಮಳೆಯಾಗುವ ಸಾಧ್ಯತೆ ಮೂರು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ

ಬೆಂಗಳೂರು : ಅರಬ್ಬೀ ಸಮುದ್ರ ಮತ್ತು ಬಂಗಾಳಕೊಲ್ಲಿಯಲ್ಲಿ ಉಂಟಾಗಿದ್ದ ಚಂಡಮಾರುತಗಳ ಪ್ರಭಾವ ಕಡಿಮೆಯಾಗಿದ್ದು, ದಕ್ಷಿಣ ಒಳನಾಡಿನ ಮಂಡ್ಯ, ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಮುಂದಿನ 24 ಗಂಟೆಗಳಿಗೆ ಅನ್ವಯವಾಗುವಂತೆ ಯೆಲ್ಲೋ ಅಲರ್ಟ್ ಕೊಡಲಾಗಿದೆ. ಚಿಕ್ಕಮಗಳೂರು, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಕೊಡಗು, ಉತ್ತರ ಕನ್ನಡ ಜಿಲ್ಲೆಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಒಣ ಹವೆ ಇರಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಬೆಂಗಳೂರು ನಗರ ಮತ್ತು ಸುತ್ತಮುತ್ತಲೀನ ಪ್ರದೇಶದಲ್ಲಿ ಮುಂದಿನ 24 ಗಂಟೆಗಳ ಕಾಲ ಸಾಮಾನ್ಯವಾಗಿ ಮೋಡ ಕವಿದ ಆಕಾಶ ಇರಲಿದೆ. ಸಾಧಾರಣ ಮಳೆಯಾಗುವ ಸಂಭವವಿದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 25 ಮತ್ತು 20 ಡಿಗ್ರಿ ದಾಖಲಾಗಲಿದೆ. ನಿನ್ನೆಯಿಂದ 13.6 ಎಂಎಂ ಮಳೆ ನಗರದಲ್ಲಿ ದಾಖಲಾಗಿದೆ.

# ಪಡಿತರ ಸರ್ವರ್ ಸಮಸ್ಯೆ: ಜನರು ಹೈರಾಣ

## ದಿನವಿಡೀ ಅಂಗಡಿ ಮುಂದೆ ಕುಂತರೂ ಸಿಗದ ರೇಷನ್

**ವರದಿ : ಮಲ್ಲಿಕಾರ್ಜುನ ತುಂಗಳ**

ರಬಕವಿ–ಬನಹಟ್ಟಿ,ಅ24: ತಾಲೂಕಿನಾದ್ಯಂತ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ವರ್ ಸಮಸ್ಯೆಯಿಂದ ಪಡಿತರ ಪಡೆಯಲು ಪರದಾಡುವ ಪರಿಸ್ಥಿತಿ ಎದುರಾಗಿದೆ.

ತಾಲೂಕಿನಾದ್ಯಂತ ಕಳೆದೊಂದು ವಾರದಿಂದ ಆಹಾರ ಇಲಾಖೆ ಸರ್ವರ್ ಸಮಸ್ಯೆಯಿಂದ ದಿನವಿಡೀ ಸರತಿ ಸಾಲಿನಲ್ಲಿ ನಿಂತರೂ ಸಮಸ್ಯೆಗೆ ಪರಿಹಾರವಿಲ್ಲದಂತಾಗಿದೆ. ಸರ್ವರ್ ಮಧ್ಯಾಹ್ನ ಸರಿ ಹೋಗತ್ತೆ, ಸಂಜೆ ಆಗತ್ತೆ ಎಂದು ಕಾದು ಕುಳಿತ ಗ್ರಾಹಕರು ಬಂದ ದಾರಿಗೆ ಸುಂಕವಿಲ್ಲವೆಂಬಂತೆ ಮರಳಿ ಮನೆಗೆ ವಾಪಸ್ಸಾಗುತ್ತಿದ್ದು, ಮರಳಿ ಬೆಳಗಿನ ಜಾವವೇ ಸರದಿಯಲ್ಲಿ ನಿಲ್ಲುವ ಸಂಕಷ್ಟ



ಇವರದು.

ದೈನಂದಿನ ಕೆಲಸ ಬಿಟ್ಟು, ಅದರಲ್ಲೂ ಈ ಭಾಗದಲ್ಲಿ ಮಗ್ಗಗಳ ಮುಂದೆ ನಿಂತರೆ ಮಾತ್ರ ಉದ್ಯೋಗ ಇಲ್ಲವಾದರೆ ಖಾಲಿ ಹೊಟ್ಟೆಯೇ ಗತಿ.

'ರಾಜ್ಯಾದ್ಯಂತ ಹೊಸ ಸಾಫ್ಟ್‌ವೇರ್ ಅಳವಡಿಕೆ ಕಾರಣ ತಾಂತ್ರಿಕ ಸಮಸ್ಯೆಯಾಗಿದೆ. ತಾಲೂಕಿನಾದ್ಯಂತ ಶೇ.60 ರಷ್ಟು ಪಡಿತರ ವಿತರಣೆಯಾಗಿದೆ. ಜನರ ಅನುಕೂಲಕ್ಕಾಗಿ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆವರೆಗೂ ಪಡಿತರ ಅಂಗಡಿ ಮೂಲಕ ವಿತರಣೆಗೆ ಆದೇಶವಿದೆ.'

**–ರವಿ ಲಮಾಣಿ,**
ಆಹಾರ ನಿರೀಕ್ಷಕರು,ರಬಕವಿ–ಬನಹಟ್ಟಿ.

ಸಂಕಷ್ಟದಲ್ಲಿ ಗ್ರಾಹಕರು: ಕಳೆದೊಂದು ವಾರದಿಂದ ಪಡಿತರ ತರುವಲ್ಲಿ ಹರಸಾಹಸ ಪಡುತ್ತಿಇರುವ ಜನರು ತಮ್ಮ ಕೆಲಸ ಬಿಟ್ಟು ಪಡಿತರ ಆಹಾರಕ್ಕೆ ಪರದಾಡುವಂತಾಗಿದೆ. ಇತ್ತ ನೇಯ್ಗೆಯಿಲ್ಲದೆ ಹೊಟ್ಟೆ ತುಂಬುವದೇ ಸವಾಲಾಗುತ್ತಿದ್ದರೆ, ಮತ್ತೊಂದೆಡೆ ಸರ್ವರ್ ಕಾಟ ನೇಕಾರರಿಗೆ ಕಂಟಕವಾಗಿದೆ.

'ಸರ್ವರ್ ಸಮಸ್ಯೆಯಿಂದ ಬೆಳಗಿನ ಜಾವದಿಂದಲೇ ಪಡಿತರ ಕೇಂದ್ರ ಮುಂದೆ ನಿಂತು ದಿನವಿಡೀ ಕಾಯಬೇಕಾದ ಪರಿಸ್ಥಿತಿ. ಸರ್ಕಾರ ಶೀಘ್ರ ಸಮಸ್ಯೆ ಪರಿಹರಿಸಲಿ'.

**–ರಾಜು ಶಿರಹಟ್ಟಿ,**
**ಬನಹಟ್ಟಿ ನಿವಾಸಿ.**

# ಚನ್ನಮ್ಮನ ಕಿತ್ತೂರು ಉತ್ಸವ : ಕಿತ್ತೂರಿನ ಇತಿಹಾಸ ರಾಷ್ಟ್ರಮಟ್ಟಕ್ಕೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿ: ಸಚಿವ ಸತೀಶ್ ಜಾರಕಿಹೊಳಿ




**ಬೆಳಗಾವಿ.** : ಕಿತ್ತೂರು ಉತ್ಸವ–2024 ಹಾಗೂ ಚನ್ನಮ್ಮನ ವಿಜಯೋತ್ಸವದ 200 ನೇ ವರ್ಷದ ಆಚರಣೆಯನ್ನು ಈ ಬಾರಿ ವಿಶಿಷ್ಟವಾಗಿ ಆಚರಿಸಲಾಗುತ್ತಿದೆ. ಕಿತ್ತೂರಿನ ಇತಿಹಾಸವನ್ನು ರಾಜ್ಯಕ್ಕೆ ಸೀಮಿತಗೊಳಿಸದೇ ರಾಷ್ಟ್ರಮಟ್ಟಕ್ಕೆ ಕೊಂಡೊಯ್ಯಬೇಕಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಪ್ರತಿಪಾದಿಸಿದರು.

ಚನ್ನಮ್ಮನ ಕಿತ್ತೂರಿನ ಕೋಟೆ ಆವರಣದಲ್ಲಿ ಕಿತ್ತೂರು ಚನ್ನಮ್ಮ ಮುಖ್ಯ ವೇದಿಕೆಯಲ್ಲಿ ಬುಧವಾರ (ಅ.23) ಜರುಗಿದ ಕಿತ್ತೂರು ಉತ್ಸವ–2024 ವಿಜಯೋತ್ಸವದ 200ನೇ ವರ್ಷಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಿತ್ತೂರು ಉತ್ಸವದಲ್ಲಿ ಅನೇಕ ಸಾಹಿತಿಗಳು, ಬುದ್ಧಿಜೀವಿಗಳು, ಕಲಾವಿದರು ತಮ್ಮ ಪರಿಚಯವನ್ನು ನಾಡಿಗೆ ಮಾಡಿಕೊಳ್ಳುತ್ತಿದ್ದಾರೆ.

ಕಿತ್ತೂರು ಇತಿಹಾಸಕ್ಕೆ ಸಂಬಂದಪಟ್ಟಂತೆ ಸಂಗೊಳ್ಳಿ ರಾಯಣ್ಣ, ಅಮಟೂರ ಬಾಳಪ್ಪ ಸೇರಿದಂತೆ ಇನ್ನೂ ಅನೇಕ ಹೋರಾಟಗಾರರ ಇತಿಹಾಸವನ್ನು ಮರುಸೃಷ್ಠಿ ಮಾಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

ರಾಣಿ ಚನ್ನಮ್ಮನ ಆದರ್ಶಗಳನ್ನು ನಾವೆಲ್ಲ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಕಳೆದ ಸಾಲಿನಿಂದ ಲೋಕೋಪಯೋಗಿ ಇಲಾಖೆ ವತಿಯಿಂದ ಕಿತ್ತೂರು ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಲಾಗುತ್ತಿದೆ. ಮುಂದೆಯೂ ಕೂಡ ಕಿತ್ತೂರು ಅಭಿವೃದ್ಧಿಗೆ ಅನುದಾನ ನೀಡಲಾಗುವುದು.

ಇತಿಹಾಸ ಅಧ್ಯಯನ ಕೇಂದ್ರ ಸ್ಥಳಾಂತರ:

ಕಿತ್ತೂರು ಇತಿಹಾಸ ಅಧ್ಯಯನ ಕೇಂದ್ರವನ್ನು ವಿಜಯಪುರದಿಂದ ಬೆಳಗಾವಿಗೆ ಸ್ಥಳಾಂತರಿಸಲಾಗುವುದು. ರಾಣಿ ಚನ್ನಮ್ಮವಿಶ್ವ ವಿದ್ಯಾಲಯವನ್ನು ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಎಂದು ನಾಮಕರಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಸ್ವಾತಂತ್ರ್ಯ ಶ್ರೀ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿ, ಕಿತ್ತೂರು ನಾಡು ಸ್ವಾಭಿಮಾನದ ನಾಡಾಗಿದೆ. ಹೆಣ್ಣು ಮಕ್ಕಳು ಮನೆಯಿಂದ ಹೊರಬರದಂತಹ ಕಾಲದಲ್ಲಿ ರಾಣಿಚನ್ನಮ್ಮ ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದ ಧೀರ ಮಹಿಳೆಯಾಗಿದ್ದಳು.

ರಾಜ್ಯದ ಶ್ರೀಮಂತ ಸಂಸ್ಕೃತಿಗೆ ರಾಣಿ ಚನ್ನಮ್ಮ, ಅಮಟೂರ ಬಾಳಪ್ಪನವರಂತಹ ಅನೇಕ ಸ್ವಾತಂತ್ರ್ಯ ಹೋರಾಟಗಾರರ ಇತಿಹಾಸವನ್ನು ಇಂದಿನ ಮಕ್ಕಳಿಗೆ ಮನವರಿಕೆ ಮಾಡಬೇಕಾಗಿದೆ. ಸ್ವಾತಂತ್ರ್ಯ ಹೊರಾಟದ ಬೆಳ್ಳಿ ಚುಕ್ಕಿ ರಾಣಿ ಚನ್ನಮ್ಮಳ ಆದರ್ಶಗಳನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕು.

ರಾಜ್ಯ ಸರ್ಕಾರವು ಬಡವರ ಶ್ರೇಯೋಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದು ವಿಶೇಷವಾಗಿ ಮಹಿಳೆಯರನ್ನು ಆರ್ಥಿಕವಾಗಿ ಸದೃಢವಾಗಿಸುವ ನಿಟ್ಟಿನಲ್ಲಿ ಗೃಹಲಕ್ಷ್ಮೀ ಯೋಜನೆ ಜಾರಿ ಮಾಡಲಾಗಿದೆ ಎಂದು ನುಡಿದರು.

ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಮಾತನಾಡಿ, ವಿಜಯೋತ್ಸವದ ಉತ್ಸಾಹ ಕೇವಲ ಕಿತ್ತೂರಿಗೆ ಸಿಮಿತವಾಗದೆ ಇಡೀ ವಿಶ್ವಕ್ಕೆ ಪ್ರೇರಣೆಯಾಗಿದೆ. ಕಿತ್ತೂರು ಉತ್ಸವ ಜನರ ಉತ್ಸವಾಗಿದೆ. ಇದು ಕೇವಲ ವಿಜಯೋತ್ಸವವಾಗದೇ ಪ್ರೇರಣಾ ಉತ್ಸವವಾಗಲಿ ಎಂದರು.

ಬ್ರಿಟಿಷ ಅಧಕಾರಿ ಥ್ಯಾಕರೆಯನ್ನು ಬಲಿ ಪಡೆದು ವಿಜಯ ಪತಾಕೆ ಸಾರಿದ ವಿಜಯೋತ್ಸವದ 200 ವರ್ಷಾಚರಣೆ ಆಚರಿಸುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ. ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೊರಾಡುವುದರ ಮೂಲಕ ಇಡೀ ದೇಶಕ್ಕೆ ಸ್ವಾತಂತ್ರ್ಯ ಹೋರಾಟಕ್ಕೆ ಮುನ್ನುಡಿ ಇಟ್ಟಂತಹ ಐತಿಹಾಸಿಕ ಸನ್ನಿವೇಶವಾಗಿದೆ.

ಕಿತ್ತೂರು ಸ್ವಾಭಿಮಾನದ ನಾಡಾಗಿದೆ. ದೇಶ ಸ್ವತಂತ್ರ್ಯಗೊಂಡು 75 ವರ್ಷಗಳು ಕಳೆದಿವೆ. ಆದರೆ ದೇಶಕ್ಕೆ ಅಂಟಿರುವ ಗುಲಾಮಿತನದಿಂದ ಹೊರ ಬರಬೇಕಾಗಿದೆ. ಈ ಕುರಿತು ಜಾಗೃತಿ ಹೊಂದುವುದರ ಮೂಲಕ ಬದಲಾವಣೆಯನ್ನು ತರುವಂತೆ ತಿಳಿಸಿದ ಅವರು, ಉತ್ಸವವನ್ನು ಕೇವಲ ಮನರಂಜನೆಗೆ ಸಿಮಿತಗೊಳಿಸಿದೇ ನಮ್ಮ ಜವಾಬ್ದಾರಿಗಳನ್ನು ಅರಿತು ಕೊಳ್ಳುವಂತೆ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕರಾದ ಬಾಬಾಸಾಹೇಬ ಪಾಟೀಲ ಅವರು, ಕಿತ್ತೂರು ಗಂಡು ಮೆಟ್ಟಿನ ನಾಡಾಗಿದ್ದು, ಇದು ಯಾರಿಗೂ ಬಗ್ಗದೆ ಇರುವಂತಹ ನಾಡಾಗಿದ್ದ ನಮ್ಮಲ್ಲಿ ಸ್ವಾಭಿಮಾನದ ರಕ್ತ ಹರಿಯುತ್ತದೆ.

ಕಿತ್ತೂರು ಕೊಟೆಯ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಲಾಗುತ್ತಿದೆ. ಈ ಕಾರ್ಯವನ್ನು ಕೆಲವೇ ದಿನಗಳಲ್ಲಿ ಕೃತಿ ಮೂಲಕ ಮಾಡಿ ತೋರಿಸಲಾಗುವುದು ಎಂದರು. ಕಿತ್ತೂರು ಚನ್ನಮ್ಮನ ಸಂಶೋಧನೆ ಕೇಂದ್ರವನ್ನು ಕಿತ್ತೂರಿಗೆ ಒದಗಿಸಲು ಕೋರಿಕೆ ಇಟ್ಟ ಅವರು, ವಿಜಯೋತ್ಸವದ 200ನೇ ವರ್ಷದ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ನಮ್ಮೆಲ್ಲರ ಭಾಗ್ಯವಾಗಿದೆ ಎಂದು ನುಡಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಚನ್ನಮ್ಮನ ಕಿತ್ತೂರಿನ ರಾಜಗುರು ಸಂಸ್ಥಾನ ಮಠದ ಮಡಿವಾಳ ರಾಜಯೋಗಿಂದ್ರ ಮಹಾಸ್ವಾಮಿ, ನಿಚ್ಚಣಕಿಂಡು ಶ್ರೀ ಗುರು ಮಡಿವಾಳೇಶ್ವರ ಮಠದ ಪಂಚಾಕ್ಷರಿ ಮಹಾಸ್ವಾಮಿಗಳು, ಬೈಲೂರು ನಿಷ್ಕಲ ಮಂಟಪದ ನಿಜಗುಣಾನಂದ ಸ್ವಾಮಿಜಿಗಳು ಆಶೀರ್ವಚನ ನೀಡಿದರು.

ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಬ್ರಿಟೀಷರ ವಿರುದ್ಧ ಹೋರಾಡಿ ರಾಣಿ ಚನ್ನಮ್ಮನ ಸಾಹಸವನ್ನು ಸ್ಮರಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ರಾಣಿ ಚನ್ನಮ್ಮ ಮುಂಚೂಣಿಯಲ್ಲಿದ್ದರು. ಕಿತ್ತೂರಿನ ಕೋಟೆಯಲ್ಲಿ ಸ್ವಾತಂತ್ರ್ಯ ಹೊರಾಟದ ಕುರುಹುಗಳನ್ನು ನಾವು ಕಾಣಬಹುದಾಗಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ರಾಜು(ಆಸೀಫ್) ಸೇಠ,
ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಜಿ.ಪಂ.ಸಿ.ಇ.ಓ ರಾಹುಲ್ ಶಿಂಧೆ , ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ಎಸ್.ರಾಜೇಂದ್ರ ಕುಮಾರ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಚ್.ಚನ್ನೂರ, ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕಿ ಸೌಮ್ಯ ಗುಳೇದ ಸೇರಿದಂತೆ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು. ಬೈಲಹೊಂಗಲ್ ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪುರ ಸ್ವಾಗತಿಸಿದರು.

ಸ್ಮರಣ ಸಂಚಿಕೆ ಬಿಡುಗಡೆ:

ಇದೇ ಸಂದರ್ಭದಲ್ಲಿ ಸಂತೋಷ ಹಾನಗಲ್ ಸಂಪಾದಕತ್ವದಲ್ಲಿ ರಚಿತ ದಿ ಪೋರ್ಟೆಸ್ ಆಫ್ ಪಿಯರಲೆಸ್ಸ್ ಡ್ರೀಮ್ಸ ಸ್ಮರಣ ಸಂಚಿಕೆಯನ್ನು ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರು ಬಿಡುಗಡೆ ಮಾಡಿದರು.

ರಾಣಿ ಚನ್ನಮ್ಮನ ವಿಜಯೊತ್ಸವದ 200 ನೇ ವರ್ಷದ ಸ್ಮರಣಾರ್ಥವಾಗಿ ಕಿತ್ತೂರು ರಾಣಿ ಚನ್ನಮ್ಮನ ಅಂಚೆ ಚೀಟಿ, ಶಾಶ್ವತ ಅಂಚೆ ರದ್ಧತಿ ಹಾಗೂ ವಿವಿಧ ಗ್ರಂಥಗಳನ್ನು ಬಿಡುಗಡೆ ಮಾಡಲಾಯಿತು.



# ಕಿತ್ತೂರು ಚನ್ನಮ್ಮ ದೇಶಾಭಿಮಾನದ ಸಂಕೇತ: ಗಿರೀಶ ಸ್ವಾದಿ



**ರಬಕವಿ-ಬನಹಟ್ಟಿ:** ವೀರರಾಣಿ ಕಿತ್ತೂರ ಚನ್ನಮ್ಮ ದೇಶಾಭಿಮಾನದ ಸಂಕೇತವಾಗಿದ್ದಾರೆ. ಇಂಗ್ಲಿಷ್ರ ವಿರುದ್ಧ ಹೋರಾಡಿದ ದಿಟ್ಟ ಮಹಿಳೆಯಾಗಿದ್ಧಾರೆ ತಾಯಿ ನೆಲದ ರಕ್ಷಣೆಗಾಗಿ ಅವರ ದಿಟ್ಟತನದ ಹೋರಾಟ ನಮಗೆಲ್ಲ ಮಾದರಿಯಾ ಗಿದೆ ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಅವರು ಬುಧವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಕಿತ್ತೂರ ಚನ್ನಮ್ಮರ ಜಯಂಂ-ಯುತ್ಸವದ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಕಿತ್ತೂರ ಚನ್ನಮ್ಮರ ಮತ್ತು ಭಾರತೀಯ ಸ್ವಾತಂತ್ರ್ಯ ಹೋರಾ ಟಗಾರರ ಮತ್ತು ಹೋರಾಟದ ಮಹತ್ವವನ್ನು ಇಂದಿನ ನಮ್ಮ ಯುವ ಕರಿಗೆ ತಿಳಿ ಹೇಳಬೇಕು. ದೇಶಕ್ಕಾಗಿ ಪ್ರತಿಯೊಬ್ಬರು ಸೇವೆ ಸಲ್ಲಿಸಬೇಕು ಎಂದು ತಹಶೀಲ್ದಾರ್ ಸ್ವಾದಿ ತಿಳಿಸಿದರು. ಶಿರಸ್ತೆದಾರ ಆರ್.ಎಸ್ ಸಾತಿಹಾಳ, ಶಿಕ್ಷಣ ಸಂಯೋಜಕ ಬಿ.ಎಂ. ಹಳೆಮನಿ, ಸಿದ್ದನಗೌಡ ಪಾಟೀಲ, ಶ್ರೀಶೈಲ ದಲಾಲ, ಧರೆಪ್ಪ ಉಳ್ಳಾಗಡ್ಡಿ, ಬಾಬಾಗೌಡ ಪಾಟೀಲ, ರಾಮಪ್ಪ ಹಂದಿಗುಂದ, ಸಿದ್ದು ಗೌಡಪ್ಪನವರ, ಲಕ್ಕಪ್ಪ ಪಾಟೀಲ, ಗೌರಿ ಮಿಳ್ಳಿ, ಪವಿತ್ರಾ ತುಕ್ಕನ್ನವರ, ಮಹಾದೇವ ದೂಪದಾಳ, ಜಯ ವಂತ ಮಿಳ್ಳಿ, ಸಿದ್ದು ಪಾಟೀಲ, ಆರ್.ಕೆ.ಪಾಟೀಲ. ಪಿ.ಜಿ.ಪಾಟೀಲ, ಚೇತನ ಭಜಂತ್ರಿ, ರವಿ ಈಟಿ ಇದ್ದರು.

## ಚನ್ನಮ್ಮನ ಆದರ್ಶ ಅಳವಡಿಸಿಕೊಳ್ಳಿ

**ರಬಕವಿ-ಬನಹಟ್ಟಿ:** ಇಂದಿನ ಯುವಕರು ಚನ್ನಮ್ಮರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ದೇಶಕ್ಕೆ ಸೇವೆಯನ್ನು ಸಲ್ಲಿಸಲು ಮುಂದಾಗಬೇಕು. ಪ್ರತಿಯೊಬ್ಬರು ರಾಷ್ಟ್ರಾಭಿಮಾನವನ್ನು ಬೆಳೆಸಿಕೊಳ್ಳಬೇಕು ಎಂದು ಸ್ಥಳೀಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯ ಚೇತನ ಡಾಗಾ ತಿಳಿಸಿದರು. ಅವರು ಬುಧವಾರ ರಬಕವಿ ಬನಹಟ್ಟಿ ಸರ್ಕಾರಿ ಪ್ರಥ-ಮ ದರ್ಜೆ ಕಾಲೇಜಿನಲ್ಲಿ ವೀರರಾಣಿ ಕಿತ್ತೂರ ಚನ್ನಮ್ಮರ ಜಯಂಯುತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಭಾರತೀಯ ಸ್ವಾತಂತ್ರ್ಯ ಹೋರಾಟದ ಇತಿಹಾಸದ ಮಹತ್ವವನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಸತತ ಹೋರಾಟದಿಂದ ಭಾರತ



ಸ್ವಾತಂತ್ರ್ಯಗೊಂಡು ಇಂದು ವಿಶ್ವದ ಶ್ರೇಷ್ಠ ಶ್ರೇಷ್ಠವಾಗಿದೆ. ಮುಂದಿನ ದಿನಗಳಲ್ಲಿ ಭಾರತವನ್ನು ವಿಶ್ವ ಶ್ರೇಷ್ಠವಾಗಿಸುವ ನಿಟ್ಟಿನಲ್ಲಿ ಯುವಕರ ಪಾತ್ರ ಬಹಳಷ್ಟು ಮುಖ್ಯವಾಗಿದೆ ಎಂದು ಚೇತನ ಡಾಗಾ ತಿಳಿಸಿದರು.

ಎಸ್.ಆರ್, ಹಂದಿಗುಂದ, ಮಹಾಂತೇಶ ರೆಡ್ಡಿರಟ್ಟಿ, ಮಹಾದೇವ ಪೋತರಾಜ, ದೀಪಾ ಜಹಗೀರದಾರ, ತನುಜಾ ಪಾಟೀಲ, ಸಂಗಮೇಶ ಗುಟ್ಲಿ, ಚೇತನ ಚೋಪಡೆ, ವಿಜಯ ಕಾಬರಾ, ರಮೇಶ ಮಾಗುರಿ, ಪ್ರಕಾಶ ಅಂಬಲಿ, ಸೋಮು ನಿಂಗನೂರ, ವಿನೋದ ಘಟ್ಟೆ, ಪದ್ಮಾವತಿ ತುಂಬರಮಟ್ಟಿ, ಅಂಜನಾದೇವಿ ರಾಠೋಢ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ರಾಣಿ ಚೆನ್ನಮ್ಮನ ಪುತ್ಥಳಿಗೆ ಪುಷ್ಪಾರ್ಚನೆ




**ಮೂಡಲಗಿ:** ಕರ್ನಾಟಕದ ಹೆಮ್ಮೆಯ ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟೀಷರ ವಿರುದ್ಧ ನಡೆಸಿದ 1824ರ ಸ್ವಾತಂತ್ರ್ಯ ಸಂಗ್ರಾಮದ 200ನೇ ವರ್ಷದ ವಿಜಯೋತ್ಸವದ ಅಂಗವಾಗಿ ದೆಹಲಿಯ ಸಂಸತ ಭವನದ ಆವರಣದಲ್ಲಿ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ರಾಣಿ ಚೆನ್ನಮ್ಮನ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು.ಲೋಕಸಭೆಯ ಸಭಾಪತಿಗಳಾದ ಓಂ ಬಿರ್ಲಾ, ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ, ರೈಲ್ವೆ ಇಲಾಖೆ ರಾಜ್ಯ ಸಚಿವ ವಿ. ಸೋಮಣ್ಣ, ಕೂಡಲಸಂಗಮ ಪೀಠದ ಬಸವಜಯ ಮೃತ್ಯುಂ-ಜಯ ಸ್ವಾಮೀಜಿ, ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿ, ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ , ಅರವಿಂದ ಬೆಲ್ಲದ ಸೇರಿದಂತೆ ದೆಹಲಿ ಕರ್ನಾಟಕ ಸಂಘದ ಪ್ರಮುಖರು ಹಾಗೂ ಚೆನ್ನಮ್ಮನ ಅಭಿಮಾಗಳು ಉಪಸ್ಥಿತರಿದ್ದರು.

**ಚೂರು-ಪಾರು**

### ಪಡಿತರ ಚೀಟಿದಾರರು ಆಂತಕಪಡುವ ಅಗತ್ಯವಿಲ್ಲ

**ಧಾರವಾಡ:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಅರ್ಹ ಬಿಪಿಎಲ್ ಕಾರ್ಡುದಾರರಿಗೆ ಆಹಾರಧಾನ್ಯವನ್ನು ಉಚಿತವಾಗಿ ವಿತ-ರಿಸಲಾಗುತ್ತಿದೆ. ಪಡಿತರ ವಿತರಣೆ ಕಾರ್ಯವನ್ನು ಈ ಹಿಂದೆ ಎನ್‌ಐಸಿ ತಂತ್ರಾಂಶದಿಂದ ನಿರ್ವಹಿಸಲಾಗುತ್ತಿತ್ತು.ರಾಜ್ಯಾದ್ಯಂತ ಅಕ್ಟೋಬರ ಮಾಹೆಯಿಂದ ಎನ್‌ಐಸಿ ತಂತ್ರಾಂಶದಿಂದ ಬೇರ್ಪಡಿಸಿ ಕರ್ನಾಟಕ ಸ್ಟೇಟ್ ಡೆಟಾ ಸೆಂಟರ್ (ಕೆಎಸ್‌ಡಿಸಿ) ನಿಂದ ಪಡಿತರ ವಿತರಣೆ ಕಾರ್ಯವನ್ನು ನಿರ್ವಹಿಸುತ್ತಿರುವುದರಿಂದ ಸರ್ವರ್ ನಿಧಾನಗತಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಸರ್ವರ್ ತೀವ್ರಗತಿಯಲ್ಲಿ ಕಾರ್ಯನಿರ್ವಹಿಸುವ ಬಗ್ಗೆ ಈಗಾಗಲೇ ಕೇಂದ್ರ ಕಛೇರಿಯ ಗಮನಕ್ಕೆ ತರಲಾಗಿದ್ದು, ಕಾರ್ಡುದಾರರು ಆಂತಕಪಡುವ ಅಗತ್ಯವಿಲ್ಲ.ಅಕ್ಟೋಬರ-2024ನೇ ಮಾಹೆಯ ಪಡಿತರ ವಿತರಣೆಯನ್ನು ನಿಗದಿತ ಅವಧಿಯೊಳಗಾಗಿ ಕಾರ್ಡುದಾರರಿಗೆ ವಿತರಿಸಲಾಗುವದು. ಆದ್ದರಿಂದ ಕಾರ್ಡುದಾರರು ಆತಂಕಕ್ಕೆ ಒಳಗಾಗಬಾರದೆಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಚನ್ನಬಸಪ್ಪ ಕೊಡ್ಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಸ್ತಿಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆ



ಗೋಕಾಕ: ನಗರದ ಕೆಎಲ್‌ಇ ಸಿ ಎಸ್ ಅಂಗಡಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ಸುಹಾಸ ಕಾಪಸಿ ಇತನು ಪದವಿ ಪೂರ್ವ ಇಲಾಖೆಯು ಚಿಕ್ಕಬಳ್ಳಾಪೂರದಲ್ಲಿ ಹಮ್ಮಿಕೊಂಡ ರಾಜ್ಯ ಮಟ್ಟದ ಬೇಲ್ಟ ಕುಸ್ತಿ ಪಂದ್ಯಾವಳಿಯಲ್ಲಿ ಬಂಗಾರದ ಪದಕ ಗೆಲ್ಲುವದರ ಮೂಲಕ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.ವಿದ್ಯಾರ್ಥಿಯ ಈ ಸಾಧನೆಯನ್ನು ಕೆಎಲ್‌ಇ ನಿರ್ದೇಶಕ ಜಯಾನಂದ ಮುನವಳ್ಳಿ, ಸ್ಥಾನಿಕ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಎಮ್ ಡಿ ಚುನಮರಿ ಹಾಗೂ ಸರ್ವಸದಸ್ಯರು ಮಹಾವಿದ್ಯಾಲಯ ಆಡಳಿತಾಧಿಕಾರಿ, ಪ್ರಾಚಾರ್ಯರು, ದೈಹಿಕ ಮಾರ್ಗದರ್ಶಕರು ಹಾಗೂ ಸಿಬ್ಬಂಧಿ ಅಭಿನಂಧಿಸಿದ್ದಾರೆ.

### ರಾಜ್ಯೋತ್ಸವ ನಿಮಿತ್ತ: ಕನ್ನಡ ಪರ ಸಂಘಟನೆಗಳ ತುರ್ತು ಸಭೆ

**ಗೋಕಾಕ:** ಬರುವ ನವೆಂಬರ 1 ರಂದು ಜರುಗುವ ಕರ್ನಾಟಕ ರಾಜ್ಯೋತ್ಸವ ನಿಮಿತ್ಯವಾಗಿ ಗೋಕಾಕ ತಾಲೂಕಾ ದಂಡಧಿಕಾರಿಗಳು 14-10-2024 ರಂದು ಪೂರ್ವಭಾವಿ ಸಭೆಯನ್ನು ಕರೆದಿದ್ದು ಸಭೆಯಲ್ಲಿ ಒಂದೆರಡು ಕನ್ನಡ ಸಂಘಟನೆಗಳನ್ನು ಕರೆದು ಸಭೆ ಕರೆದು ಉಳಿದ ಕನ್ನಡ ಪರ ಸಂಘಟನೆಗಳಿಗೆ ತಾರತಮ್ಯ ಅಗಿದ್ದು. ಪತ್ರಿಕಾ ಪ್ರಕಟಣೆಯನ್ನು ನೀಡಿಲ್ಲ. ಆದ್ದರಿಂದ ತಹಶೀಲ್ದಾರ ಅವರು ಆದ ತಪ್ಪು ಸರಿಪಡಿಸಿ ಮತ್ತೊಮ್ಮೆ ಎಲ್ಲ ಸಂಘಟನೆಗೆ, ಕಲಾವಿದರಿಗೆ, ಕನ್ನಡ ಅಭಿಮಾನಿಗಳಿಗೆ ನ್ಯಾಯ ಒದಗಿಸುವ ಕಾರ್ಯ ಮಾಡಬೇಕು ಇಲ್ಲದಿದ್ದರೆ 14 ಸಂಘಟನೆಗಳ ಪಧಧಿಕಾರಿಗಳು, ಸದಸ್ಯರು ಇದೆ 24 ರಂದು ಬೆಳಗಾವಿ ಜಿಲ್ಲಾಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಮನವಿ ಮಾಡಲಾಗುವದೆಂದು ಗೋಕಾಕ ಪ್ರವಾಸಿ ಮಂದಿರದಲ್ಲಿ 14 ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಸದಸ್ಯರು ಪಾಲ್ಗೊಂಡಿದ್ದರು.

# ತೀರ್ಥಂಕರ ಮೋಕ್ಷ ಕ್ಷೇತ್ರಕ್ಕೆ ಸೈಕಲ್ ಸವಾರಿ

## 10 ದಿನಗಳಲ್ಲಿ 2 ಸಾವಿರ ಕಿ.ಮೀ. ಸೈಕಲ್ ಪ್ರಯಾಣ

**ರಬಕವಿ-ಬನಹಟ್ಟಿ:** ರಬಕವಿಯ ಹೆಸರಾಂತ ವೈದ್ಯರಾದ ಡಾ. ಪದ್ಮಜೀತ ನಾಡಗೌಡ ಪಾಟೀಲ, ಡಾ. ಯತೀಶ ಎಂ. ಪೂಜಾರ, ಡಾ. ಸತೀಶ ಬಾಗೇವಾಡಿ ಹಾಗು ಸಂಜಯ ಅಮ್ಮಣಗಿ ಸಾಮೂಹಿಕವಾಗಿ ಕೇವಲ 10 ದಿನಗಳಲ್ಲಿ ರಬಕವಿಯಿಂದ ವಾರಣಾಸಿ ಮಾರ್ಗವಾಗಿ ಶಿಖರ್ಜಿಗೆ ಯಶಸ್ವಿಯಾಗಿ ತೆರಳಿ ಭಕ್ತಿ ಪಾರಾಕಾಷ್ಠೆ ಮೆರೆಯುವಲ್ಲಿ ಕಾರಣರಾದರು.

ಕಳೆದ ಅ.14 ರಂದು ರಬಕವಿಯಿಂದ ತೆರಳಿದ ಇವರು ಅ.23ರಂದು ಶಿಖರ್ಜಿ ತಲುಪಿದ್ದಾರೆ. ಡಾ. ನಾಡಗೌಡ ಪಾಟೀಲ ಮಾತನಾಡಿ, ಅಥಣಿ ತಾಲೂಕಿನ ಸಪ್ತಸಾಗರದಲ್ಲಿರುವ ಕಾಶಿ ವಿಶ್ವೇಶ್ವರ ದೇವಾಲಯದ ಭಕ್ತಿಯೊಂದಿಗೆ ಕಾಶಿವರೆಗೆ ಸೈಕಲ್ ಮೇಲೆ ತೆರಳುವಲ್ಲಿ ಕಾರಣವಾಗಿದೆ.

ಅದರಂತೆ ಜೈನ್ ಧರ್ಮದ 20 ತೀಥಂಖರರು ಸಿದ್ಧ ಭಗವಾನರಾಗಿ ಮೋಕ್ಷ ಪಡೆದ ಸ್ಥಳಕ್ಕೆ ಭೆಟ್ಟಿ ನೀಡಿ ದರ್ಶನ ಪಡೆಯುವ ಉದ್ದೇಶದಿಂದ ಸೈಕಲ್ ಮೇಲೆ ಸಂಚಾರ ನಡೆಸಬೇಕೆಂಬ ಉದ್ದೇಶವಿತ್ತು ಎಂದರು.

45 ರಿಂದ 50 ವರ್ಷದೊಳಗಿನವರಾಗಿದ್ದ ಸೈಕಲ್ ಸವಾರರಲ್ಲಿ ಡಾ. ಯತೀಶ ಪೂಜಾರ ಅವರಿಗೆ 60 ವರ್ಷಗಳಾದರೂ ಅತಿ ಹುಮ್ಮಸ್ಸಿನಿಂದ ಸೈಕಲ್ ಸವಾರಿ ಮಾಡಿರುವದು ವಿಶೇಷ.




ರಬಕವಿಯಿಂದ ಜಾರ್ಖಂಡ್ ರಾಜ್ಯ ಶಿಖರ್ಜಿಗೆ 10 ದಿನಗಳಲ್ಲಿ ಸೈಕಲ್ ಮೇಲೆ ಪ್ರವಾಸ ಕೈಗೊಂಡ ವೈದ್ಯರ ತಂಡ.

> **ಯಾವದೇ ದಾಖಲೆ, ಸಂದೇಶಕ್ಕಾಗಿ ಸೈಕಲ್ ಸವಾರಿಯಲ್ಲ. ದಿನಂಪ್ರತಿ ಸೈಕಲ್ ತುಳಿಯುವ ಅಭ್ಯಾಸ. ಅದರಂತೆ ದೂರದ ನಗರಗಳಿಗೂ ಸೈಕಲ್ ಮೂಲಕ ತೆರಳಬೇಕೆಂಬ ಹುಮ್ಮಸ್ಸು ನಮ್ಮದಾಗಿದೆ. ಆರೋಗ್ಯದ ಜೊತೆಗೆ ನೆಮ್ಮದಿಯ ಬದುಕು ನಿರ್ಮಾಣಕ್ಕೆ ಸೈಕಲ್ ಪ್ರಯಾಣವೂ ಒಂದು ಎಂಬ ಅಭಿಪ್ರಾಯ.**
> -ಡಾ.ಪದ್ಮಜೀತ ನಾಡಗೌಡ ಪಾಟೀಲ ಸೈಕಲ್ ಸವಾರ

# ತಾಯಿಗಾಗಿ ಕಾದು ಕುಳಿತ ನಾಯಿಮರಿ


## ಎರಡು ವಾರವಾದಿಂದ ತಾಯಿಯ ಕಳೆಬರಹ ಬದಿಯಲ್ಲೇ ಕುಳಿತ ಮರಿಶ್ವಾನ

**ಸಿದ್ದಯ್ಯ ಹಿರೇಮಠ**

**ಮೋಳೆ:** ನಾಯಿ ನಂಬಿಕೆ ಮತ್ತು ವಿಶ್ವಾಸಕ್ಕೆ ಹೆಸರಾದ ಪ್ರಾಣಿ. ನಾಯಿಗೆ ಇರೊ ನಿಯತ್ತು ಮನುಷ್ಯನಿಗೆ ಇಲ್ಲ ನೋಡ್ರಿ...! ಹಿಂದಿನಿಂದ ಬಂದಂತಹ ಈ ರೂಢಿಯ ಮಾತು ಯಾವತ್ತಿದ್ರೂ ಸತ್ಯ ಎನ್ನುವಂತೆ ಶ್ವಾನಗಳು ನಡೆದುಕೊಳ್ಳುವುದನ್ನು ಆಗಾಗ ನೋಡುತ್ತ, ಕೇಳುತ್ತ ಇರುತ್ತೇವೆ.

ಈಗ ಇಂಥದ್ದೇ ಒಂದು ಮನಕಲಕುವ ಘಟನೆ ನಡೆದಿದ್ದು ನೋಡವವರ ಮನ ಮರುಕಪಡುವಂತೆ ಮಾಡುತ್ತಿದೆ. ಹೌದು, ಅಥಣಿ ತಾಲೂಕಿನ ಬಳ್ಳಿಗೇರಿ ಗ್ರಾಮದ ಸನದಿ ತೋಟದ ಬಳಿ ಎರಡು ವಾರಗಳ ಹಿಂದೆ ಬೀದಿ ನಾಯಿಯೊಂದು ಅನಾರೋಗ್ಯದಿಂದಲೋ ಅಥವಾ ಮತ್ಯಾವ ಕಾರಣದಿಂದಲೋ ಮೃತಪಟ್ಟಿದ್ದು, ಬಸವೇಶ್ವರ ಏತ ನೀರಾವರಿ ಕಾಲುವೆಯಲ್ಲಿ ಅದರ ಶವ ಬಿದ್ದಿದೆ.

ಅದು ಸತ್ತು ಎರಡು ವಾರ ಕಳೆದಿದ್ದು, ನಾಯಿಯ ಶವ ಸಂಪೂರ್ಣ ಕೊಳೆತು ಈಗ ಅದರ ಅಸ್ತಿ ಪಂಜರ ಮಾತ್ರ ಉಳಿದಿದೆ. ಆದರೆ, ಈ ಮೃತಪಟ್ಟ ನಾಯಿಯ ಮರಿ ಮಾತ್ರ ತನ್ನ ತಾಯಿಯ ಬರುವಿಕೆಗಾಗಿ ಕಾದು ಕುಳಿತಿದೆ. ಎರಡು ವಾರ ಕಳೆದರೂ ಈ ಜಾಗವನ್ನು ಬಿಟ್ಟು ಎಲ್ಲಿಯೂ ಕದಲುತ್ತಿಲ್ಲ. ಒಮ್ಮೊಮ್ಮೆ ಹೊರಗಡೆ



ಹೋಗಿ ಬಂದರೂ ಮತ್ತೆ ರಾತ್ರಿ ಇಲ್ಲಿಗೇ ಮರಳಿ ಬರುತ್ತಿದೆ. ಸತ್ತಿರುವ ತನ್ನ ತಾಯಿಗಾಗಿ ನಿತ್ಯವೂ ಕಣ್ಣೀರು ಸುರಿಸುತ್ತಿದೆ. ಈ ತಾಯಿ ಮತ್ತು ಮಗುವಿನ ಕರುಳ ಬಳ್ಳಿಯ ಸಂಬಂಧ ಎಂಥದ್ದು ಎನ್ನುವುದು ಈ ದೃಶ್ಯಾವಳಿ ನಿರೂಪಿಸುತ್ತಿದೆ. ಇದರ ಮೂಕ ರೋಧನೆ ಕಂಡು ನೋಡುವವರ ಮನದಲ್ಲಿ ಮರುಕ ಹುಟ್ಟಿಸಿದೆ.ಜನಮನ ಮಿಡಿಯುವ ದೃಶ್ಯ: ನಾಯಿಗಿರುವ ನಿಯತ್ತು ಮನುಷ್ಯನಿಗೆ ಇಲ್ಲ ನೋಡ್ರಿ ಎನ್ನುವ ರೂಢಿಯ ಮಾತು ಈ ಘಟನೆಯನ್ನು ನೋಡಿದ್ರೆ ಖರೆ ಅನಿಸುತ್ತಿದೆ ನೋಡ್ರಿ.. ಮನುಷ್ಯರೇ ತಮ್ಮವರು ಯಾರಾದರೂ ತೀರಿಕೊಂಡರೆ ಒಂದೆರಡು ದಿನದಲ್ಲಿ ತಮ್ಮ ದುಖ ನೋವು ಮರೆತು ತಮ್ಮ ಕೆಲಸ ಕಾರ್ಯಗಳಲ್ಲಿ ತೊಡಗುತ್ತಾರೆ. ಹೆತ್ತವರು ತೀರಿಕೊಂಡಾಗ ಅಂತ್ಯಕ್ರಿಯೆಗೂ ಬಾರದಂತಹ ಮಕ್ಕಳ ಘಟನೆಗಳ ಸುದ್ದಿಗಳನ್ನು ನೋಡುತ್ತಿದ್ದೇವೆ. ಆದರೆ, ಇಂತಹ ದಿನಮಾನಗಳಲ್ಲಿ ಸತ್ತ ತನ್ನ ತಾಯಿಗಾಗಿ ಎರಡು ವಾರದಿಂದ ಮರಿಯು ಶವದ ಪಕ್ಕದಲ್ಲಿಯೇ ಕುಳಿತು ಕಂಬನಿ ಮಿಡಿಯುತ್ತಿದೆ. ಇದು ನೋಡುವವರ ಮನ ಕಲಕುವಂತೆ ಮಾಡಿದೆ ಎಂದರೆ ತಪ್ಪಾಗಲಾರದು.

# ಲಸಿಕಾ ಅಭಿಯಾನಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ



**ಬೆಳಗಾವಿ:** ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಮತ್ತು ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ಸಹಯೋಗದಲ್ಲಿ 6 ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಂಗಳವಾರ ಚಾಲನೆ ನೀಡಿದರು.

ರೈತರಿಗೆ ಆರ್ಥಿಕ ಸಂಕಷ್ಟ ಉಂಟು ಮಾಡುವ ಕಾಲುಬಾಯಿ ರೋಗದಿಂದ ರಾಜ್ಯವನ್ನು ಮುಕ್ತ ಮಾಡುವ ಉದ್ದೇಶದಿಂದ ಹಮ್ಮಿಕೊಂಡಿರುವ ಈ ಅಭಿಯಾನ ಯಶಸ್ವಿಯಾಗಲಿ ಎಂದು ಹಾರೈಸಿದ ಸಚಿವರು, ಪರಿಣಾಮಕಾ-ರಿಯಾಗಿ ಅನುಷ್ಠಾನ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಪಶುಪಾಲನಾ ಮತ್ತು ವೈದ್ಯಕೀಯ ಇಲಾಖೆಯ ಉಪ ನಿರ್ದೇಶಕರಾದ ಡಾ.ರಾಜು ಎನ್ ಕೂಲರ್, ಬೆಳಗಾವಿಯ ಮುಖ್ಯ ಪಶು ವೈದ್ಯಾಧಿಕಾರಿ ಡಾ.ರೆಹಮತ್ತುಲ್ಲಾ, ಮುಖ್ಯ ಪಶು ವೈದ್ಯಾಧಿಕಾರಿ (ಆಡಳಿತ) ಡಾ.ಆನಂದ ಪಾಟೀಲ, ಉಚಗಾಂವ ಗ್ರಾಮದ ಮುಖ್ಯ ಪಶು ವೈದ್ಯಾಧಿಕಾರಿ ಡಾ.ದೀಪಕ್ ಯಲಿಗಾರ್, ಅಂಬೇವಾಡಿ ಗ್ರಾಮದ ಮುಖ್ಯ ಪಶು ವೈದ್ಯಾಧಿಕಾರಿ ಡಾ.ಪ್ರತಾಪ್ ಹನೂರಕರ್ ಉಪಸ್ಥಿತರಿದ್ದರು.

## ಚನ್ನಮ್ಮ ಪ್ರಥಮ ಮಹಿಳಾ ಆಡಳಿತಗಾರ್ತಿ

**ಗೋಕಾಕ:** ಕಿತ್ತೂರಿನ ರಾಣಿ ಚೆನ್ನಮ್ಮನವರು ಬ್ರಿಟಿಷರ ವಿರುದ್ಧ ದಂಗೆಯೆದ್ದ ಮೊದಲ ಮಹಿಳಾ ಆಡಳಿತಗಾರರಲ್ಲಿ ಒಬ್ಬರು. ಅವರ ಶೌರ್ಯ ಪರಾಕ್ರಮ ಮಹಿಳೆಯರಿಗೆ ಮಾದರಿಯಾಗಿದೆ ಎಂದು ಕಾರ್ಮಿಕ ಮುಖಂಡ ಅಂಬಿರಾವ ಪಾಟೀಲ ಹೇಳಿದರು.

ಅವರು, ನಗರದ ಶಾಸಕ ರಮೇಶ ಜಾರಕಿಹೊಳಿ ಅವರ ಗೃಹಕಚೇರಿಯಲ್ಲಿ ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದಿಂದ ಹಮ್ಮಿಕೊಂಡ ಕಿತ್ತೂರ ರಾಣಿ ಚೆನ್ನಮ್ಮ ಜಯಂತೋತ್ಸವ ಮತ್ತು 200ನೇ ಕಿತ್ತೂರು ವಿಜಯೋತ್ಸವ ಕಾರ್ಯಕ್ರಮ ಅಂಗವಾಗಿ ರಾಣಿ ಚೆನ್ನಮ್ಮನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.ಕರುನಾಡಿನ ವೀರ ಮಹಿಳೆಯರಲ್ಲಿ ಅಗ್ರಪಂಕ್ತಿಗೆ ಸೇರಿರುವ ಸ್ವಾತಂತ್ರ್ಯ ಸ್ವಾಭಿಮಾನಿಗಳ ಸಾಕಾರಮೂರ್ತಿ ಕಿತ್ತೂರಿನ ರಾಣಿ ಚೆನ್ನಮ್ಮ ತನ್ನ ಪುಟ್ಟ ರಾಜ್ಯದ ಸ್ವಾತಂತ್ರ್ಯ ರಕ್ಷಣೆಗಾಗಿ ಹೋರಾಟ ನಡೆಸಿದ ಧೀರ ಮಹಿಳೆಯಾಗಿದ್ದಾರೆ ಎಂದರು.

ಬಿಜೆಪಿ ಓಬಿಸಿ ಮೋರ್ಚಾ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಸಿ, ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಮುಖಂಡರಾದ ಸುರೇಶ ಸನದಿ, ಪದಾಧಿಕಾರಿಗಳಾದ ಬಸವರಾಜ ಹಿರೇಮಠ, ರಾಜೇಶ್ವರಿ ಒಡೆಯರ, ವಿರೇಂದ್ರ ಎಕ್ಕೇರಿಮಠ, ಸುರೇಶ ಪತ್ತಾರ, ನಗರಸಭೆ ಸದಸ್ಯ ಬಸವರಾಜ ಆರೇನ್ನವರ, ಶಿವಪ್ಪ ಗುಡ್ಡಾಕಾಯು ಸೇರಿದಂತೆ ಬಿಜೆಪಿ ಪದಾಧಿಕಾರಿಗಳಿ, ಜನಪ್ರತಿನಿಧಿಗಳು ಇದ್ದರು.



# ಚನ್ನಮ್ಮನ ದೇಶಪ್ರೇಮ ಅನುಕರಣೀಯ

**ಮುದ್ದೇಬಿಹಾಳ;** ಸೂರ್ಯ ಮುಳುಗದ ಸಾಮ್ರಾಜ್ಯವೆಂದು ಸೊಕ್ಕಿನಿಂದ ಮೆರೆಯು ತ್ತಿದ್ದ ಬ್ರಿಟಿಷರಿಗೆ ಮೊಟ್ಟ ಮೊದಲ ಸೋಲಿನ ರುಚಿ ತೋ-ರಿಸಿದ ವೀರರಾಣಿ ಕಿತ್ತೂರು ಚೆನ್ನಮ್ಮ ಅವರನ್ನು ಒಂದು ಜಾತಿ ವರ್ಗಕ್ಕೆ ಸೀಮಿತ ಮಾಡದೆ ಅವರ ತತ್ವ ಆದ-ರ್ಶ ದೇಶಪ್ರೇಮವನ್ನು ಜೀವನದಲ್ಲಿ ಅಳವಡಿಸಿಕೊಳ್ಳಣವೆಂದು ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಹೇಳಿದರು

ಕಲ್ಯಾಣ ಕರ್ನಾಟಕ ಸಾರಿಗೆ ಘಟಕದಲ್ಲಿ ಸತತ 7 ನೇ ವರ್ಷದಿಂದ ರಾಷ್ಟ್ರಮಾತೆ ಕಿತ್ತೂರ ಚೆನ್ನಮ್ಮ ಜಯಂತೋತ್ಸವ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು ಬರುವ ವರ್ಷ ಎಲ್ಲಾ ದಾರ್ಶನಿಕರ ಶರಣ-ರ ಜಯಂತೋತ್ಸವವನ್ನು ಎಲ್ಲಾ ವರ್ಗದ ಜನರು ಸೇರಿ ಆಚ-ರಿಸೋಣವೆಂದರು.

ಬ್ರಿಟಿಷರ ಅನ್ಯಾಯದ ವಿರುದ್ಧ ಏಕಾಂಗಿಯಾಗಿ ಹೋರಾಡಿದ ದಿಟ್ಟ ಮಹಿಳೆ. ಜಾತಿ, ಮನೆತನಕ್ಕಾಗಿ ಹೋರಾಟ ಮಾಡದೇ ಜನತೆಯ ರಕ್ಷಣೆಗಾಗಿ, ಸ್ವಾತಂತ್ರಕ್ಕಾಗಿ ಪಣ-ತೊಟ್ಟು ಹೋರಾಡಿದ ಸ್ತ್ರೀ ರತ್ನ



ಅವರನ್ನು ಯಾವುದೇ ಒಂದು ವರ್ಗಕ್ಕೆ ಸೀಮಿತಗೊಳಸಿಬಾರದು ಎಂದು ಉದಯಸಿಂಗ್ ರಾಯಚೂರು ಹೇಳಿದರು.

ವಿಶೇಷ ಉಪನ್ಯಾಸ ಬಾಪುಗೌಡ ಪಾಟೀಲ್ ನೀಡಿದರು ಈ ವೇಳೆ ಕಾಶಿಬಾಯಿ ರಾಂಪೂರ ಶಿವಶಂಕರಗೌಡ ಹಿರೇಗೌಡರ, ನಾಗರಾಳ ಸರ್ ಕ್ರೈಂ ಪಿಎಸೈ ಎಸ್ ಎಲ್ ಮನ್ನಾಬಾಯಿ ವೈ ಹೆಚ್ ವಿಜಯಕರ ಮಾತನಾಡಿದರು.

ಸಾರಿಗೆ ಘಟಕ ವ್ಯವಸ್ಥಾಪ ಎ ಹೆಚ್ ಮದಭಾವಿ ಮಾತನಾಡಿ, ಮುದ್ದೇಬಿಹಾಳ ಸಾರಿಗೆ ಘಟಕದಿಂದ ನೂತನ ಡಿಎಸ್ 6 ಲೈ ಲ್ಯಾಂಡ್ ಬಸ್ ಗಳು ಮುದ್ದೇಬಿಹಾಳ ಪಟ್ಟಣದಿಂದ ವಿವಿಧ ವಾಣಿಜ್ಯ ನಗರಗಳಿಗೆ ಸಂಚರಸಲಿವೆ ಮತ್ತು ಮುದ್ದೇಬಿಹಾಳ ಪಟ್ಟಣದ ಬಡಾವಣೆಗಳಿಗೆ ಸಹ ಸಿಟಿ ಬಸ್ ಸೌಲಭ್ಯ ನೀಡಲಾಗುತ್ತದೆ ವಿಜಯಪುರ ಜಿಲ್ಲೆಯಲ್ಲಿ ನಮ್ಮ ಡಿಪೋ ನಂಬರ್ 1 ಸ್ಥಾನದಲ್ಲಿ ಇದೆ ಎಂದರು .

ತಾಲೂಕ ಅಧ್ಯಕ್ಷ ಅಂಬ-ರೀಶ್ ಗೂಳಿ ಮುಖಂಡರಾದ ಕಲ್ಲಣ್ಣ ಪ್ಯಾಟಿ, ಬಸಲಿಂಗಪ್ಪ ರಕ್ಕಸಗಿ, ಶ್ರೀಶೈಲ್ ದೂಡಮನಿ, ಗುರುಲಿಂಗಪ್ಪ ಸುಲ್ಲೂಳ್ಳಿ, ಶರಣಗೌಡ ಬೂದಿಹಾಳ, ಗುರಲಿಂಗಪ್ಪಗೌಡ ಪಾಟೀಲ್, ದಾನಪ್ಪ ಅಂಗಡಿ, ಕುಮಾರ್ ಸೂಳಿಬಾವಿ ಸೇರಿದಂತೆ ಸಾರಿಗೆ ಘಟಕದ ನೌಕರರು ಭಾಗವಹಿಸಿದ್ದರು.

## ವೀರ ಮಾತೆಯರ ಮುಕುಟಮಣಿ ಚನ್ನಮ್ಮ



**ಇಂಡಿ:** ವೀರರಾಣಿ ಕಿತ್ತೂರು ಚೆನ್ನಮ್ಮ ದೇಶ ರಕ್ಷಣೆಗೆ ಧರ್ಮ ರಕ್ಷಣೆಗೆ ಹೋರಾಡಿದ ವೀರ ತಾಯಿಯರ ಸಾಲಿನ ಮುಕುಟ ಮಣಿ ಎಂದು ನಾದ ಸರಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳಾದ ಸಿ.ಎಂ.ಬಂಡಗರ ಹೇಳಿದರು.

ಪಟ್ಟಣದ ತಾಲೂಕು ಆಡಳಿತ ಸೌಧದ ಸಭಾ ಭವನದಲ್ಲಿ ನಡೆದ ವೀರರಾಣಿ ಕಿತ್ತೂರು ಚೆನ್ನಮ್ಮ ಅವರ 246 ನೇಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಥ್ಯಾಕರೆಯ ಹೂಂಕಾರ ಕಿತ್ತೂರಿನ ಸ್ವಾಭಿಮಾನ ಕೆರಳಿಸುತ್ತದೆ ಎಂದು ಚೆನ್ನಮ್ಮ ನವರು ಸಂಗೊಳ್ಳಿ ರಾಯಣ್ಣ, ಅಮಟೂರ ಬಾಳಪ್ಪ, ಮಹಾಮುಖಂಡ ಗುರುಸಿದ್ದಪ್ಪ ಎಲ್ಲರೂ ಸೇರಿ ಬ್ರೀಟಿಷರ ಸೈನ್ಯದ ಮೇಲೆ ವಿಜಯಸಾಧಿಸಿರದಕ್ಕೆ ವಿಜಯೋತ್ಸವಕ್ಕೆ ಈಗ 200 ವರ್ಷ ಎಂದರು.

ಕಂದಾಯ ಉಪವಿಭಾಗಾಧಿಕಾರಿ ಅಬೀದ ಗದ್ಯಾಳ ಮಾತನಾಡಿ ಆದರ್ಶ ಎನ್ನಬಹುದಾದ ಎಲ್ಲ ಗುಣಗಳು ಒಳಗೊಂಡು ಬದುಕಿದರೆ ಹೀಗೆ ಬದುಕಬೇಕು ಎಂದು ತೋರಿಸಿಕೊಟ್ಟ ಅಗಣಿತ ಗುಣಗಳ ಆದರ್ಶ ಗುಣಗಳ ರಾಣಿ ಚೆನ್ನಮ್ಮ ಎಂದರು. ಆನಂದ ಹುಣಸಗಿ, ಪ್ರಕಾಶ ನಾಯಕ್ ಮಾತನಾಡಿದರು.

ತಾಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ವಿ.ಎಚ್. ಬಿರಾದಾರ, ಧನಪಾಲಶೆಟ್ಟಿ ದೇವೂರ, ಟಿ.ಎಸ್.ಅಲಗೂರ ಇಂಡಿ ತಾಲೂಕಾ ಪಂಚಮಸಾಲಿ ಸಮಾಜದ ಕಾರ್ಯದರ್ಶಿ ಶಿವಾನಂದ ಚಾಳಿಕಾರ, ಕರವೇ ಅಧ್ಯಕ್ಷ ಬಾಳು ಮುಳಜಿ, ಶಿವು ಮಲಕಗೊಂಡ, ಶರಣು ಬಂಡಿ,ರಮೇಶ ಬಿರಾದಾರ, ಸಂತೋಷ ದೇವರ, ರಾಜು ಗುಜಗುಂಟಿ, ಪ್ರಶಾಂತ ಬಿರಾದಾರ, ಸಂಗು ಬಿರಾದಾರ, ರಾಜು ಕಮತಗಿ, ನಾಗೇಶ ಹೆಗಡ್ಯಾಳ,ಅಶೋಕ ಬಳಬಟ್ಟಿ, ಗದಿಗೆಪ್ಪ ಬೇಟಗೇರಿ, ಸಚೀನ ಮೆಂಡೆಗಾರ, ಶ್ರೀಕಾಂತ ಗಡಗಲಿ, ಶ್ರೀಶೈಲಗೌಡ ಬಿರಾದಾರ, ಸಂತೋಷ ಲಚ್ಯಾಣ, ಅನೀಲ ಪ್ರಸಾದ ಏಳಗಿ, ಎಸ್.ಆರ್.ಮುಜಗೊಂಡ, ಬಸವರಾಜ ರಾಹೂರ ಮತ್ತಿತರಿದ್ದರು.

# ಕಿತ್ತೂರು ಚನ್ನಮ್ಮಳ ಇತಿಹಾಸ ಭಾರತೀಯರಿಗೆ ಆದರ್ಶಪ್ರಾಯ



**ಬಸವನಬಾಗೇವಾಡಿ:** ಜಗತ್ತಿನಲ್ಲಿಯೇ ಭಾರತ ದೇಶದ ಇತಿಹಾಸ ಅತ್ಯಂತ ವರ್ಣರಂಜಿತವಾಗಿದೆ. ದೇಶದ ಇತಿಹಾಸ ಪುಟದಲ್ಲಿರುವ ಕಿತ್ತೂರು ರಾಣಿ ಚನ್ನಮ್ಮಳ ಇತಿಹಾಸ ಭಾರತೀಯರಿಗೆ ಆದರ್ಶಪ್ರಾಯವಾಗಿದೆ ಎಂದು ಬಿಎಲ್‌ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕ ಎಂ.ಕೆ. ಯಾದವ ಹೇಳಿದರು.

ಪಟ್ಟಣದ ಬಿಎಲ್‌ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮ ಮಾತನಾಡಿದ ಅವರು, ಬ್ರಿಟಿಷರ ವಿರುದ್ಧ ಪ್ರಥಮವಾಗಿ ಹೋರಾಟ ಮಾಡಿದ ಕೀರ್ತಿ ಕಿತ್ತೂರು ರಾಣಿ ಚನ್ನಮ್ಮಳಿಗೆ ಸಲ್ಲುತ್ತದೆ.ನಾಡು-ನುಡಿಯ ರಕ್ಷಣೆ, ದೇಶಪ್ರೇಮದಲ್ಲಿ ಕಿತ್ತೂರು ರಾಣಿ ಚನ್ನಮ್ಮಳ ಹೆಸರು ಎದ್ದು ಕಾಣುತ್ತದೆ. ದೇಶದ ಇತಿಹಾಸದಲ್ಲಿ ರಾಣಿ ಚನ್ನಮ್ಮಳ ಹೆಸರು ಅಜರಾಮರವಾಗಿ ನಿಂತಿದೆ. ನಮ್ಮ ಪೂರ್ವಜರು ದೊರಕಿಸಿಕೊಟ್ಟಿರುವ ಈ ಸ್ವಾತಂತ್ರ್ಯವನ್ನು ನಾವೆಲ್ಲರೂ ಜಾತಿ, ಧರ್ಮದಿಂದ ಹೊರಬಂದು ಸದೃಢ ಭಾರತದ ನಿರ್ಮಾಣದಲ್ಲಿ ಭಾಗವಹಿಸಬೇಕಾದ ಅಗತ್ಯವಿದೆ. ನಮ್ಮ ಪೂರ್ವಜರ ಬೆವರು ರಕ್ತದ ಇತಿಹಾಸಕ್ಕೆ ಬೆಲೆ ಕೊಟ್ಟು ಏಕತೆಯಿಂದ ಬದುಕಿದಾಗ ಮಾತ್ರ ಸುಂದರ ಮತ್ತು ಶಾಂತಿಯ ದೇಶ ಕಟ್ಟಲು ಸಾಧ್ಯವೆಂದರು.

ಕಾರ್ಯಕ್ರಮದಲ್ಲಿ ಪ್ರೊ.ಸಿ.ಪಿ.ದಡೇಕರ, ಡಾ. ಎಸ್.ಬಿ.ಜನಗೊಂಡ, ಪ್ರೊ.ದಿಲೀಪಕುಮಾರ, ಪಿ.ಎಸ್.ಹೊರಕೇರಿ, ಪಿ.ಎಸ್.ನಾಟೀಕಾರ, ಎಸ್. ಜೆ.ಸೂರ್ಯವಂಶಿ, ಎಂ.ಆರ್.ಮಮದಾಪುರ, ಆರ್.ಎಂ.ಮುಜಾವರ, ಎ.ಎಂ.ಪಾಟೀಲ ಇತರರು ಇದ್ದರು.

# ನರೇಗಾದಡಿ 2025-26 ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಕೆಗೆ ಗ್ರಾಮ ಪಂಚಾಯತಿಗೆ ಬೇಡಿಕೆ ಸಲ್ಲಿಸಿ : ತಾ.ಪಂ. ಇಒ ಮಲ್ಲಯ್ಯ ಕೊರವನವರ ಕರೆ

ಗದಗ : ಮಹಾತ್ಮಾ ಗಾಂಧಿ ನರೇಗಾ ಯೋಜನೆಯ 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ" ಅಭಿಯಾನವನ್ನು ಯಶಸ್ವಿಗೊಳಿಸಿ ಗ್ರಾಮ ಸಭೆ ಹಮ್ಮಿಕೊಳ್ಳಲಾಗಿದೆ. ಈ ಗ್ರಾಮಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಬೇಡಿಕೆಗಳನ್ನು ಸಲ್ಲಿಸಬೇಕು ಎಂದು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ತಿಳಿಸಿದರು.

ಗದಗ ತಾಲೂಕು ಪಂಚಾಯತಿ ವ್ಯಾಪ್ತಿಯ 27 ಗ್ರಾಮ ಪಂಚಾಯತಿಗಳ ರೈತರು ಹಾಗೂ ಕೂಲಿಕಾರರು ಗ್ರಾಮ ಪಂಚಾಯತಿ ಹಾಗೂ ಕೃಷಿ, ತೋಟಗಾರಿಕೆ, ರೇಷ್ಮೆ, ಅರಣ್ಯ ಇಲಾಖೆಗಳಲ್ಲಿ ಕಾಮಗಾ-ರಿಗಳ ಅರ್ಜಿ ಸಲ್ಲಿಸಲು ನವೆಂಬರ್ 05 ಕೊನೆಯ ದಿನವಾಗಿದೆ ಎಂದರು.

ಸಪ್ಟಂಬರ್ ತಿಂಗಳ ವೈಯಕ್ತಿಕ ಕಾಮಗಾರಿಗಳ ವಿತರಾಣಾ ಅಭಿಯಾನದ ಜೊತೆಗೆ ಅನುಷ್ಠಾನ ಇಲಾಖೆಗಳಿಂದ ರೈತ-ರಿಂದ ಬೇಡಿಕೆಗಳನ್ನು ಸಂಗ್ರಹಿಸಲಾಗುತ್ತಿದ್ದು, ಅಕ್ಟೋಬರ್ 2 ರಿಂದ ನವೆಂಬರ್ 10 ರ ವರೆಗೆ ವಿಶೇಷ ಗ್ರಾಮ ಸಭೆ ನಡೆಸಿ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬೇಡಿಕೆ ಪಟ್ಟಿಗೆ, ಮನೆ ಮನೆ ಭೇಟಿ, ವೈಯಕ್ತಿಕ ಕಾಮಗಾ-ರಿಗಳ ಮಾಹಿತಿಯುಳ್ಳ ಕರಪತ್ರ ಹಂಚಿಕೆ ಮಾಡಿ ಬೇಡಿಕೆ ಸಂಗ್ರಹಿಸಲಾಗುತ್ತಿದೆ. ಈ ಎಲ್ಲಾ ಬೇಡಿಕೆಗಳ ಅರ್ಜಿಗಳನ್ನು ಒಳಗೊಂಡು ವಾರ್ಡ್ ಸಭೆ ನಂತರ ಗ್ರಾಮ ಸಭೆ ನಡೆಸಲಾಗುತ್ತಿದ್ದು ಪ್ರತಿ ಗ್ರಾಮ ಪಂಚಾಯತಿಯಲ್ಲಿ ನಡೆಯುವ ಗ್ರಾಮ ಸಭೆಗೆ ಸ್ವಸಹಾಯ ಸಂಘಗಳ ಸದಸ್ಯರು, ರೈತರು, ಸಾರ್ವಜನಿಕರು, ಕೂಲಿಕಾರ್ಮಿಕರು ಎಲ್ಲರನ್ನು ಆಹ್ವಾನಿಸಿ ಸಭೆ ನಡೆಸಲು ಸೂಚಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ 2025-26 ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ಉದ್ಯೋಗ ಖಾತ್ರಿ ನಡಿಗೆ ಸಬಲತೆಯಡೆಗೆ ಅಭಿಯಾನ ಆರಂಭವಾಗಿದೆ ತಾಲೂಕಿನ 27 ಗ್ರಾಮ ಪಂಚಾಯತಿ ವ್ಯಾಪ್ತಿಯ ರೈತರು, ಕೂಲಿಕಾರರು ತಮ್ಮ ಜಮೀನುಗಳಲ್ಲಿ ವೈಯಕ್ತಿಕ ಕಾಮಗಾ-ರಿಗಳನ್ನು ಪಡೆದುಕೊಳ್ಳಲು ಗ್ರಾ.ಪಂಗೆ ಅರ್ಜಿ ಸಲ್ಲಿಸಬಹುದು.

ನರೇಗಾ ಯೋಜನೆಯ 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ತಾಲೂಕಿನ 27 ಗ್ರಾಮ ಪಂಚಾಯತಿಗಳಲ್ಲಿ ವಾರ್ಡ್ ಸಭೆ, ಗ್ರಾಮ ಸಭೆ ನಡೆಸಲು ದಿನಾಂಕ ಮತ್ತು ನೋಡಲ್ ಅಧಿಕಾರಿಗಳ ನೇಮಕ ಮಾಡಲಾಗಿದೆ. ಈ ಗ್ರಾಮ ಸಭೆಗೆ ರೈತರು, ಎನ್.ಆರ್.ಎಲ್.ಎಂ ಸಂಜೀವಿನಿ ಒಕ್ಕೂಟದ ಮಹಿಳಾ ಸದಸ್ಯರು, ಕೂಲಿಕಾರರು, ಸಾರ್ವಜನಿಕರು ಭಾಗವಹಿಸಿ ನಿಮ್ಮ ಬೇಡಿಕೆಗಳನ್ನು ಸಲ್ಲಿಸಬಹುದು.

# ಕೋಟೆಗೋಡೆಯ ಸುತ್ತಲೂ ಒತ್ತುವರಿಯಾದ ಪ್ರದೇಶ ತೆರವಿಗೆ - ಜಿಲ್ಲಾಧಿಕಾರಿ ಸೂಚನೆ



ವಿಜಯಪುರ : ವಿಜಯಪುರ ನಗರದಾದ್ಯಂತ ಕೋಟೆಗೋಡೆ ಸುತ್ತಲೂ ಇರುವ ಕಂದಕದ ಸ್ಥಳಗಳಲ್ಲಿ ಅತಿಕ್ರಮಣ-ಒತ್ತುವರಿಯಾದ ಪ್ರದೇಶವನ್ನು ಸರ್ವೇ ಮಾಡಿ, ಒತ್ತುವರಿಗೊಂಡಿರುವ ಸ್ಥಳವನ್ನು ತೆರವುಗೊಳಿಸಲು ಕ್ರಮ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದ್ದಾರೆ.

ವಿಜಯಪುರ ನಗರದಲ್ಲಿ ಸುರಿದ ಭಾರೀ ಮಳೆಯಿಂದಾಗಿ ನಗರದ ಹಲವಾರು ಬಡಾವಣೆಗಳು ಜಲಾವೃತಗೊಂಡು, ಮನೆಗಳಿಗೆ ನೀರು ನುಗ್ಗಿ ಅಪಾರ ಹಾನಿಯಾಗಿದ್ದರಿಂದ ಕೈಗೊಂಡ ಪರಿಹಾರ ಕ್ರಮಗಳ ಕುರಿತು ಇತ್ತೀಚೆಗೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮುಂಬರುವ ದಿನಗಳಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ ಎಲ್ಲ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ನಗರದ ಮುಖ್ಯ ರಾಜ ಕಾಲುವೆಗಳು, ಮಳೆನೀರು, ಚರಂಡಿಗಳು, ಕೋಟೆಗೋಡೆಯ ಸುತ್ತಲೂ, ನೈಸರ್ಗಿಕ ನಾಲೆಗಳು ಸೇರಿದಂತೆ ಬಹಳಷ್ಟು ಕಡೆಗಳಲ್ಲಿ ಒತ್ತುವರಿಯಾಗಿರುವುದರಿಂದ ಹಾಗೂ ಹೂಳು ತುಂಬಿರುವುದರಿಂದ ಮಳೆ ನೀರು ಸರಾಗವಾಗಿ ಹರಿದು ಹೋಗದೇ, ತೊಂದರೆಗಳು ಉಂಟಾಗುತ್ತಿರುವ ಹಿನ್ನಲೆಯಲ್ಲಿ ಕಂದಕಗಳನ್ನು ಅತಿಕ್ರಮ ಮಾಡಿರುವ ಒತ್ತುವರಿದಾರರಿಗೆ ನೋಟಿಸ್ ಜಾರಿ ಮಾಡಿ ತೆರವುಗೊಳಿಸಲು ಪುರಾತತ್ವ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಕಂದಾಯ ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ನಗರದ ಮುಖ್ಯ ರಾಜ್‌ಕಾಲುವೆಗಳು, ಚರಂಡಿಗಳಲ್ಲಾಗಿರುವ ಅತಿಕ್ರಮಣ ಒತ್ತುವರಿಗಳನ್ನು ಸರ್ವೇ ಇಲಾಖೆಯಿಂದ ಗುರುತಿಸಿಕೊಂಡು, ತೆರವುಗೊಳಿಸಬೇಕು. ಸರ್ವೇ ಹಾಗೂ ಒತ್ತುವರಿ ಕಾರ್ಯಾಚರಣೆಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಮುಖ್ಯ ರಾಜ್ ಕಾಲುವೆಗಳು, ಮಳೆ ನೀರು ಚರಂಡಿಗಳು, ಕೋಟೆಗೋಡೆಯ ಸುತ್ತಲೂ ಇರುವ ಕಂದಕ(ಮೋಟ್) ಮತ್ತು ನೈಸರ್ಗಿಕ ನಾಲಾಗಳನ್ನು ಒತ್ತುವರಿ ಮಾಡಿ ಕಟ್ಟಲಾದ ಅನಧಿಕೃತ ಕಟ್ಟಡಗಳನ್ನು ಸಾರ್ವಜನಿಕರು ತೆರವುಗೊಳಿಸುವಂತೆ ತಿಳಿಸಿದ ಅವರು, ತಪ್ಪಿದಲ್ಲಿ ಜಿಲ್ಲಾಡಳಿತ-ಮಹಾನಗರ ಪಾಲಿಕೆ ವತಿಯಿಂದ ತೆರವುಗೊಳಿಸಲು ಕ್ರಮ ವಹಿಸಲಾಗುವುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಪುರಾತತ್ವ ಇಲಾಖೆ, ಕಂದಾಯ ಇಲಾಖೆ, ನಗರ ಭೂಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಚೂರು-ಪಾರು

### ಡಿಸೆಂಬರ್-೧೪ ರಂದು ರಾಷ್ಟ್ರೀಯ ಲೋಕ ಅದಾಲತ್

ಗದಗ : ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಆದೇಶದನ್ವಯ ಜಿಲ್ಲೆಯಲ್ಲಿ ಡಿಸೆಂಬರ್ 14 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದ್ದು, ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧಯಕ್ಷರಾದ ಬಸವರಾಜ ಇವರು ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್. ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇ-ರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದ್ದು, ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು,

ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಡಿಸೆಂಬರ್ 14 ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ವೀಕ್ಷಕರ ತ್ರಿಸದಸ್ಯ ಸಮಿತಿ ವೀಕ್ಷಕರ ಮತ್ತು ಮಾರ್ಗಾಧಿಕಾರಿಗಳ ನೇಮಕ

ಗದಗ : ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕಂದಾಯ ಇಲಾಖೆಯಲ್ಲಿ ವಿವಿಧ ಜಿಲ್ಲೆಗಳಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ನೇಮಕಾತಿಗೆ ಸಂಬಂಧಿಸಿದಂತೆ ಅಕ್ಟೋಬರ್ 26 ಮತ್ತು ಅಕ್ಟೋಬರ್ 27 ರಂದು ನಡೆಸುತ್ತಿರುವ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಈ ಪರೀಕ್ಷೆಗಳು ಸುಗಮವಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಲು ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರು, ಜಿಲ್ಲಾ ಮಟ್ಟದ ತ್ರಿಸದಸ್ಯ ಸಮಿತಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಬೆಟಗೇರಿ ನಗರದ ವಿವಿಧೆಡೆ ನೀರು ಪೂರೈಕೆ

ಗದಗ : ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಅಕ್ಟೋಬರ್ 24 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ: ವಾರ್ಡ್ 21, 22 – ವಾಲ್ಮೀಕಿ ಭವನ, ಕುರುಗಲ ಲೇಔಟ, ಕಮತರ ಪ್ಲಾಟ, ಟವರ್ ಕಂಬ, ವಿಜಯನಗರ ಶಾಲೆ ಉಳಿದ ಕೆಲವು ಭಾಗಗಳು. ವಾರ್ಡ್ 34 – ಸೇವಾಲಾಲ ನಗರ, ಬಾಪೂಜಿ ನಗರ, ಬ್ಯಾಂಕ ಸುತ್ತಮುತ್ತಲಿನ ಲೈನಗಳು, ವಿಶ್ವೇಶ್ವರಯ್ಯ ನಗರ. ವಾರ್ಡ್ 21, 23 – ಮೇಹರುವಾಡೆ ಸಂಧಿ, ಚೆನ್ನಪ್ಪ ಲೈನ ಹೊಸ ಲೈನ, ರಾಮದಾಸ, ಮುನವಳ್ಳಿ, ಎಲಿಗಾರ ಪ್ಲಾಟ, ಕಮತರ ಪ್ಲಾಟ, ಅಕ್ಕಿ ಪ್ಲಾಟ, ಭುಮಾ ಲೈನ, ಗುಳಗುಂದಿ ಲೈನ ಉಳಿದ ಕೆಲವು ಭಾಗಗಳು. ವಾರ್ಡ್ 31 – ಶರಾಫ ಬಜಾರ, ಮಾಬುಸುಬಾನಿಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ 10, 8, 9 – ಕಬಾಡೆ ರಸ್ತೆ, ಗ್ಲಾಸ ಹೌಸ ಶಾಲೆಯ ಹಿಂದಿನ ಭಾಗ ಶಿರಹಟ್ಟಿ ಓಣಿ, ಹೆಲ್ತ ಕ್ಯಾಂಪ, ಕುರಹಟ್ಟಿ ಪೇಟೆ, ಪೊಲೀಸ ಕ್ವಾಟ್ರಸ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದ-ರಿಂದಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಕನೂರು: ಮ್ಯಾನ್ಯುವಲ್ ಸ್ಕ್ಯಾವೆಂಜರ್ ಕೆಲಸ ಮಾಡುವವರು ಸ್ವಯಂ ಪ್ರೇರಿತ ಅರ್ಜಿ ಸಲ್ಲಿಸಿ

ಕೊಪ್ಪಳ : ಕುಕನೂರು ಪಟ್ಟಣ ಪಂಚಾಯತ ವ್ಯಾಪ್ತಿಯ ಮ್ಯಾನ್ಯುವಲ್ ಸ್ಕ್ಯಾವೆಂಜರ್‌ಗಳೆಂದು ಕೆಲಸ ನಿರ್ವಹಿಸುವಂತಹ ಕಾರ್ಮಿಕರು ಸ್ವಯಂಪ್ರೇರಿತವಾಗಿ ಅರ್ಜಿ ಸಲ್ಲಿಸುವಂತೆ ಪ.ಪಂ ಮುಖ್ಯಾಧಿಕಾರಿ ತಿಳಿಸಿದ್ದಾರೆ

ಕುಕನೂರು ಪಟ್ಟಣ ಪಂಚಾಯತ ಸರಹದ್ದಿನಲ್ಲಿ ಮ್ಯಾನ್ಯುವಲ್ ಸ್ಕ್ಯಾವೆಂಜರಗಳ ಅಂತ ಕೆಲಸ ನಿರ್ವಹಿಸುತ್ತಿರುವವರನ್ನು ಗುರುತಿಸಿ ವಿಶೇಷ ಮನು ಸಮೀಕ್ಷೆಯನ್ನು ಕೈಗೊಂಡು ಅ.23 ರಿಂದ ಅ.30ರ ಒಳಗೆ ಮ್ಯಾನ್ಯುವಲ್ ಸ್ಕ್ಯಾವೆಂಜರ್ಗಗಳಾಗಿರುವುದು ಖಾತ್ರಿಯಾದಲ್ಲಿ ಅಂತಹವರನ್ನು ಮ್ಯಾನ್ಯುವಲ್ ಸ್ಕ್ಯಾವೆಂಜರ್ಗಗಳ ಪಟ್ಟಿಗೆ ಸೇ-ರಿಸಲು ನಿಯಮಾನುಸಾರ ಕ್ರಮವಹಿಸಬೇಕಾಗಿದೆ.

ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು, ಅನ್ಯೆರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವನ ಮಲವನ್ನು ಸ್ವಚ್ಛಗೊಳಿಸುವುದು ಹಾಗೂ ಶೌಚಾಲಯದ ಮಲಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವಂತಹ ಕೆಲಸ ನಿರ್ವಹಿಸುವಂತಹ ಕಾರ್ಮಿಕರು ಸ್ವಯಂಪ್ರೇರಿತವಾಗಿ ಪ.ಪಂ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

**ರೋಣ ತಾಲೂಕಿನಲ್ಲಿ 22 ಗ್ರಾಮ ಪಂಚಾಯತಿಯಲ್ಲಿ 6 ರಿಂದ 14 ರ ವರೆಗೆ ಗ್ರಾಮ ಸಭೆ**

# ಜನರು ಬೇಡಿಕೆ ಸಲ್ಲಿಸಿ ಸದುಪಯೋಗ ಪಡಿಸಿಕೊಳ್ಳಿ : ಇಓ ಮಂಜುಳಾ ಹಕಾರಿ

ಗದಗ : ರೋಣ ತಾಲೂಕಿನ 22 ಗ್ರಾಮ ಪಂಚಾಯತಿ ಯಲ್ಲಿ ನವೆಂಬರ್ 6 ರಿಂದ 14 ರ ವರೆಗೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಸಭೆ ಆಯೋಜನೆ ಮಾಡಿದ್ದು ಜನರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳುವ ಮೂಲಕ ಸರ್ಕಾರದ ಯೋಜನೆಗಳನ್ನು ತಮ್ಮದಾಗಿಸಿಕೊಳ್ಳಿ ಎಂದು ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ ತಿಳಿಸಿದ್ದಾರೆ.

ಗ್ರಾಮೀಣ ಜನರಿಗೆ ಸರ್ಕಾರದ ಯೋಜನೆಗಳನ್ನು ಒದಗಿಸುವ ವೇದಿಕೆ ಗ್ರಾಮಸಭೆಗಳು ಆಗಿದ್ದು ನವೆಂಬರ್ 6 ರಿಂದ 14 ರವರೆಗೂ ನಡೆಯುತ್ತವೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತ್ರಿ ಉದ್ಯೋಗ ಖಾತ್ರಿ ಯೋಜನೆಯಡಿ 2025-26 ನೇ ಸಾಲಿನ ಕಾರ್ಮಿಕ ಅಯ್ಯವ್ಯಯ ತಯಾರಿಸಲು ಈ ಗ್ರಾಮ ಸಭೆ ಅನುಕೂಲವಾಗಲಿದ್ದು ರೈತರಿಗೆ ಅನುಕೂಲ ವಾಗುವ ನಿಟ್ಟಿನಲ್ಲಿ ತೋಟಗಾರಿಕೆ, ಕೃಷಿ, ರೇಷ್ಮೆ, ಇಲಾಖೆಗಳಿಂದ ಸೌಲಭ್ಯಗಳ ಮಾಹಿತಿ ಒದಗಿಸುತ್ತದೆ ಹಾಗೂ ಈ ನಿಟ್ಟಿನಲ್ಲಿ ಅವಶ್ಯ ಇರುವ ಸೌಲಭ್ಯಗಳ ಬೇಡಿಕೆಯನ್ನು ಸಹ ಸಾರ್ವಜನಿಕರು ಸಲ್ಲಿಸಬಹುದು.

ಗ್ರಾಮ ಪಂಚಾಯತಿಯಲ್ಲಿ ಬೇಡಿಕೆ ಪೆಟ್ಟಿಗೆಯಲ್ಲಿ ಬೇಡಿಕೆ ಸಲ್ಲಿಸಬಹುದು ಆಯವ್ಯಯ ತಯಾರಿಕೆಯ ಕು-ರಿತಂತೆ ಎಲ್ಲಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ ಅಭಿಯಾನವನ್ನು ಐಇಸಿ ಕಾರ್ಯಕ್ರಮದ ಮೂಲಕ ಜಾಗೃತಿ, ಕೈಗೊಂಡಿದ್ದು ಕಾಮಗಾರಿಗಳ ಬೇಡಿಕೆ ಸ್ವಿಕರಿಸಲು ಗ್ರಾಮ ಮಟ್ಟದಲ್ಲಿ ಕಾರ್ಯಕ್ರಮ ಮಾಡಲಾಗಿದೆ. ಇದಲ್ಲದೇ ಗ್ರಾಮ ಪಂಚಾಯತಿ ಆವರಣದಲ್ಲಿ ಬೇಡಿಕೆ ಪೆಟ್ಟಿಗೆ ಇಡಲಾಗಿದ್ದು ಅಲ್ಲಿಯೂ ಸಹ ಗ್ರಾಮಸ್ಥರು ತಮಗೆ ಬೇಕಾದ ಕಾಮಗಾರಿ ಹೆಸರನ್ನು ಬರೆದು ಬೇಡಿಕೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸ್ಕಾ ಯನ್ ಮಾಡಿಯು ನರೇಗಾ ಕಾಮಗಾರಿ ಬೇಡಿಕೆ ಸಲ್ಲಿಸಬಹುದು:

ಆಧುನಿಕತೆಗೆ ತಕ್ಕಂತೆ ಜನರು ತಂತ್ರಜ್ಞಾನಕ್ಕೆ ಹೊಂದಿಕೊಂಡಿರುವ ನಿಟ್ಟಿನಲ್ಲಿ ನರೇಗಾ ಯೋಜನೆಯಡಿ ಬೇಡಿಕೆ ಸಲ್ಲಿಸಲು

ಪ್ರಸಕ್ತ ವರ್ಷದಲ್ಲಿ ಕ್ಯೂ ಆರ್ ಕೋಡ್



ಮಾಡಲಾಗಿದೆ. ಜನರು ಸ್ಕಾ ?ಯನ್ ಮಾಡಿಯು ಸಹ ಬೇಡಿಕೆ ಸಲ್ಲಿಸಬಹುದು. ಒಂದು ಮೊಬೈಲ್ ನಂಬರ್ ನಿಂದ ಗರಿಷ್ಠ ಮೂರು ಕಾಮಗಾರಿಗಳಿಗೆ ಅರ್ಜಿ ಸಲ್ಲಿಸಬಹುದು. ಪ್ರತಿ ಅರ್ಹ ಕುಟುಂಬಕ್ಕೆ ಜೀವಿತಾವಧಿಯಲ್ಲಿ 5 ಲಕ್ಷದ ವರೆಗೂ ವೈಯಕ್ತಿಕ ಕಾಮಗಾರಿ ನೆರವು ಪಡೆದುಕೊಳ್ಳಬಹುದು.

ಫಲಾನುಭವಿಗಳು ಮೊಬೈಲ್‌ನಲ್ಲೇ ಅರ್ಜಿ ಸಲ್ಲಿಸುವುದರಿಂದ ಮಧ್ಯವರ್ತಿಗಳ ಹಾವಳಿ ಇಲ್ಲದಂತಾಗುತ್ತದೆ...

ನರೇಗಾ ಯೋಜನೆಯ ಪ್ರಯೋಜನಗಳು

1. ನಮೂನೆ-6 ರಲ್ಲಿ ಕೆಲಸ ಕೋ-ರಿದ 15 ದಿವಸದೊಳಗೆ ಕೆಲಸ ಖಾತರಿ
2. ಕೆಲಸ ಕೋರಿದ 15 ದಿವಸದೊಳಗೆ ಕೆಲಸ ನೀಡಲು ನಿರಾಕ-ರಿಸಿದರೆ ನಿರುದ್ಯೋಗ ಭತ್ಯೆ ಪಡೆಯಲು ಅರ್ಹರು.
3. ಗಂಡು ಹೆಣ್ಣಿಗೆ ಸಮಾನ ಕೂಲಿ 349/- ನೀಡಲಾಗುತ್ತಿದೆ.(100 ದಿನಗಳ ಕೆಲಸಕ್ಕೆ ರೂ.38.900/- ಗಳನ್ನು ಪಡೆಯಬಹುದು.
4. ವಿಶೇಷ ಚೇತನರ/65 ವರ್ಷ ಮೇಲ್ಪಟ್ಟ ವೃದ್ಧರಿಗೆ ಕೆಲಸದಲ್ಲಿ 50% ವಿನಾಯಿತಿ
5.ಅಂಗವಿಕಲರಿಗೆ ಪ್ರತ್ಯೇಕ ಉದ್ಯೋಗ ಚೀಟಿ (100 ದಿನ ಪ್ರತ್ಯೇಕ + ಕುಟುಂಬಕ್ಕೂ 100 ದಿನಗಳ ಕೆಲಸ)
6. ವೈಯಕ್ತಿಕ ಕಾಮಗಾರಿಗಳಡಿ ಒಂದು ಕುಟುಂಬಕ್ಕೆ ಜೀವಿತಾವಧಿಯಲ್ಲಿ 5 ಲಕ್ಷದ ವರೆಗೆ ನೆರವು..

ಮಹಾತ್ಮ ಗಾಂಧಿ ನರೇಗಾ ಯೋಜನೆಯ ಅರ್ಹ ಫಲಾನುಭವಿಗಳು

ಪರಿಶಿಷ್ಟ ಜಾತಿ

ಪರಿಶಿಷ್ಟ ಪಂಗಡ

ಬಡತನ ರೇಖೆ ಕೆಳಮಟ್ಟದಲ್ಲಿ ಇರುವ ಇತರೆ ಕುಟುಂಬಗಳು

ಸ್ರಿ ತೇ ಪ್ರಧಾನ ಕುಟುಂಬಗಳು

ಭೂಸುಧಾರಣಾ ಫಲಾನುಭವಿಗಳು

ಇಂದಿರಾ ಆವಾಸ್ ಯೋಜನೆಯ ಫಲಾನುಭವಿಗಳು

ಅರಣ್ಯ ಹಕ್ಕು ಕಾಯ್ದೆಯ ಫಲಾನುಭವಿಗಳು

ವಿಕಲ ಚೇತನ ಪ್ರಧಾನ ಕುಟುಂಬಗಳು ಪ್ರಕಟಣೆಯಿಂದ ತೆಗೆದು ಹಾಕಿದ ಬುಡಕಟ್ಟು ಜನಾಂಗದವರು

ಅಲೆಮಾರಿ ಜನಗಳು

ಸಣ್ಣ ಮತ್ತು ಅತೀಸಣ್ಣ ರೈತರು.

ಕೋಟ್ ಮಾನ್ಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಹಾಗು ಮಾನ್ಯ ಉಪ ಕಾರ್ಯದರ್ಶಿಗಳ ಸಲಹೆ ಸೂಚನೆ ಮೇರಿಗೆ ಪ್ರಸಕ್ತ ವರ್ಷದಲ್ಲಿ ನರೇಗಾ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸಲು ಈಗಾಗಲೇ ಐಇಸಿ ಚಟುವಟಿಕೆಗಳ ಮೂಲಕ ಅಭಿಯಾನದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ..

ಚಂದ್ರಶೇಖರ ಬಿ ಕಂದಕೂರ ನಿರ್ದೇಶಕರು, ತಾಲೂಕ ಪಂಚಾಯತ ರೋಣ

**ಅಭಿವೃದ್ಧಿ ಜೊತೆಗೆ ದೇವಸ್ಥಾನಗಳ ಜೀರ್ಣೋದ್ದಾರಕ್ಕೂ ಕ್ರಮ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್**

# ಮಚ್ಚೆ ಗ್ರಾಮದ ಬ್ರಹ್ಮಲಿಂಗ ದೇವಸ್ಥಾನಕ್ಕೆ ಅಡ್ಡಿಗಲ್ಲು ಪೂಜೆ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರ ವ್ಯಾಪ್ತಿಯಲ್ಲಿ 210ಕ್ಕಿಂತ ಹೆಚ್ಚು ಮಂದಿರಗಳನ್ನು ಜೀರ್ಣೋದ್ದಾರ ಮಾಡಲಾಗಿದ್ದು, ಜಾತಿ, ಪಕ್ಷ ಭೇದವಿಲ್ಲದೆ ಪ್ರತಿ ಗ್ರಾಮದಲ್ಲಿ ಮಂದಿರಗಳನ್ನು ನಿರ್ಮಿಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಮಚ್ಚೆ ಗ್ರಾಮದ ಶ್ರೀ ಬ್ರಹ್ಮಲಿಂಗ ದೇವಸ್ಥಾನದ ನೂತನ ಕಟ್ಟಡ ನಿರ್ಮಾಣ-ಕ್ಕಾಗಿ ಅಡಿಗಲ್ಲು ಪೂಜೆ ನೆರವೇರಿಸಿ, ಕಟ್ಟಡ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ಭಾರತ ದೇವರುಗಳ ದೇಶ, ಸಂಸ್ಕೃತಿಯ



ದೇಶ.

ಗ್ರಾಮೀಣ ಕ್ಷೇತ್ರದ ಪ್ರತಿ ಗ್ರಾಮದಲ್ಲೂ ಒಂದಿಲ್ಲೊಂದು ಮಂದಿರ ನಿರ್ಮಾಣ ನಡೆಯುತ್ತಿದೆ ಎಂದರು.

ದೇವಸ್ಥಾನಕ್ಕೆ ಗ್ರಾಮಸ್ಥರ ಬೇಡಿಕೆಯಂತೆ ಒಂದು ಕೋಟಿ ರೂಪಾಯಿ ಮಂಜೂರು ಮಾಡಿಸುತ್ತೇನೆ. ಮೊದಲ ಹಂತದಲ್ಲಿ 50 ಲಕ್ಷ ರೂಪಾಯಿಯನ್ನು ಮಂಜೂರು ಮಾಡಿಸುತ್ತೇನೆ ಎಂದು ಸಚಿವರು ಭರವಸೆ ನೀಡಿದರು.

ಮೂಲಸೌಕರ್ಯಗಳ ಜೊತೆಗೆ ದೇವಸ್ಥಾನಗಳ ಜೀರ್ಣೋದ್ದಾರಕ್ಕೂ ಆದ್ಯತೆ ನೀಡುತ್ತಿರುವೆ. ಜನರು ಇಟ್ಟಿರುವ ವಿಶ್ವಾಸಕ್ಕೆ ದಕ್ಕೆಯಾಗದಂತೆ ನೋಡಿಕೊಳ್ಳುವೆ. ಚುನಾವಣೆಯಲ್ಲಿ ಮಾತ್ರ ರಾಜಕಾರಣ ಮಾಡೋಣ ಎಂದರು.

ಇದೇ ವೇಳೆ ವಿವಿಧ ಸಂಘಟನೆಗಳಿಂದ ಸಚಿವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಯುವರಾಜ ಕದಂ, ದೇವಸ್ಥಾನ ಕಮೀಟಿಯ ಅಧ್ಯಕ್ಷರಾದ ಚಾಂಗಪ್ಪ ಹವಳ, ಸುರೇಶ ಲಾಡ, ಸಂಜು ಸುಳಗೇಕರ್, ಶಂಕರ ಬೆಳಗಾಂವ್ಕರ್, ಬಸವಂತ ನಾವಗೇಕರ್, ಪಿಂಟು ಬೆಳಗಾಂವ್ಕರ್, ನಾಗೇಶ ಗುಂಡೂಳ್ಕರ್, ಕಸ್ತೂರಿ ಕೋಲಕಾರ್, ಕುಶಪ್ಪ, ಯಲ್ಲಪ್ಪ ಬೆಳಗಾಂವ್ಕರ್, ಮನೋಹರ್ ಬಾಂಡಗೆ, ಸುಧೀರ ದೇಸಾಯಿ, ಶಿವಾಜಿ ಚೌಗುಲೆ, ನಾಗರಾಜ ತಳವಾರ ಉಪಸ್ಥಿತರಿದ್ದರು.

# ಧರ್ಮಸ್ಥಳ ಯೋಜನೆ ಮಹಿಳೆಯರಿಗೆ ವರವಾಗಿದೆ : ಭೀಮಾಶಂಕರ




**ಬೆಳಗಾವಿ:** ರಾಜ್ಯದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳೆಯರ ಪಾಲಿಗೆ ವರವಾಗಿದ್ದು, ಯೋಜನೆ ವತಿಯಿಂದ ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಮಾಡಲು ಸಾಲ ಸೌಲಭ್ಯ ನೀಡಿ ಅವರ ಪ್ರಗತಿಗೆ ಸಹಕಾರ ನೀಡಿದೆ ಎಂದು ಬ್ಯಾಂಕ್ ಆಫ್ ಮಹಾರಾಷ್ಟ್ರದ ಶಾಖಾ ಪ್ರಬಂಧಕ ಭೀಮಾಶಂಕರ ಅವರು ಹೇಳಿದರು.

ವಇಲ್ಲಿನ ಖಾಸಭಾಗ ಸಾಯಿ ಭವನದ ಸಭಾಭವನದಲ್ಲಿ ಬುಧವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ (ರಿ) ಖಾಸಭಾಗ ಇವರ ಸಹಯೋಗದಲ್ಲಿ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಒಕ್ಕೂಟ ಪದಾಧಿಕಾ-ರಿಗಳ ಸಮಾವೇಶವನ್ನು ಉದ್ಘಾಟಿಸಿ ಅವರು,

ಸರ್ಕಾರ ಮಾಡಬಹುದಾದ ಕೆಲಸವನ್ನು ಮಾಡುತ್ತಿರುವ ಸಂಸ್ಥೆ ಯಾವುದಾದರೂ ಇದ್ದರೆ ಅದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ. ಇದನ್ನು ರಾಜ್ಯದಲ್ಲಿ ಪ್ರಾರಂಭಿಸಿದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ದೇಶದ ಆಸ್ತಿ. SKDRDP ಯು ಬ್ಯಾಂಕಿನ ಬಿ.ಸಿ ಯಾಗಿ ಸೇವೆ ನಿರ್ವಹಿಸುತ್ತಿರುವ ಸಂಸ್ಥೆ ಆಗಿದೆ.

ಸ್ವಸಹಾಯ ಸಂಘವು ಒಗ್ಗಟನೆ ಮೂಲಕ ಹಿಂದುಳಿದ, ಅಸಂಘಟಿ-ತ ವಲಯದ ಮಹಿಳಾ ಸಬಲೀಕರಣ-ಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಚಾ-ರಿಟೇಬಲ್ ಟ್ರಸ್ಟ ಆಗಿರುತ್ತದೆ. ಸಂಸ್ಥೆಯು ನೀಡುತ್ತಿರುವ ಆರ್ಥಿಕ ಸಹಕಾರವು ಬ್ಯಾಂಕ ಆಫ್ ಮಹಾರಾಷ್ಟ್ರದಿಂದ ಸಾಲವನ್ನು ನೇರವು ನೀಡುತ್ತಿದೆ.

ಈ ಆರ್ಥಿಕ ಸಹಾಯವನ್ನು ಸರಿಯಾಗಿ ಸದುಪಯೋಗಕೊಂಡಾಗ ಕುಟುಂಬದ ಅಭಿವೃದ್ಧಿ ಸಾಧ್ಯವಾಗಲಿದೆ. ಅತಿ ಕಡಿಮೆ ಬಡ್ಡಿದರದಲ್ಲಿ ಬ್ಯಾಂಕಿನ ಸೇವೆಗಳನ್ನು ಮತ್ತು ಸಾಮಾಜಿ-ಕ ಕೆಲಸಗಳನ್ನು ಸಂಸ್ಥೆಯು ಮಾಡುತ್ತಿದೆ ಹೇಳಿದರು.

ಜಿಲ್ಲಾ ನಿರ್ದೇಶಕರಾದ ಸತೀಶ ನಾಯ್ಕ ಮಾತನಾಡಿ, ಸ್ವ ಸಹಾಯ ಸಂಘ ಗಳನ್ನು ಸ್ವತಂತ್ರವಾಗಿ ನಡೆಸಿಕೊಂಡು ಹೋಗಲು ಮತ್ತು ಸಂಘಗಳ ನಿರ್ವಹಣೆ ಬಗ್ಗೆ ತಿಳುವಳಿಕೆ ನೀಡಲು ಪ್ರಜಾಪ್ರಭುತ್ವ ಮಾದರಿಯ ಒಕ್ಕೂಟ ರಚಿಸಲಾಗಿರುತ್ತದೆ.

ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ಪದಾಧಿಕಾರಿಗಳು ಪೂಜ್ಯರ ಪ್ರತಿನಿಧಿಯಾಗಿ ಕೆಲಸ ಮಾಡುತ್ತಿದ್ದಾರೆ. ತಾಲ್ಲೂಕಿನ 68 ಒಕ್ಕೂಟಗಳು ಉತ್ತಮವಾಗಿ ನಡೆಯುತ್ತಿವೆ. ಯೋಜನೆಯ ವ್ಯವಹಾರಗಳು ಪಾರದರ್ಶಕವಾಗಿ ಜನರ ಮನೆಬಾಗಿಲಿಗೆ ತಲುಪಿಸುವ ಬರಿಗಾಲ ವೈದ್ಯರಾಗಿ ಪದಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷ ಬಸವರಾಜ ಸೊಪ್ಪಿಮಠ ಅಧ್ಯಕ್ಷತೆ ವಹಿಸಿದ್ದರು. ಮದ್ಯವರ್ಜನ ಶಿಬಿರ ವ್ಯವಸ್ಥಾಪನ ಸಮಿತಿ ಅಧ್ಯಕ್ಷ ಆನಂದ ನಾರಾಯಣ ಶೆಟ್ಟಿ, ಜಿಲ್ಲಾ ಒಚಖ ಯೋಜನಾಧಿಕಾರಿ ಮಹಾಂತೇಶ ಬುರುಡ, ವಿಮಾ ಸಮನ್ವಯಾಧಿಕಾರಿ ಧನಂಜಯ , ಯೋಜನಾಧಿಕಾರಿ ಸುಭಾಷ ಪಿ ಸಿ ಸ್ವಾಗತಿಸಿದರು. ಮೇಲ್ವಿಚಾರಕ ರಾಜಿತ, ಜ್ಞಾನವಿಕಾಸ ಸಮನ್ವಯಾಧಿಕಾರಿ ಮೀನಾರಾಣಿ ಕಾರ್ಯಕ್ರಮ ನಿರ್ವಹಿಸಿದರು. ಮೇಲ್ವಿಚಾರಕ ವಿನಾಯಕ ವಂದಿಸಿದರು.

## 2012ರ ಪೋಕೋ ಕಾಯ್ದೆ ಅನ್ವಯ ಬೆಂಬಲ ವ್ಯಕ್ತಿಗಳಆಗಾಗಿ ಅರ್ಜಿ ಆಹ್ವಾನ

ಕೊಪ್ಪಳ : ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಪೋಕೋ ಕಾಯ್ದೆಯಡಿ ಸಂತ್ರಸ್ತ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಿಗಾಗಿ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಮಕ್ಕಳೊಂದಿಗೆ ಕೆಲಸ ಮಾಡುವಲ್ಲಿ ಕನಿಷ್ಠ 3 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ, ಸಮಾಜಶಾಸ್ತ್ರ, ಮಕ್ಕಳ ಮನಃಶಾಸ್ತ್ರ ವಿಷಯಗಳಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು. ಪ್ರತಿ ಪ್ರಕರಣಕ್ಕೆ ರೂ. 3000 (ರೂಪಾಯಿ ಮೂರು ಸಾವಿರ) ಸಂಭಾವನೆ ನಿಗದಿಗೊಳಿಸಲಾಗಿದೆ. ಮಕ್ಕಳ ಆರೈಕೆ ಕೇಂದ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮತ್ತು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವ ಯಾವುದೇ ಸಂಸ್ಥೆ ಕೂಡ ಅರ್ಜಿ ಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ನಿರ್ವಹಿಸಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿ ನೀಡಲಾಗುತ್ತದೆ.

ಅರ್ಜಿ ನಮೂನೆಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಚೇರಿಯಿಂದ ಪಡೆದು ಸ್ವ ವಿವರ, ವಿದ್ಯಾರ್ಹತೆ ಪ್ರಮಾಣ ಪತ್ರ, ಅನುಭವ ಪ್ರಮಾಣ ಹಾಗೂ ಇತರೆ ಅಗತ್ಯ ದೃಢೀಕೃತ ಪ್ರಮಾಣ ಪತ್ರಗಳೊಂದಿಗೆ ಅಕ್ಟೋಬರ್ 29ರ ಸಂಜೆ 5.30 ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾಡಳಿತ ಭವನ ಕೊಪ್ಪಳ ವಿಳಾಸಕ್ಕೆ ಸಲ್ಲಿಸಬೇಕು ಎಂದು ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ: ಪ್ರತಿಜ್ಞೆ ಸ್ವೀಕಾರ ಕಾರ್ಯಕ್ರಮ ಅ.28ಕ್ಕೆ


ಕೊಪ್ಪಳ ಅಕ್ಟೋಬರ್ 23 (ಕರ್ನಾಟಕ ವಾರ್ತೆ): ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ ಅಂಗವಾಗಿ ಪ್ರತಿಜ್ಞೆ ಸ್ವೀಕಾರ ಕಾರ್ಯಕ್ರಮವನ್ನು ಅಕ್ಟೋಬರ್ 28ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ಅ.28 ರಿಂದ ನವೆಂಬರ್ 03ರ ವರೆಗೆ "ಜಾಗೃತಿ ಅರಿವು ಸಪ್ತಾಹ (Vigilance Awareness Week)" ವನ್ನು ಆಚರಿಸುವಂತೆ ಕೇಂದ್ರ ವಿಚಕ್ಷಣಾ ಆಯೋಗವು ನಿರ್ದೇಶನ ನೀಡಿರುವ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇಲಾಖೆಗಳು ಸಾರ್ವಜನಿಕ ವಲಯಗಳ ಬ್ಯಾಂಕ್, ಉದ್ದಿಮೆಗಳು, ನಿಗಮ, ಮಂಡಳಿಗಳು, ಸ್ಥಳೀಯ ಸಂಸ್ಥೆಗಳು ಮತ್ತು ಅನುದಾನಿತ ಸಂಸ್ಥೆಗಳು ಕರ್ನಾಟಕ ರಾಜ್ಯದಲ್ಲಿ ಅ.28ರಂದು ಒಂದು ಪ್ರತಿಜ್ಞೆಯನ್ನು ತೆಗೆದುಕೊಳ್ಳುವುದರ ಮೂಲಕ ಆಚರಿಸಲಾಗುತ್ತಿದೆ. ಈ ಪ್ರಯುಕ್ತ ಅ.28ರಂದು ಬೆಳಿಗ್ಗೆ 11 ಗಂಟೆಗೆ ಈ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆಯುವ ಪ್ರತಿಜ್ಞೆಯನ್ನು ಸ್ವೀಕಾರ ಕಾರ್ಯಕ್ರಮಕ್ಕೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ತಪ್ಪದೇ ಹಾಜರಾಗುವಂತೆ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಾತಂತ್ರ್ಯ ಸಂಗ್ರಾಮದ ಬೆಳ್ಳಿಚುಕ್ಕಿ, ಸ್ವಾಭಿಮಾನಿ ರಾಣಿ ಚನ್ನಮ್ಮ ಆದರ್ಶ ಪ್ರಾಯಳು ಚನ್ನಮ್ಮಳ ಜೀವನ ಮತ್ತು ಸಾಧನೆ ಪ್ರೇರಕ ಶಕ್ತಿಯಾಗಿದೆ : ಅಪರ ಜಿಲ್ಲಾಧಿಕಾರಿ ಗೀತಾ ಸಿಡಿ

ಧಾರವಾಡ : ದೇಶದಲ್ಲಿ ಮೊದಲ ಸ್ವಾತಂತ್ರ್ಯ ಸಂಗ್ರಾಮದ ಕಹಳೆ ಮೊಳಗಿಸಿದ್ದ ಕಿತ್ತೂರು ರಾಣಿ ಚನ್ನಮ್ಮ ಇಂದಿನ ಮಹಿಳೆಯರಿಗೆ ಆದರ್ಶ ಪ್ರಾಯರಾಗಿದ್ದಾರೆ. ಅವರ ಹೋರಾಟ, ಧೈರ್ಯ, ಸ್ಥೈರ್ಯ ಮತ್ತು ಸ್ವಾಭಿಮಾನಗಳು ಪ್ರತಿಯೊಬ್ಬ ಮಹಿಳೆಯಲ್ಲಿ ಇರಬೇಕು. ನಮ್ಮ ಹೆಣ್ಣುಮಕ್ಕಳಿಗೆ ರಾಣಿ ಚನ್ನಮ್ಮನ ಗುಣಗಳನ್ನು ಬೆಳೆಸಬೇಕು. ಸ್ವಾತಂತ್ರ್ಯ ಸಂಗ್ರಾಮದ ಬೆಳ್ಳಿಚುಕ್ಕಿ, ಸ್ವಾಭಿಮಾನಿ ಕಿತ್ತೂರು ರಾಣಿ ಚನ್ನಮ್ಮ ಆದ–ರ್ಶ ಪ್ರಾಯಳಾಗಿದ್ದು, ಅವರ ಜೀವನ ಮತ್ತು ಸಾಧನೆಗಳು ಎಲ್ಲರಿಗೂ ಪ್ರೇರಕ ಶಕ್ತಿಯಾಗಿವೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಇಂದು (ಅ.23) ಮದ್ಯಾಹ್ನ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದ್ದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ಕಿತ್ತೂರಿನ ರಾಣಿ ಚನ್ನಮ್ಮನ ಬಗ್ಗೆ ಅನೇಕ ರೀತಿಯ ಜನಪದ ಕಥ–ಗಳು, ಜನಪದ ಗೀತೆಗಳು, ಗೀಗಿ ಪದಗಳು ಸ್ವಾರಸ್ಯಕರವಾಗಿರುವ ಮತ್ತು ಐತಿಹಾಸಿಕವಾಗಿರುವ ಕಥೆಗಳನ್ನು ತಿಳಿಸುತ್ತವೆ. ಚಿಕ್ಕಂದಿನಿಂದಲೇ ಕುದುರೆ ಸವಾರಿ, ಕತ್ತಿವರಸೆ ಮತ್ತು ಬಿಲ್ಲುಗಾ–ರಿಕೆಯಲ್ಲಿ ತರಬೇತಿ ಪಡೆದಿದ್ದ ಚನ್ನಮ್ಮಳು, ಕಿತ್ತೂರಿನ ದೇಸಾಯಿ ಮನೆತನದ ರಾಜಾ ಮಲ್ಲಸರ್ಜನನ್ನು 15 ನೇ ವಯಸ್ಸಿನಲ್ಲಿ ವಿವಾಹವಾದರು. ಮಲ್ಲಸರ್ಜನ ನಿಧನಾ ನಂತರ ಕಿತ್ತೂರು ಸಂಸ್ಥಾನದ ಆಡಳಿತ ಚುಕ್ಕಾಣಿ ಹಿಡಿದ ಚನ್ನಮ್ಮಳು ಸ್ವಾಭಿಮಾನದಿಂದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಇತಿಹಾಸ ಸೃಷ್ಟಿಸಿದಳು,

ಕಿತ್ತೂರಿನ ವಿಜಯೋತ್ಸವಕ್ಕೆ ಎರಡು ನೂರು ವರ್ಷಗಳು ತುಂಬಿರುವ ಪ್ರಯುಕ್ತ, ರಾಣಿ ಚನ್ನಮ್ಮಳ ಸಂಸ್ಮರಣೆ ಮತ್ತು ಕಿತ್ತೂರಿನ ಇತಿಹಾಸವನ್ನು ನಾಡಿನೂದ್ದಕ್ಕೂ ಪ್ರಸರಿಸಿ, ಕೀರ್ತಿ ಹರಡಲು ರಾಜ್ಯ ಸರ್ಕಾರವು ಕಿತ್ತೂರು ವಿಜಯೋತ್ಸವದ ಜ್ಯೋತಿ ರಥ ಯಾತ್ರೆಯನ್ನು ಹಮ್ಮಿಕೊಂಡಿದೆ. ಜಿಲ್ಲೆಯಲ್ಲಿ ಜ್ಯೋತಿ ರಥ ಯಾತ್ರೆಯನ್ನು ಅದ್ದೂ–ರಿಯಾಗಿ ಸ್ವಾಗತಿಸಿ, ಬಿಳ್ಕೊಡಲಾಗಿದೆ ಎಂದು ಅವರು ಹೇಳಿದರು.

ಕಿತ್ತೂರಿನ ರಾಣಿ ಚನ್ನಮ್ಮಳ ಜೀವನ ಚ–ರಿತ್ರೆಯನ್ನು ಶಾಲಾ ಮಕ್ಕಳ ಪಠ್ಯ ಪುಸ್ತಕದಲ್ಲಿ ಅಳವಡಿಸಿ, ವಿದ್ಯಾರ್ಥಿಗಳಲ್ಲಿ ನಾಡಿನ ನಾಯಕರ ತ್ಯಾಗ, ಬಲಿದಾನ, ಸಾಧನೆಗಳನ್ನು ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ತಿಳಿಸಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯೆ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ಮತ್ತು ಚಿಂತಕ ಮಡಿವಾಳಪ್ಪ ಶಿರಿಯಣ್ಣವರ ಅವರು ಕಿತ್ತೂರು ರಾಣಿ ಚನ್ನಮ್ಮ ಅವರ ಜೀವನ ಮತ್ತು ಸಾಧನೆ ಬಗ್ಗೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೇಕ್ಕೇರಿ ಸ್ವಾಗತಿಸಿ, ಆರತಿ ದೇವಶಿಕಾಮಣಿ ಅವರು ಕಾರ್ಯಕ್ರಮವನ್ನು ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಮಹಾನಗರ ಪಾಲಿಕೆ ಸದಸ್ಯ ಶಂಭುಗೌಡ ಸಾಲಮನಿ, ಹಿರಿಯರಾದ ಸಿ.ಎಸ್. ಪಾಟೀಲ, ಸಿ.ಎಸ್. ನೇಗಿನಾಳ, ರಾಜು ಮಟ್ಟಿ, ಎನ್.ಆರ್.ಬಾಳಿಕಾಯಿ, ಗಾಮನಗಟ್ಟಿ ಹಾಗೂ ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮ



ಕಾರವಾರ – ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ, ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ, ಉಪ ವಿಭಾಗಾಧಿಕಾರಿ ಕನಿಷ್ಕ ಕಿತ್ತೂರು ರಾಣಿಚೆನ್ನಮ್ಮ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಶಿಕ್ಷಕ ಗಣೇಶ ಬಿಷ್ಠಣ್ಣನವರ ಕಿತ್ತೂರು ರಾಣಿಚೆನ್ನಮ್ಮ ಅವರ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ನಗರಸಭೆ ಪೌರಾಯುಕ್ತ ಜಗದೀಶ ಹುಲಿಗಜ್ಜೆ, ಚುನಾವಣಾ ತಹಶೀಲ್ದಾರ ಪ್ರಮೋದ ನಾಯ್ಕ, ಗ್ರೇಡ್–2 ತಹಶೀಲ್ದಾರ ರೂಪಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಗಲಾ ನಾಯ್ಕ ಮತ್ತಿತ್ತರರು ಉಪಸ್ಥಿತರಿದ್ದರು.

# ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಯುವ ಕಡ್ಡಾಯ ಕನ್ನಡ ಭಾಷೆ - ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ಸ್ವರ್ಧಾತ್ಮಕ ಪರೀಕ್ಷೆಗೆ ಅನುಸರಿಸಬೇಕಾದ ವಸ್ತ್ರ ಸಂಹಿತೆ

ಗದಗ : ಜಿಲ್ಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅ 26 ರಂದು ನಡೆಯುವ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ ಮತ್ತು ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಅಕ್ಟೋಬರ್ 27 ರಂದು ಜರುಗುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈ ಕೆಳಗಿನಂತೆ ವಸ್ತ್ರಸಂಹಿತೆ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಸೂಚಿಸಿದ್ದಾರೆ.



ಪುರುಷ ಅಭ್ಯರ್ಥಿಗಳ ವಸ್ತ್ರ ಸಂಹಿತೆ : ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಶರ್ಟ್‌ಗಳನ್ನು ಅನುಮತಿಸಲಾಗುವುದಿಲ್ಲವಾದ್ದರಿಂದ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್ಗಳನ್ನು ಧರಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ ಧರಿಸಲು ಆದ್ಯತೆ ನೀಡುವುದು. ಪ್ಯಾಂಟ್ ಮತ್ತು ಸರಳ ಪ್ಯಾಂಟ್ ( ಜೇಬುಗಳು ಇಲ್ಲದಿರುವ /ಕಮ್ಮಿ ಜೇಬುಗಳಿರುವ) ಪುರುಷ ಅಭ್ಯರ್ಥಿಗಳಿಗೆ ಆದ್ಯತೆಯ ಡ್ರೆಸ್ ಕೋಡ್ ಆಗಿದೆ. ಕುರ್ತಾ, ಪೈಜಾಮನ್ನು, ಜೀನ್ಸ್ ಪ್ಯಾಂಟ್ ಅನುಮತಿಸುವುದಿಲ್ಲ. ಪುರುಷ ಅಭ್ಯರ್ಥಿಗಳು ಧ–ರಿಸುವ ಬಟ್ಟೆಗಳು ಹಗುರವಾಗಿರಬೇಕು. ಅಂದರೆ ಜಿಪ್ ಪಾಕೆಟ್ ಗಳು , ಪಾಕೆಟ್ ಗಳು, ದೊಡ್ಡ ಬಟನ್ ಗಳು ಮತ್ತು ವಿಸ್ತಾರವಾದ ಕಸೂತಿ ಇರುವ ಬಟ್ಟೆಗಳು ಇರಬಾರದು. ಪರೀಕ್ಷಾ ಹಾಲ್ ಒಳಗೆ ಶೂಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಆಬ್ಯರ್ಥಿಗಳು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗ ಇರುವ ಚಪ್ಪಲಿಗಳನ್ನು ಧರಿಸುವುದು ಸೂಕ್ತ. ಅಭ್ಯರ್ಥಿಗಳು ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣಗಳನ್ನು ಧರಿಸುವುದು ಅಥ–ವಾ ಕಿವಿಯೋಲೆಗಳು, ಉಂಗುರಗಳು ಮತ್ತು ಕಡಗಗಳನ್ನು ಧರಿಸುವುದು ನಿಷೇಧಿಸಲಾಗಿದೆ.

ಮಹಿಳಾ ಅಭ್ಯರ್ಥಿಗಳ ವಸ್ತ್ರ ಸಂಹಿತೆ: ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್ ಗಳು ಅಥವಾ ಬಟನ್ ಗಳು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ. ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು/ ಜೀನ್ಸ್ ಪ್ಯಾಂಟ್ ಧರಿಸಬಾರದು. ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಅವರಿಗೆ ಮುಜುಗುರವಾಗದಂತೆ ಮತ್ತು ಉಲ್ಲೇಖಿಸಿರುವ ನಿಯಮದಂತೆ ಧರಿಸುವಂತೆ ನಿರ್ದೇಶಿಸಲಾಗಿದೆ. ಎತ್ತರವಾದ ಹಿಮ್ಮಡಿಯ ಶೂಗಳನ್ನು / ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ, ಚಪ್ಪಲಿಗಳನ್ನಾಗಲಿ ಧರಿಸಬಾರದು, ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿಗಳನ್ನು ಧರಿಸುವುದು ಕಡ್ಡಾಯವಾಗಿದೆ. ಮಹಿಳಾ ಅಭ್ಯರ್ಥಿಗಳು ಯಾವುದೇ ರೀತಿಯ ಲೋಹದ ಆಭರಣಗಳನ್ನು ಧರಿಸುವುದನ್ನು ನಿಷೇಧಿಸಿದೆ (ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ) .

ಡ್ರೆಸ್‌ಕೋಡ್ ಅನ್ನು ಅನುಸರಿಸುವುದರ ಜೊತೆಗೆ ಪರೀಕ್ಷಾ ಕೇಂದ್ರಕ್ಕೆ ಕೆಳಕಂಡ ವಸ್ತುಗಳನ್ನು ತೆಗೆದುಕೊಂಡು ಹೋಗದಂತೆ ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳಬೇಕು.

ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಫೋನ್‌ಗಳು, ಪೆನ್‌ಡ್ರೈವ್‌ಗಳು, ಇಯರ್ ಫೋನ್‌ಗಳು, ಮೈಕ್ರೋ ಫೋನ್‌ಗಳು, ಬ್ಲೂಟೂಥ್ ಸಾಧನಗಳು ಮತ್ತು ಕೈ ಗಡಿಯಾರಗಳನ್ನು ಪರೀಕ್ಷಾ ಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ. ತಿನ್ನಬಹುದಾದ ಪದಾರ್ಥಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ಹಾಗೂ ತಿನ್ನುವುದನ್ನು ನಿಷೇಧಿಸಲಾಗಿದೆ. ಕುಡಿಯುವ ನೀರಿನ ಬಾಟಲಿಗೂ ಸಹ ಅನುಮತಿ ಇರುವುದಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿಯೇ ಕುಡಿಯುವ ನೀರಿಗೆ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು.

ಪೆನ್ಸಿಲ್, ಪೇಪರ್, ಎರೇಸರ್, ಪರೀಕ್ಷಾ ಕೇಂದ್ರದೊಳಗೆ ತರುವಂತಿಲ್ಲ. ತಲೆಯ ಮೇಲೆ ಟೋಪಿ/ ಹ್ಯಾಟ್ ಧರಿಸಬಾರದು. ಯಾವುದೇ ರೀತಿಯ ಮಾಸ್ಕ್ ಧರಿಸುವಂತಿಲ್ಲ.

ಅಭ್ಯರ್ಥಿಗಳ ಪ್ರವೇಶ ಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು. ಪ್ರಾಧಿಕಾರವು ನಿಗದಿಪಡಿಸಿರುವ ಸೂಚನೆಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ದೀಪಾವಳಿ ಹಬ್ಬ : ಪರಿಸರ ಜಾಗೃತಿ ಕಾರ್ಯಕ್ರಮ



ಕಾರವಾರ – ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ, ಕಾರವಾರ ಹಾಗೂ ಸಂಗಮ ಸೇವಾ ಸಂಸ್ಥೆ (ರಿ) ಅಂಕೋಲಾ ಹಾಗೂ ಶಿವಾಜಿ ಬಾಲಮಂದಿರ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಬಾಡ, ಕಾರವಾರ ಇವರ ಸಂಂ–ಯುಕ್ತ ಆಶ್ರಯದಲ್ಲಿ ಶಿವಾಜಿ ಬಾಲಮಂದಿರ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಬಾಡ, ಕಾರವಾರದಲ್ಲಿ ಮಂಗಳವಾರ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸುವ ಕುರಿತು ಪರಿಸರ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಬಿ.ಕೆ. ಸಂತೋಷ, ಹಸಿರು ಪಟಾಕಿಯನ್ನು ಹೆಚ್ಚಾಗಿ ಬಳಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪಟಾಕಿಗಳಿಗೆ ಸಂಬಂಧಿಸಿದಂತೆ ಹಲವಾರು ನಿರ್ದೇಶನಗಳನ್ನು ನೀಡಿರುತ್ತದೆ. ಈಆದೇಶದಲ್ಲಿ ಸರ್ವೋಚ್ಚ ನ್ಯಾಯಾಲಯವು ರಾತ್ರಿ 8 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸ್ಫೋಟಿಸಲು ಅವಕಾಶ ನೀಡಿದೆ. ಉಳಿದ ಸಮಯದಲ್ಲಿ ಪಟಾಕಿಗಳ ಸ್ಫೋಟವನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಇದಲ್ಲದೆ ಸರ್ವೋಚ್ಚ ನ್ಯಾಯಾಲಯವು ನಿರ್ದೇಶನಗಳಲ್ಲಿ ಅನುಮತಿಸಿರುವ ಹಸಿರು ಪಟಾಕಿಗಳನ್ನು ಬಿಟ್ಟು ಉಳಿದ ಯಾವುದೇ ಇತರೆ ಪಟಾಕಿಗಳ ಮಾರಾಟ ಹಾಗೂ ಬಳಕೆಯನ್ನು ಸಹ ನಿಷೇಧಿಸಿದೆ. ಹಸಿರು ಪಟಾಕಿಯ ಮೇಲೆ ಹಸಿರು ಬಣ್ಣದಲ್ಲಿ CSIR (Council of Scientific & Industrial Research )& NEERI (National Environmental Engineering Research Institute) ಚಿಹ್ನೆ ಮತ್ತು ಕ್ಯೂಆರ್ ಕೋಡ್‌ಗಳನ್ನು ಮುದ್ರಿಸಿದ್ದು, ಅಂತಹ ಪಟಾಕಿಗಳನ್ನು ಮಾತ್ರ ಮಾರಾಟ ಮಾಡಲು ಮತ್ತು ಸಾರ್ವಜನಿಕರು ಉಪಯೋಗಿಸಲು ಅವಕಾಶ ಇರುತ್ತದೆ ಎಂದು ತಿಳಿಸಿದರು.

ಉಪ ಪರಿಸರ ಅಧಿಕಾರಿ ಡಾ. ಗಣಪತಿ ಹೆಗಡೆ, ವಿದ್ಯಾರ್ಥಿಗಳಿಗೆ ಪಟಾಕಿಯನ್ನು ಬಳಸುವುದರಿಂದ ಆಗುವ ಜಲ ಮಾಲಿನ್ಯ, ಶಬ್ಧ ಮಾಲಿನ್ಯ ಹಾಗೂ ವಾಯು ಮಾಲಿನ್ಯ ಮತ್ತು ಸ್ಪೋಟದ ತೀವ್ರತೆಯಿಂದ ಆಗುವ ಅನಾಹುತಗಳ ಬಗ್ಗೆ ತಿಳಿಸಿದರು. ಪಟಾಕಿಗಳಲ್ಲಿ ಭಾರ ಲೋಹವನ್ನು ಬಳಸುವುದರಿಂದ ಇದು ಮಾನವನ ಆರೋಗ್ಯದ ಮೇಲೆ ಹಾಗೂ ಇತರೇ ಪ್ರಾಣಿ ಪಕ್ಷಿಗಳ ಮೇಲೂ ದುಷ್ಪ–ರಿಣಾಮ ಬೀರುವುದಲ್ಲದೇ ಕಣ್ಣು ಉರಿ, ಚರ್ಮ ಸಂಬಂಧ ರೋಗಗಳು ಅಸ್ತಮಾ, ಅಲರ್ಜಿಗಳು ಹೆಚ್ಚಾಗಿ ಬಾಧಿಸುತ್ತದೆ ಎಂದು ತಿಳಿಸಿ ಪ್ರತಿಜ್ಞಾ ವಿಧಿ ಬೋಧಿಸಿದರು.

ಬಾಡ ಶಿವಾಜಿ ಬಾಲಮಂದಿರ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮುಖ್ಯೋಪಧ್ಯಾಯಕಿ ರೂಪಾ ಗಾಂವಕರ, ಸಂಗಮ ಸೇವಾ ಸಂಸ್ಥೆ (ರಿ) ಅಧ್ಯಕ್ಷ ರವೀಂದ್ರ ಎನ್.ಶೆಟ್ಟಿ, ಶಿಕ್ಷಕಿಯರಾದ ರಾಜೇಶ್ವರಿ, ವಿಜಯಾ ನಾಯ್ಕ, ವಿದ್ಯಾರ್ಥಿಗಳು ಇದ್ದರು.

# ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ ಅಭಿಯಾನ




ಕಾರವಾರ – ಸಿದ್ದಾಪುರ ತಾಲೂಕಿನ ಕವಂಚೂರು ಗ್ರಾಮ ಪಂಚಾಯತ್ ನಲ್ಲಿ 2025–26 ನೇ ಸಾಲಿನ ಆಯವ್ಯಯ ಮತ್ತು ನರೇಗಾ ಕ್ರಿಯಾ ಯೋಜನೆ ತಯಾರಿಸಲು ಗ್ರಾಮ ಸಭೆ ನಡೆಸಿ ಕಾಮಗಾರಿ ಮಾಹಿತಿ ನೀಡಿ ಸಾರ್ವಜನಿಕರು ಬೇಡಿಕೆಗಳನ್ನು ಪಂಚಾಯತಿಗೆ ಸಲ್ಲಿಸುವಂತೆ ತಿಳಿಸಲಾಯಿತು.

ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಸಭೆಯಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ನೀಡಲಾಗುವ ಕಾಮಗಾರಿ ವಿವರ ಹಾಗೂ ಯೋಜನೆಯ ಸಂಪೂರ್ಣ ಮಾಹಿತಿಯನ್ನು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಉಮೇಶ್ ಗೌಡರ್ ಹಾಗೂ ಐಇಸಿ ಸಂಯೋಜಕಿ ಪೂರ್ಣಿಮಾ ಗೌಡ ನೀಡಿದರು.

ಉದ್ಯೋಗ ಖಾತ್ರಿಯಡಿ ಗಂಡು ಹೆಣ್ಣಿಗೆ ದಿನಕ್ಕೆ 349ರೂ ಕೂಲಿ, ವರ್ಷದಲ್ಲಿ ಕುಟುಂಬವೊಂದಕ್ಕೆ 100 ದಿನಗಳ ಕೆಲಸ, ಕೆಲಸದ ಪ್ರಮಾಣ ಹಾಗೂ ಅವಧಿ, 65 ವರ್ಷ ಮೇಲ್ಪಟ್ಟವರು, ಅಂಗವಿಕಲರು ಹಾಗೂ ಲಿಂಗತ್ವ ಅಲ್ಪ ಸಂಖ್ಯಾತರು, ಗರ್ಭಿಣಿ ಹಾಗೂ ಬಾಣಂತಿಯರಿಗೆ ಕೆಲಸದಲ್ಲಿ ರಿಯಾಯತಿ ನೀಡುವ ಮೂಲಕ ಪ್ರೋತ್ಸಾಹಿಸಲಾಗುತ್ತಿದೆ ಎಂದರು.

ಯೋಜನೆಯಡಿ ವೈಯಕ್ತಿಕ ಕಾಮಗಾ–ರಿಗಳಾದ ಬಚ್ಚಲು ಗುಂಡಿ, ಎರೆಹುಳು ತೊಟ್ಟಿ, ದನದ ಕೊಟ್ಟಿಗೆ, ಕುರಿಶೇಡ್, ಕೋಳಿಶೇಡ್, ಬದು ನಿರ್ಮಾಣ ತೋಟಗಾ–ರಿಕಾ ಬೆಳೆಗಳಾದ ಅಡಿಕೆ, ಮಾವು, ಸಿಬೆ, ಹಿಪ್ಪು ನೇರಳೆ, ಕಾಳು ಮೆಣಸು ಹಾಗೂ ಇನ್ನಿತರೆ ಬೆಳೆಗಳನ್ನು ತೆಗೆದುಕೊಂಡು ಆರ್ಥಿಕವಾಗಿ ಸಬಲರಾಗಬಹುದು ಎಂಬುದರ ಅರಿವು ಮೂಡಿಸಲಾಯಿತು ಹಾಗೂ ನರೇಗಾ ಯೋಜನೆಯ ಮಾಹಿತಿಯುಳ್ಳ ಕರಪತ್ರಗಳನ್ನು ಹಂಚಿ ವೈಯಕ್ತಿಕ ಕಾಮಗಾರಿಗಳನ್ನು ಪಡೆದುಕೊಳ್ಳುವಂತೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ವಿಶಾಲಾಕ್ಷಿ ಜಿದ್ದಿ, ಉಪಾಧ್ಯಕ್ಷ ವಿನೋದ ಹರಿಜನ, ಹಾಗೂ ಸರ್ವ ಸದಸ್ಯರು, ಗ್ರಾಮ ಪಂಚಾಯತ್ ಅಧಿಕಾರಿಗಳಾದ ಬಸವರಾಜ್, ಶಾರದಾ ಹಾಗೂ ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಹಾಜರಿದ್ದರು.

# ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಆಚರಣೆ

ಗದಗ : ಜಿಲ್ಲಾಡಳಿತ ಭವನದ ಆಡಿಟೋ–ರಿಯಂ ಹಾಲ್‌ದಲ್ಲಿ ಬುಧವಾರ ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಕಾರ್ಯಕ್ರಮ ಆಚರಿಸಲಾಯಿತು.

ನರಗುಂದ ಶಾಸಕ ಸಿ.ಸಿ.ಪಾಟೀಲ ಅವರು ವೀರರಾಣಿ ಕಿತ್ತೂರು ಚೆನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಎಂ.ಬಿ.ಸಂಕದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ,ಬಿ.ಬಿ.ಅಸೂಟಿ,ಅಶೋಕ ಮಂದಾಲಿ,ಸಿದ್ದು ಪಲ್ಲೇದ,ಶರಣ ಪಾಟೀಲ್, ಕೃಷ್ಣಗೌಡ ಪಾಟೀಲ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು.



## ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮ

# ಸ್ವಾತಂತ್ರ್ಯ ಹೋರಾಟದಲ್ಲಿ ಕಿತ್ತೂರು ಚೆನ್ನಮ್ಮರ ಹೋರಾಟ ಹೆಣ್ಣುಮಕ್ಕಳಿಗೆ ಸ್ಫೂರ್ತಿಯಾಗಲಿ: ಹೇಮಲತಾ ನಾಯಕ

ಕೊಪ್ಪಳ : ಕಿತ್ತೂರು ರಾಣಿ ಚೆನ್ನಮ್ಮ ಸ್ವಾತಂತ್ರ್ಯ ಹೋರಾಟದಲ್ಲಿ ಹೋರಾಟದ ಕಿಚ್ಚು ಹಬ್ಬಿಸಿದಂತ ಮಹಿಳೆಯಾಗಿದ್ದು, ಸ್ವಾತಂತ್ರ್ಯಕ್ಕಾಗಿ ಮಾಡಿದಂತಹ ಅವರ ಹೋರಾಟ ಇಂದಿನ ಹೆಣ್ಣುಮಕ್ಕಳಿಗೆ ಸ್ಫೂರ್ತಿಯಾಗಬೇಕು ಎಂದು ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಸಾಹಿತ್ಯ ಭವನದಲ್ಲಿ ಬುಧವಾರದಂದು ಆಯೋಜಿಸಿದ್ದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟಿಷರ ವಿರುದ್ಧ ಹೋರಾಡಿದಂತ ಮಹಿಳೆ ಅವರು ಬ್ರಿಟಿಷರಿಗೆ ಸಿಂಹ ಸ್ವಪ್ನವಾಗಿ ಕಾಡುತ್ತಿದ್ದರು. ರಾಣಿ ಚೆನ್ನಮ್ಮ ಭಾರತದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ತ್ಯಾಗ ಮಾಡಿದಂತ ವೀರ ಮಹಿಳೆಯಾಗಿದ್ದರು. ಪ್ರತಿಯೊಬ್ಬ ಮಹಿಳೆಯು ಸಮಾಜದ ಮುನ್ನೆಲೆಗೆ ಬರಬೇಕು. ರಾಜ–ಕೀಯವಾಗಿ ಮಹಿಳೆಯರಿಗೆ 33% ಮೀಸಲಾತಿ ದೊರೆತಿದ್ದು, ಅದನ್ನು ಮಹಿಳೆಯರು ಬಳಸಿಕೊಂಡು ಕಿತ್ತೂರು ರಾಣಿ ಚೆನ್ನಮ್ಮ ಅವರಂತೆ ಸಾಧನೆ ಮಾಡಬೇಕು. ಜಗತ್ತನ್ನು ಆಳುವಂತ ಶಕ್ತಿ ಪ್ರತಿಯೊಬ್ಬ ಮಹಿಳೆಗೆ ಇದೆ ಎಂದು ಅವರು ಹೇಳಿದರು.

ಶೌರ್ಯ, ಧೈರ್ಯದ ಪ್ರತೀಕವಾದ ಸ್ವಾತಂತ್ರ್ಯದ ಬೆಳ್ಳಿ ಚುಕ್ಕಿ ವೀರಮಾತೆಯ ರಾಣಿ ಚೆನ್ನಮ್ಮನವರ ವಿದ್ಯೆ ಹಾಗೂ ಅವರ ಆದ–ರ್ಶಗಳನ್ನು ನಮ್ಮ ನೀಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮ ಅವರ ಹೋರಾಟದ ಪ್ರತಿಫಲದಿಂದ ಇಂದು ನಾವೆಲ್ಲರೂ ಸ್ವಾತಂತ್ರ್ಯರಾಗಿ ಬದುಕುತ್ತಿದ್ದೇವೆ. ಬ್ರಿಟಿಷರ ವಿರುದ್ಧ ಹೋರಾಡಿದಂತಹ ದೇಶದ ಮೊದಲ ಏಕೈಕ ಮಹಿಳೆ ಇವರಾಗಿದ್ದರು. ಕಿತ್ತೂರು ಚೆನ್ನಮ್ಮನವರ ಧೈರ್ಯ, ಸಂಸ್ಥಾನ ಆಳುವ ಜಾಣ್ಮೆ ಹಾಗೂ ಹೋರಾಟದ ಛಲವನ್ನು ಎಲ್ಲರೂ ಆದರ್ಶವಾಗಿ ಅಳವಡಿಸಿಕೊಂಡಾಗ ಮಾತ್ರ ಉತ್ತಮ ಸಮಾಜವನ್ನು ಕಟ್ಟುವುದಕ್ಕೆ ಸಾಧ್ಯವಾಗುತ್ತದೆ ಎಂದು ಹೇಳಿದರು. ಕರ್ನಾಟಕ ಗ್ರಾಮೀಣ ಬ್ಯಾಂಕ್ ನ ನಿವೃತ್ತ ಅಧಿಕಾ–ರಿಗಳು ಹಾಗೂ ಕೊಪ್ಪಳ ಜಿಲ್ಲಾ ಪಂಚಮಶಾಲಿ ಮಹಿಳಾ ಘಟಕದ ಅಧ್ಯಕ್ಷರಾದ ಸುಮಂಗಲಾ ಎಸ್ ಹಂಚಿನಾಳ ಅವರು ಕಿತ್ತೂರು ರಾಣಿ ಚೆನ್ನಮ್ಮರ ಕುರಿತು ವಿಶೇಷ ಉಪನ್ಯಾಸ ನೀಡಿ, ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟಿಷರಿಗೆ ಸೋಲುಣಿಸಿದ ಮಹಿಳೆ. ಕಿತ್ತೂರಿನ ಸ್ವಾಭಿಮಾನ, ಕೆಚ್ಚೆದೆಯ ವೀರರು ಬ್ರಿಟೀಷರಿಗೆ ಸಿಂಹ ಸ್ವಪ್ನವಾಗಿ ಕಾಡುತ್ತಿದ್ದರು ಎಂದು ತಿಳಿಸಿದ ಅವರು ರಾಣಿ ಚೆನ್ನಮ್ಮರ ಜೀವನ ಚರಿತ್ರೆ ಕುರಿತು ವಿವರವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ಲತಾ ಚಿನ್ನೂರು, ಉಮಾ ಪಾಟೀಲ್, ವಿರುಪಾಕ್ಷಪ್ಪ ಮೋರನಾಳ, ಮುತ್ತುರಾಜ ಕುಷ್ಟಗಿ, ಗುರುರಾಜ ಹಲಗೇರಿ, ಸರ್ವೇಶಗೌಡ ಹಾಗೂ ಚನ್ನಬಸಪ್ಪ ಕೋಟ್ಯಾಳ,

ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಕಳಕನಗೌಡ ಪಾಟೀಲ್, ಸಮಾಜದ ಮುಖಂಡರಾದ ಬಸನಗೌಡ, ಕ–ರಿಯಪ್ಪ ಮೇಟಿ, ವೀರಬಸಪ್ಪ, ಗವಿಸಿದ್ದಪ್ಪ ಡಂಬಳ, ಕಿಶೋರಿ ಬೂದನೂರ, ಗೀತಾ ಪಾಟೀಲ್, ಕೀರ್ತಿ ಪಾಟೀಲ್, ಪ್ರತಿಮಾ, ಸುಜಾತಾ ಪಟ್ಟಣಶೆಟ್ಟಿ ಕೊಪ್ಪಳ ಗ್ರೇಡ್–2 ತಹಸೀಲ್ದಾರ ಗವಿಸಿದ್ದಪ್ಪ ಮಣ್ಣೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ಮರಬನಳ್ಳಿ ಸೇ–ರಿದಂತೆ ಹಲವರು ಉಪಸ್ಥಿತ–ರಿದ್ದರು. ಹನುಮಂತಪ್ಪ ಕುರಿ ಅವರು ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಎಸ್. ಎಸ್.ಎಲ್ .ಸಿ ಮತ್ತು ಪಿ.ಯು.ಸಿ ಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಾಗೂ ಅವರ ಪಾಲಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರದ ಮೆರವಣಿಗೆಯು ನಗರದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ ಪ್ರಾರಂಭವಾಗಿ ಅಂಬೇಡ್ಕರ್ ಸರ್ಕಲ್, ಶಾರದಾ ಟಾಕೀಸ್, ಗಡಿಯಾರ ಕಂಬ ಮಾರ್ಗವಾಗಿ ಸಾಹಿತ್ಯ ಭವನದವರೆಗೆ ಅದ್ದೂರಿಯಾಗಿ ಜರುಗಿತು.

# BSNL ಗ್ರಾಹಕರನ್ನು ಡಿಜಿಟಲ್ ಮೋಡ್‌ನಲ್ಲಿ ಮರುಪರಿಶೀಲಿಸುವ ಕುರಿತು

ಕಾರವಾರ – ದೂರ ಸಂಪರ್ಕ ಇಲಾಖೆಯ ಮೊಬೈಲ್ ಸಂಖ್ಯೆ (ಸಿಮ್) ತೆಗೆದುಕೊಂಡ ಎಲ್ಲಾ BSNL ಗ್ರಾಹಕರನ್ನು ಡಿಜಿಟಲ್ ಮೋಡ್‌ನಲ್ಲಿ ಮರು ಪರಿಶೀಲಿಸುವಂತೆ ತಿಳಿಸಿದ್ದಾರೆ.

ಮರು–ಪರಿಶೀಲನೆಯು ಅಸ್ತಿತ್ವದಲ್ಲಿರುವ ಗ್ರಾಹಕರ ಗುರುತನ್ನು ದೃಢೀಕರಿಸುವ ಪ್ರಕ್ರಿಯೆಯಾಗಿದ್ದು, ಯಾವುದೇ BSNL CSC ಗಳು, BSNL ಫ್ರಾಂಚೈಸಿ ಮತ್ತು Retailer ಅಂಗಡಿಗಳಲ್ಲಿ ಗ್ರಾಹಕರು ತಮ್ಮ ಮೊಬೈಲ್ ಸಂಖ್ಯೆಯನ್ನು (SIM) ಮರು ವ–ರಿಶೀಲಿಸಬಹುದು. ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಗ್ರಾಹಕರು ಮತದಾರರ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡ್ ಅಥ–ವಾ ಡ್ರೈವಿಂಗ್ ಲೈಸೆನ್ಸ್‌ನ ಮೂಲ ಗುರುತಿನ ಪುರಾವೆಯನ್ನು ಒದಗಿಸಬೇಕಾಗುತ್ತದೆ. ಮರು ಪರಿಶೀಲನ ಅಗತ್ಯವಿರುವ ಮೊಬೈಲ್ ಸಂಖ್ಯೆಗೆ OTP ಬರುತ್ತದೆ. ಈ ಎಲ್ಲಾ ಗ್ರಾಹಕರು ಅ.31 ರೊಳಗಾಗಿ ಮರು ವರಿಶೀಲನೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಹತ್ತಿರದ BSNL CSC ಅಥವಾ ಫ್ರಾಂಚೈಸಿ/ Retailer ಮಳಿಗೆಗೆ ಭೇಟಿ ನೀಡುವಂತೆ BSNL ಕಾರ್ಯಾಚರಣಾ ಪ್ರದೇಶದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಗದಗ : 2024–25ನೇ ಸಾಲಿನಲ್ಲಿ ಗದಗ ಜಿಲ್ಲೆಯ ಮುಂಡರಗಿ ಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕಾಗಿ SHP (State Hostel Portal) ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ಪ್ರವೇಶಾತಿ ಸೇವೆಯನ್ನು ವೆಬ್‌ಸೈಟ್ ವಿಳಾಸ https://shp.karnataka.gov.in/ಮೂಲಕ ನವ್ಹೆಂಬರ್ 15 ರ ಒಳಗಾಗಿ ಆನ್–ಲೈನ್ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಕ್ಕೆ ನೀಡಬೇಕು.

ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಅಥವಾ ಮುಂಡರಗಿಯ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ, ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ.

# ಚನ್ನಮ್ಮಳ ಆದರ್ಶ ಮನುಕುಲಕ್ಕೆ ದಾರಿದೀಪ

## ಕಿತ್ತೂರ ಚೆನ್ನಮ್ಮಾಜಿ 246ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ತಹಶೀಲ್ದಾರ ಪ್ರಕಾಶ ಹೊಳೆಪ್ಪಗೋಳ



**ರಾಮದುರ್ಗ:** ವೀರರಾಣಿ ಕಿತ್ತೂರ ಚೆನ್ನಮ್ಮಾಜಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದ ಮಹಿಳಾ ಹೋರಾಟಗಾರ್ತಿಯಾಗಿದ್ದು, ಬ್ರಿಟಿಷರ ವಿರುದ್ಧ ಕಿತ್ತೂರ ಸಂಸ್ಥಾನವನ್ನು ರಕ್ಷಿಸಲು ಪಣತೊಟ್ಟು ವಿಜಯಶಾಲಿಯಾದ ಪ್ರಯುಕ್ತ ಪ್ರತಿವರ್ಷ ಕಿತ್ತೂರ ಉತ್ಸವ ಆಚ-ರಣೆ ಮಾಡಲಾಗುತ್ತಿದೆ ಎಂದು ತಹಶೀಲ್ದಾರ ಪ್ರಕಾಶ ಹೊಳೆಪ್ಪಗೋಳ ಹೇಳಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ವೀರರಾಣಿ ಕಿತ್ತೂರ ಚೆನ್ನಮ್ಮಾಜಿ 246ನೇ ಜಯಂತ್ಯೋತ್ಸವ ಹಾಗೂ 200ನೇ ವಿಜಯೋತ್ಸವ ಕಾರ್ಯಕ್ರಮಕ್ಕೆ ಚೆನ್ನಮ್ಮಾಜಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ನಾಡನ್ನು ರಕ್ಷಿಸಲು ಅನೇಕ ವೀರ ವನಿತೆಯರು ತಮ್ಮ ಪ್ರಾಣವನ್ನೇ ಮುಡುಪಾಗಿಟ್ಟು ಹೋರಾಟ ಮಾಡಿದ್ದು, ಅದರಲ್ಲಿ ವೀರರಾಣಿ ಕಿತ್ತೂರ ಚೆನ್ನಮ್ಮಾಜಿ ಅಗ್ರಗಣ್ಯರಾಗಿದ್ದಾರೆ. ಅವರ ಆದರ್ಶಗಳು ಕೇವಲ ಲಿಂಗಾಯತ ಸಮಾಜಕ್ಕಷ್ಟೇ ಅಲ್ಲದೆ ಮನುಕುಲಕ್ಕೆ ದಾರಿದೀಪವಾಗಿವೆ. ಸುಮಾರು ಮೂರು ದಿನಗಳ ವರೆಗೆ ಕಿತ್ತೂರಿನಲ್ಲಿ ನಡೆಯುವ ವಿಜಯೋತ್ಸವ ಕಾರ್ಯಕ್ರಮದಲ್ಲಿ ತಾಲೂಕಿನ ಜನತೆ ಪಾಲ್ಗೊಂಡು ಚೆನ್ನಮ್ಮಾಜಿಯ ಇತಿಹಾಸ ಅರಿತುಕೊಳ್ಳಬೇಕು ಎಂದರು.

ಪಂಚಮಸಾಲಿ ಸಮಾಜ ಹಿರಿಯ ಮುಖಂಡ ವೈ.ಎಚ್. ಪಾಟೀಲ ಮಾತನಾಡಿ, ಬ್ರಿಟಿಷ್ ಸರಕಾರದ ವಿರುದ್ಧ ಹೋರಾಟ ಮಾಡಿದ ಚೆನ್ನಮ್ಮಾಜಿ ಅವರ ಶೌರ್ಯ ಗುಣಗಳು ಸರ್ವರಿಗೂ ಮಾರ್ಗದರ್ಶಿಯಾಗಿವೆ. ಅವರ ಜಯಂತಿ ಆಚರಣೆ ಜೊತೆಗೆ ಅವರ ತ್ಯಾಗ ಬಲಿದಾನದ ಗುಣಗಳನ್ನು ಅರಿಯಬೇಕು ಎಂದರು.

ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಾರುತಿ ಕೊಪ್ಪದ ಮಾತನಾಡಿ, ಚೆನ್ನಮ್ಮಾಜಿ ಅವರ ಕುಟುಂಬದಲ್ಲಿ ಸಂಸ್ಕಾರಯುತ ಹಾಗೂ ಶೌರ್ಯದ ಗುಣಗಳನ್ನು ಗುರುತಿಸಿ, ಅವರಿಗೆ ಆಳ್ವಿಕೆಗೆ ಪಟ್ಟ ಕಟ್ಟುತ್ತಾರೆ. ಬ್ರಿಟಿಷರು ಭಾರತೀಯರ ಮೇಲೆ ಹಾಗೂ ಕಿತ್ತೂರ ನಾಡಿನ ಮೇಲೆ ವಿಧಿಸಿದ್ದ ತೆರಿಗೆ ಸಂಗ್ರಹ ನೀತಿಯನ್ನು ವಿರೋಧಿಸಿ, ಬ್ರಿಟಿಷ್ ಸರಕಾರಕ್ಕೆ ಸಿಂಹಸ್ವಪ್ನವಾಗಿ ನಾಡಿನ ರಕ್ಷಣೆ ಮಾಡಿದ ಕೀರ್ತಿ ಚೆನ್ನಮ್ಮಾಜಿಗೆ ಸಲ್ಲುತ್ತದೆ ಎಂದರು.

ಈ ಸಂದರ್ಭದಲ್ಲಿ ಪಂಚಮಸಾಲಿ ಸಮಾಜ ಹಿರಿಯ ಮುಖಂಡ ಪರುತಗೌಡ ಪಾಟೀಲ, ಜಿ.ವ್ಹಿ. ನಾಡಗೌಡ್ರ, ಡಾ. ಬಿ.ಎಲ್. ಸಂಕನಗೌಡ್ರ, ಪತ್ರಕರ್ತ ಗೌಡಪ್ಪಗೌಡ ಪಾಟೀಲ, ಉಮೇಶಗೌಡ ಪಾಟೀಲ, ಕುರುಬ ಸಮಾಜದ ತಾಲೂಕಾಧ್ಯಕ್ಷ ಪಡಿಯಪ್ಪ ಕ್ವಾರಿ, ರೈತ ಮುಖಂಡರಾದ ಮಲ್ಲಿಕಾರ್ಜುನ ರಾಮದುರ್ಗ, ಈರಣ್ಣ ರಾಜನಾಳ, ಮಹಾದೇವ ತ್ಯಾವಟಗಿ, ಇಮಾಮಸಾಬ ಮುಜಾವರ, ಸಹಾಯಕ ಕೃಷಿ ನಿರ್ದೇಶಕ ಎಸ್.ಎಫ್. ಬೆಳವಟಗಿ, ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕಿ ಸಂಗೀತಾ ಕುರೇರ, ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ಆರ್. ಮಂಜುಳಾ, ಎಪಿಎಂಸಿ ಕಾರ್ಯದರ್ಶಿ ಶಿವು ಮಠದ ಸೇರಿದಂತೆ ಇತರರಿದ್ದರು.ಪತ್ರಕರ್ತ ಗೌಡಪ್ಪಗೌಡ ಪಾಟೀಲ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

# ಕನ್ನಡ ರಾಜ್ಯೋತ್ಸವ ಸಂಭ್ರಮದಿಂದ ಆಚ-

**ತಾಳಿಕೋಟೆ:** ನ.1 ಆಚರಿಸಲಾಗುವ 87ನೇ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಡಗರದೊಂದಿಗೆ ಅರ್ಥಪೂರ್ಣವಾಗಿ ಆಚರಿಸಲು ತಾಲೂಕಾಡಳಿತದ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ನಿರ್ಧರಿಸಲಾಯಿತು.

ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಬುಧವಾರರಂದು ತಹಸಿಲ್ದಾರ್ ಕೀರ್ತಿ ಚಾಲಕ್ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯೋತ್ಸವದ ಪೂರ್ವಭಾವಿ ಸಭೆಯ ಕಾರ್ಯಕ್ರಮದಲ್ಲಿ ರಾಜ್ಯೋತ್ಸವ ಆಚರಣೆಗೆ ಸಂಬಂದಿಸಿ ಸಿದ್ಧತೆಗಳ ಕುರಿತು ಚರ್ಚಿಸಿ ವಿವಿಧ ಜವಾಬ್ದಾರಿಗಳನ್ನು ವಹಿಸಿಕೊಡಲಾಯಿತು.

ನ. 1 ರಂದು ಬೆಳಿಗ್ಗೆ 8ಕ್ಕೆ ತಾಲೂಕಿನ ವ್ಯಾಪ್ತಿಯ ಎಲ್ಲಾ ಸರ್ಕಾರಿ ಶಾಲಾ ಕಾಲೇಜು ಹಾಗೂ ಕಚೇರಿಗಳಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆಸಲ್ಲಿಸುವುದು. ಮುಂಜಾನೆ 8:45ಕ್ಕೆ ತಾಲೂಕುಆಡಳಿತದಿಂದ ಸರ್ಕಾರಿ ಕನ್ನಡ ಶಾಲೆ ಮೈದಾನದಲ್ಲಿ ಪಟ್ಟಣದ ಎಲ್ಲ ಶಾಲಾ ಕಾಲೇಜು ಹಾಗೂ ಕನ್ನಡ ಪರ ಸಂಘಟನೆಗಳ ಹಾಗೂ ಕನ್ನಡಾಭಿಮಾಣಿಗಳ ಸಹಯೋಗದೊಂದಿಗೆ ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜಿಸಲ್ಲಿಸಿ, ಧ್ವಜಾರೋಹಣ ನೆರವೇರಿಸಿ ನಂತರ ವೇದಿಕೆ ಕಾರ್ಯಕ್ರಮ ಜರುಗಿಸುವ ಕುರಿತು ಚರ್ಚಿಸಲಾಯಿತು.

ರಾಜ್ಯೋತ್ಸವದ ಕುರಿತು ವಿಶೇಷ ಉಪನ್ಯಾಸ ಹಾಗೂ ಶಾಲಾ ಮಕ್ಕಳಿಂದ ಸಂಸ್ಕೃತಿಕ ಕಾರ್ಯಕ್ರಮ, ಇದೇ ಸಮಯದಲ್ಲಿ ಭಾಷಣ ಸ್ಪರ್ದೆ ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದವರಿಗೆ ಸನ್ಮಾನಿಸಲಾಗುವುದು ಎಂದು ಸಭೆಯಲ್ಲಿ ನಿರ್ಧರಿಸಲಾಯಿತು.



**ಕ್ರಮಕ್ಕೆ ಒತ್ತಾಯ :** ಕನ್ನಡ ರಾಜ್ಯೋತ್ಸವವು ಎಲ್ಲ ಜನರಿಗೆ ಅನ್ವಯಿಸುವಂತಹದ್ದಾಗಿದೆ ಇಂತಹ ಕಾರ್ಯಕ್ರಮಗಳಿಗೆ ರೂಪ ರೇಶ ತಯಾರಿಸುವ ಸಮಯದಲ್ಲಿ ಪೂರ್ವಭಾವಿ ಸಭೆ ಕರೆದಾಗ ಅನೇಕ ಅಧಿಕಾರಿ ವರ್ಗದವರು ಗೈರು ಉಳಿಯುತ್ತಾ ಸಾಗಿದ್ದಾರೆ ಅಂತಹ ಅಧಿಕಾರಿಗಳ ನೋಟೀಸು ನೀಡುವದರೊಂದಿಗೆ ಅವರ ಮೇಲೆ ಸಿಸ್ತು ಕ್ರಮ ಜರುಗಿಸಲು ಮೇಲಾಧಿಕಾರಿಗಳು ವರಧಿ ಸಲ್ಲಿಸಬೇಕೆಂದು ಕನ್ನಡ ಪರ ಸಂಘಟಕರು ಅಲ್ಲದೇ ಕನ್ನಡಾಭಿಮಾನಿಗಳು ಇದೇ ಸಮಯದಲ್ಲಿ ಒತ್ತಾಯಿಸಿದ ಘಟನೆ ನಡೆಯಿತು.

ಕಸಾಪ ಅಧ್ಯಕ್ಷ ಆರ್.ಎಲ್.ಕೊಪ್ಪದ, ತಾಪಂ. ಕಾರ್ಯಾಲಯದ ಸುಜಾತ ಯಡ್ರಾಮಿ, ಪಿಎಸ್ಐ ಆರ್.ಎಸ್.ಭಂಗಿ, ಶಿರಸ್ತೆದಾರ ಜೆ.ಆರ್.ಜೈನಾಪೂರ, ಪುರಸಭೆ ಸದಸ್ಯ ಪರಶುರಾಮ ತಂಗಡಗಿ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಜೈಸಿಂಗ್ ಮೂಲಿಮನಿ, ಮೋಹನ ಬಡಿಗೇರ, ಗಣ್ಯರಾದ ಕಾಶಿನಾಥ ಮುರಾಳ, ಅಶೋಕ ಬಳಗಾನೂರ, ಅಶೋಕ ಶೆಟ್ಟಿ, ಪ್ರಕಾಶ ಹಜೇರಿ, ಪ್ರಭುಗೌಡ ಮದರಕಲ್, ಬಾಬು ಹಜೇರಿ, ಇಬ್ರಾಹಿಂ ಮನ್ಸೂರ್, ಕರವೇ ಸಂಘಟನೆಯ ಜೈಭೀಮ ಮುತ್ತಗಿ, ಸಿಆರ್‌ಸಿ ರಾಜು ವಿಜಾಪುರ, ಡಾ.ಅನೀತಾ ಸಜ್ಜನ, ಗೋಪಾಲ ಕಟ್ಟಿಮನಿ. ವೆಂಕೋಬ ನಾಯ್ಕೋಡಿ, ಮುನ್ನಾ ಅತ್ತಾರ, ಸುರೇಶ ಅಮರಣ್ಣವರ, ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಕನ್ನಡಾಭಿಮಾನಿಗಳು, ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರುಗಳು ಉಪಸ್ಥಿತರಿದ್ದರು.

## ಚೂರು-ಪಾರು

### ವೀರರಾಣಿ ಕಿತ್ತೂರ ಚೆನ್ನಮ್ಮಳ ಜಯಂತ್ಯೋತ್ಸವ ಆಚರಣೆ



**ತಾಳಿಕೋಟೆ:** ಪಟ್ಟಣದ ಶ್ರೀ ಎಸ್ ಎಸ್ ವಿದ್ಯಾಸಂಸ್ಥೆಯಲ್ಲಿ ಬುಧವಾರರಂದು ಸ್ವಾತಂತ್ರ ಕಹಳೆ ಮೊಳಗಿಸಿದ ಕಿತ್ತೂರಾಣಿ ಚೆನ್ನಮ್ಮಾ-ಜಿಯ 246ನೇ ಜಯಂತ್ಯೋತ್ಸವವನ್ನು ಆಚರಿಸಲಾಯಿತು. ಚೆನ್ನಮ್ಮಳ ಭಾವಚಿತ್ರಕ್ಕೆ ನಿವೃತ್ತ ದೈಹಿಕ ಶೀಕ್ಷಕ ಆರ್.ಎಲ್.ಕೊಪ್ಪದ ಅವರು ಮಹಾ ಪೂಜೆ ಸಲ್ಲಿಸಿದರು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಎಚ್.ಎಸ್. ಪಾಟೀಲ ಅವರು ಮಾತನಾಡಿ ವೀರ ರಾಣಿ ಕಿತ್ತೂರ ಚನ್ನಮ್ಮಳ ಆದ-ರ್ಶ ಎಲ್ಲರಿಗೂ ಪ್ರೇರಣೆಯಾಗಿದೆ ವಿದ್ಯಾರ್ಥಿಗಳು ವೀರ ಮಹಾಪುರುಷರ ಕಥೆಗಳನ್ನು ಓದುವದರೊಂದಿಗೆ ಅವರ ಇತಿಹಾಸ ಅರೀತುಕೊಳ್ಳಬೇಕು ಮತ್ತು ಅವರ ಆದರ್ಶದ ಹಾದಿಯಲ್ಲಿ ಸಾಗಬೇಕೆಂದರು.ಸಂಸ್ಥೆಯ ಕಾರ್ಯದರ್ಶಿ ಸಚಿನ. ಎಚ. ಪಾಟೀಲ, ಎಸ್.ವಿ.ಜಾಮಗೊಂಡಿ, ಎಮ್.ಎಸ್.ರಾಯಗೊಂಡ, ಬಿ.ಐ.ಹಿರೇಹೊಳಿ, ಎಸ್.ಬಿ.ಸಾಸನೂರ, ಯು.ಎಚ್.ಗಟನೂರ, ವಿ.ಎ..ವಿಜಾಪೂರ, ಎಮ್.ಎಸ್.ಬಿರಾದಾರ, ಜೆ.ಎಮ್.ಕೊಣ್ಣೂರ,ಎಸ್.ಸಿ.ಗುಡಗುಂಟಿ, ಎಚ್.ಬಿ.ಪಾಟೀಲ, ಎಸ್.ಎಸ್.ಪಾಟೀಲ, ಕಾಶೀನಾಥ ನಾಲತವಾಡ ಮೊದಲಾದವರು ಉಪಸ್ಥಿತರಿದ್ದರು.

### ರಾಮದುರ್ಗ: ವಾತ್ಸಲ್ಯ ಮನೆ ಹಸ್ತಾಂತರ



**ರಾಮದುರ್ಗ:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ನೇತೃತ್ವದಲ್ಲಿ ಸಮಾಜದಲ್ಲಿರುವ ನಿರ್ಗತಿಕರಿಗೆ, ಅಸಹಾಯಕರಿಗೆ ಯೋಜನೆಯ ಅಡಿಯಲ್ಲಿ ತಾಲೂಕಿನ ಗೊಣ್ಣಾಗರ ಗ್ರಾಮದ ಯಲ್ಲವ್ವ ಘಾಟಗೆ ಅವರಿಗೆ ನಿರ್ಮಿಸಿದ ವಾತ್ಸಲ್ಯ ಮನೆಯನ್ನು ಸಂಸ್ಥೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಬುಧವಾರ ಹಸ್ತಾಂತರಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಜಿಲ್ಲಾ ನಿರ್ದೇಶಕ ಎಚ್.ಆರ್. ಲವಕುಮಾರ, ವಾಲ್ಸತ್ಯ ಮನೆಗಳನ್ನು ಸಮಾಜದಲ್ಲಿ ಕಡು ಬಡವರು, ಸೂರು ಇಲ್ಲದ ನಿರ್ಗತಿಕರಿಗೆ ಅವರ ಯೋಗಕ್ಷೇಮದ ಹಿತದೃಷ್ಠಿಯಿಂದ ಶ್ರೀ ಹೆಗ್ಗಡೆಯವರ ಮಾರ್ಗದರ್ಶನದಂತೆ ನಿರ್ಮಿಸಿ ಕೊಡಲಾಗುತ್ತಿದೆ. ಫಲಾನುಭವಿಗಳು ಸಂಸ್ಥೆಯ ಯೋಜನೆಗಳ ಸದ್ಭಳಕೆ ಮಾಡಿಕೊಳ್ಳಬೇಕು ಎಂದರು.ಜಿಲ್ಲಾ ಜನಜಾಗೃತಿ ವೇದಿಕೆಯ ನಿಕಟಪೂರ್ವ ಅಧ್ಯಕ್ಷ ಅಶೋಕ ಕುಲಗೋಡ, ಸದಸ್ಯರಾದ ರಮೇಶ ಜಲಗೇರಿ, ಧಾರವಾಡ ಪ್ರಾದೇಶಿಕ ಜ್ಞಾನವಿಕಾಶ ವಿಭಾಗದ ಯೋಜನಾಧಿಕಾರಿ ಮಲ್ಲಿಕಾ, ತಾಲೂಕು ಯೋಜನಾಧಿಕಾರಿ ಸಚಿನ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಸುನಿತಾ ಬಡಿಗೇರ, ಗ್ರಾ.ಪಂ ಸದಸ್ಯರಾದ ಶಿವರಾಯಪ್ಪ ಕೇರಿ, ಕಸ್ತೂರೆವ್ವ, ದಯಾನಂದ ಶಿರೂರ, ಮುಖಂಡರಾದ ಗೋಪಾಲ ಪಾತಾಳಿ, ಗೋವಿಂದಪ್ಪ ತಳವಾರ, ಕುಮಾರ ಉಪ್ಪಿನ, ಶೌರ್ಯ ವಿಪತ್ತು ನಿರ್ವಹಣಾ ಸ್ವಯಂ ಸೇವಕರು, ಸೇವಾ ಪ್ರತಿನಿಧಿಗಳು ಮತ್ತಿತರರು ಇದ್ದರು.

# ನಾಡ ಧರ್ಮ ಎತ್ತಿಹಿಡಿದ ಮೊದಲ ಮಹಿಳೆ

## ಕಿತ್ತೂರ ಚನ್ನಮ್ಮ ವಿಜಯೋತ್ಸವದಲ್ಲಿ ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಅಭಿಮತ

**ಬಸವನಬಾಗೇವಾಡಿ:** ದೇಶದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಗುರುಧರ್ಮ, ದೇಶಪ್ರೇಮ, ನಾಡ ಧರ್ಮವನ್ನು ಎತ್ತಿಹಿಡಿದ ಮೊಟ್ಟ ಮೊದಲ ಮಹಿಳೆಯಾಗಿದ್ದಾಳೆ ಎಂದು ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಬುಧವಾರ ತಾಲೂಕು ಪಂಚಮಸಾಲಿ ಸಮಾಜವು ಹಮ್ಮಿಕೊಂಡಿದ್ದ ವೀರರಾಣಿ ಕಿತ್ತೂರ ಚನ್ನಮ್ಮಾಜೀಯ 200ನೇ ವಿಜಯೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಕಿತ್ತೂರು ರಾಣಿ ಚನ್ನಮ್ಮಾ ಅವರ ಭಾವಚಿತ್ರವನ್ನು ನೋಡಿದಾಗ ಯುದ್ಧ ಮಾಡುವ ಸಂದರ್ಭದಲ್ಲಿಯೂ ಲಿಂಗವನ್ನು ಕಾಣಿಸುವಂತೆ ಹಾಕಿಕೊಂಡಿರುವದನ್ನು ನೋಡಿದಾಗ ನಾವು ವೀರಶೈವ ಲಿಂಗಾಯತ ಧರ್ಮದವರು ಎಂಬುವದನ್ನು ತೋರಿಸುತ್ತದೆ. ರಾಣಿ ಚನ್ನಮ್ಮಾಳ ಗುರುಭಕ್ತಿ, ಲಿಂಗಪೂಜೆ, ನಾಡಪ್ರೇಮ, ದೇಶಭಕ್ತಿಯ ಆದರ್ಶವನ್ನು ಇಡೀ ಸಮಾಜವು ಅನುಸ-ರಿಸುವದು ತುಂಬಾ ಅಗತ್ಯವಿದೆ ಎಂದರು.

ದೇವರಹಿಪ್ಪರಗಿ ಶಾಸಕ ಭೀಮನಗೌಡ(ರಾಜುಗೌಡ) ಪಾಟೀಲ ಮಾತನಾಡಿ, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಸಾಕಷ್ಟು ಮಹನೀಯರು ಹೋರಾಟ ಮಾಡಿದ್ದನ್ನು ಇತಿಹಾಸದಿಂದ ತಿಳಿದುಕೊಳ್ಳುತ್ತೇವೆ. ಸ್ವಾತಂತ್ರ್ಯ ಹೋರಾಟದಲ್ಲಿ ಮುಂಚೂಣಿಯಲ್ಲಿ ನಿಂತ ಪ್ರಥಮ ಮಹಿಳೆಯೆಂದರೆ ಕಿತ್ತೂರು ರಾಣಿ ಚನ್ನಮ್ಮ ಆಗಿದ್ದಾರೆ.



ದೇಶದ ಆಡಳಿತ ಚುಕ್ಕಾಣಿ ಹಿಡಿಯಲು ಬಂದ ಆಂಗ್ಲರ ವಿರುದ್ಧ ತನ್ನ ಪ್ರಾಣವನ್ನು ಪಣಕ್ಕಿಟ್ಟು ಹೋರಾಟ ಮಾಡುವ ಮೂಲಕ ಕಿತ್ತೂರು ಸಂಸ್ಥಾನವನ್ನು ಸಂರಕ್ಷಣೆ ಮಾಡಿದರು. ಕಿತ್ತೂರು ರಾಣಿ ಚನ್ನಮ್ಮಾಳ ಆದರ್ಶ, ವೀರತನ ಇಂದಿನ ಯುವಜನಾಂಗ ಅಳವಡಿಸಿಕೊಳ್ಳುವ ಅಗತ್ಯವಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದ ಎಲ್ಲ ಮಹನೀಯರ ಜೀವನ ಸಂದೇಶಗಳನ್ನು ಅರಿತುಕೊಂಡು ದೇಶವನ್ನು ಪ್ರಗತಿಯತ್ತ ತೆಗೆದುಕೊಂಡು ಹೋಗಬೇಕಾದ ಅಗತ್ಯವಿದೆ ಎಂದರು.

ರಾಣಿಚನ್ನಮ್ಮ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಬಸವರಾಜ ಕೋಲಾರ ಉಪನ್ಯಾಸ ನೀಡಿ ಮಾತನಾಡಿದ ಅವರು, ದೇಶದ ಸ್ವಾತಂತ್ರ್ಯದ ಕಿಚ್ಚು ಹಚ್ಚುವ ಮೂಲಕ ಚನ್ನಮ್ಮಾಜೀ ಆಂಗ್ಲರ ಪಾಲಿಗೆ ಸಿಂಹಸ್ವಪ್ನವಾಗಿದ್ದಳು. ವೀರರಾಣಿ ಕಿತ್ತೂರು ಚನ್ನಮ್ಮಳು ಪಂಚಮಸಾಲಿ ಸಮಾಜ ಬಾಂಧವರಿಗೆ ಕುಲತಿಲಕವಿದ್ದಂತೆ. ಇದನ್ನು ಅರಿತುಕೊಂಡು ಸಮಾಜ ಬಾಂಧವರು ಅವಳ ಆದ-ರ್ಶವನ್ನು ಮೈಗೂಡಿಸಿಕೊಳ್ಳಬೇಕೆಂದರು.

ಸಾನಿಧ್ಯ ವಹಿಸಿದ್ದ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ, ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಬಸವರಾಜ ಗೊಳಸಂಗಿ, ಬಸವೇಶ್ವರ ಸೇವಾ ಸಮಿತಿಯ ಸದಸ್ಯ ಎಂ.ಜಿ.ಆದಿಗೊಂಡ ಮಾತನಾಡಿದರು.

ವೇದಿಕೆಯಲ್ಲಿ ಸಾಹಿತಿ ಲ.ರು.ಗೊಳಸಂಗಿ, ನಿವೃತ್ತ ನೌಕರರ ಸಂಘದ ತಾಲೂಕಾಧ್ಯಕ್ಷ ಎಫ್.ಡಿ.ಮೇಟಿ, ಮುಖಂಡರಾದ ಬಸವರಾಜ ಹಾರಿವಾಳ, ಬಸಣ್ಣ ದೇಸಾಯಿ, ಸುರೇಶ ಹಾರಿವಾಳ, ಚಂದ್ರಶೇಖರಗೌಡ ಪಾಟೀಲ, ಜಗದೀಶ ಕೊಟ್ರಶೆಟ್ಟಿ, ಸಿದ್ದು ಉಕ್ಕಲಿ, ಬಸವರಾಜ ಕೋಟಿ, ಶಿವಾನಂದ ಮಂಗಾನವರ, ಗುರುನಗೌಡ ಬಿರಾದಾರ, ಪಿಐ ಗುರುಶಾಂತ ದಾಶ್ಯಾಳ, ಹಿಂದುಳಿದ ವರ್ಗಗಳ ಇಲಾಖೆಯ ವಿಸ್ತೀರ್ಣಾಧಿಕಾರಿ ಎಸ್.ಬಿ.ನಿಂಬಾಳ ಇತರರು ಇದ್ದರು. ರಾಷ್ಟ್ರೀಯ ಬಸವಸೈನ್ಯ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಸ್ವಾಗತಿಸಿದರು. ಶಿಕ್ಷಕ ಕೊಟ್ರೇಶ ಹೆಗ್ಡಾಳ ನಿರೂಪಿಸಿದರು. ಪಿಕೆಪಿಎಸ್ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ವಂದಿಸಿದರು.

ಕಾರ್ಯಕ್ರಮಕ್ಕೂ ಮುನ್ನ ತಹಸೀಲ್ದಾರ ಕಚೇರಿ ಸಭಾಂಗಣದಲ್ಲಿ ತಾಲೂಕಾಡಳಿತದಿಂದ ಹಮ್ಮಿಕೊಂಡಿದ್ದ ಕಿತ್ತೂರು ರಾಣಿ ಚನ್ನಮ್ಮಾಜೀಯ ಜಯಂತ್ಯೋತ್ಸವದಲ್ಲಿ ಸಮಾಜ ಬಾಂಧವರು, ಅಧಿಕಾರಿಗಳು ಭಾಗವಹಿಸಿದ್ದರು. ನಂತರ ಇಂಗಳೇಶ್ವರ ರಸ್ತೆಯಲ್ಲಿರುವ ಕಿತ್ತೂರು ರಾಣಿ ಚನ್ನಮ್ಮಾಜೀಯ ನಿಯೋಜಿತ ವೃತ್ತದಲ್ಲಿ ಕಿತ್ತೂರು ರಾಣಿ ಚನ್ನಮ್ಮಾಜೀಯ ಭಾವಚಿತ್ರಕ್ಕೆ ಸಮಾಜ ಬಾಂಧವರು ಪೂಜೆ ಸಲ್ಲಿಸಿದ ನಂತರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ವಿವಿಧ ವಾದ್ಯಮೇಳದೊಂದಿಗೆ ಸಾರೋಟಿನಲ್ಲಿ ಕಿತ್ತೂರು ರಾಣಿ ಚನ್ನಮ್ಮಾಜೀಯ ಭಾವಚಿತ್ರ ಮೆರವಣಿಗೆ ಅದ್ದೂರಿಯಾಗಿ ಜರುಗಿತು. ಮೆರವಣಿಗೆಯಲ್ಲಿ ಪಂಚಮಸಾಲಿ ಸಮಾಜ ಬಾಂಧವರು ಸೇರಿದಂತೆ ವಿವಿಧ ಅಧಿಕಾರಿಗಳು, ವಿವಿಧ ಸಮಾಜ ಬಾಂಧವರು ಭಾಗವಹಿಸಿದ್ದರು.

# ಹೆಚ್ಚಿನ ನೋಂದಣಿ ಮಾಡಿಸಲು ಕಾರ್ಯಕರ್ತರು

## ಬಿಜೆಪಿ ಸದಸ್ಯತ್ವ ಅಭಿಯಾನದಲ್ಲಿ ಅರಬಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಸಲಹೆ

**ಗೋಕಾಕ:** ಬಿಜೆಪಿ ಸದಸ್ಯತ್ವ ಅಭಿಯಾನದಲ್ಲಿ ಅರಭಾವಿ ಕ್ಷೇತ್ರವು ಮತ್ತೊಂದು ಬಾರಿ ಸಾಧನೆ ಮಾಡಲು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರನ್ನು ನೋಂದಣಿ ಮಾಡಿಸಲು ಕಾರ್ಯಕರ್ತರು ಶ್ರಮಿಸುವಂತೆ ಅರಭಾವಿ ಶಾಸಕ ಮತ್ತು ಬೆಮ್ಯುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರು ಕರೆ ನೀಡಿದರು.

ಬುಧವಾರ ನಗರದ ಎನ್.ಎಸ್.ಎಫ್ ಕಛೇರಿಯಲ್ಲಿ ಅರಭಾವಿ ಬಿಜೆಪಿ ಮಂಡಲದಿಂದ ನಡೆದ ಬಿಜೆಪಿ ಸದಸ್ಯತ್ವ ಅಭಿಯಾನದ ಸಕ್ರೀಯ ಸದಸ್ಯರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸುಮಾರು ಐವತ್ತು ಸಾವಿರಕ್ಕಿಂತ ಅಧಿಕ ಸದಸ್ಯರನ್ನು ನೋಂದಣಿ ಮಾಡಿಸುವ ಮೂಲಕ ಹೆಚ್ಚಿನ ಸಾಧನೆ ಮಾಡಲು ಕಾರಣೀಕರ್ತರಾಗುವಂತೆ ಅವರು ಹೇಳಿದರು.

ರಾಜ್ಯದ ಸಮಗ್ರ ಅಭಿವೃದ್ಧಿ ನಮ್ಮ ಬಿಜೆಪಿಯಿಂದ ಮಾತ್ರ ಸಾಧ್ಯ. ಈಗಿರುವ ಕಾಂಗ್ರೆಸ್ ಸರ್ಕಾರದಿಂದ ಅಭಿವೃದ್ಧಿ ನಿರೀಕ್ಷಿಸಲು ಅಸಾಧ್ಯವಾಗಿದೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ನಡೆಯುತ್ತಿಲ್ಲ. ಯಾವ ಅನುದಾನವನ್ನು ಸಹ ನೀಡುತ್ತಿಲ್ಲ. ಕಳೆದ ಒಂದುವರೆ ವರ್ಷದಿಂದ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಜನರ ಸಂಕಷ್ಟಕ್ಕೆ ಬರುತ್ತಿಲ್ಲವೆಂದು ದೂರಿದರು. ನಮ್ಮ ಬಿಜೆಪಿ ಸರ್ಕಾರದ



ಅವಧಿಯಲ್ಲಿ ಮಂಜೂರಾಗಿರುವ ಅನುದಾನವನ್ನೂ ಸಹ ತಡೆ ಹಿಡಿಯುತ್ತಿದ್ದಾರೆ. ದೇವಸ್ಥಾನದ ಜೀರ್ಣೋದ್ಧಾರಕ್ಕೆ ಮಂಜೂರಾಗಿದ್ದ 2 ಕೋ.ರೂ. ಅನುದಾನವನ್ನು ತಡೆ ಹಿಡಿದಿದ್ದರಿಂದ ವಿಪ ಸದಸ್ಯ ಲಖನ್ ಜಾರಕಿಹೊಳಿ ಅವರ ನಿಧಿಯಿಂದ ಒಂದು ಕೋ.ರೂ. ಅನುದಾನವನ್ನು ಹೊಂದಾಣಿಕೆ ಮಾಡಿಕೊಂಡು ಒಟ್ಟು 2 ಕೋ.ರೂ. ಅನದಾನವನ್ನು ನಮ್ಮ ಕ್ಷೇತ್ರದ ದೇವಸ್ಥಾನವೊಂದಕ್ಕೆ ನೀಡಲಾಯಿತು ಎಂದು ಸರ್ಕಾರದ ನಡೆಯನ್ನು ಟೀಕಿಸಿದರು.

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಮತ್ತೇ ಬಿಜೆಪಿ ಅಧಿಕಾರಕ್ಕೆ ಬರಲಿದೆ. ಅಲ್ಲಿಯತನಕ ನಮಗೆ ಅಭಿವೃದ್ಧಿ ಕನಸಾಗಿಯೇ ಉಳಿಯಲಿದೆ. ಮುಂಬರುವ ತಾ.ಪಂ ಮತ್ತು ಜಿ.ಪಂ. ಚುನಾವಣೆಗಳಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆಯಾಗಲು ಕಾರ್ಯಕರ್ತರು ಈಗಿನಿಂದಲೇ ಸಂಘಟನಾತ್ಮಕ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗವಹಿಸಬೇಕು. ನಮ್ಮ ಬಿಜೆಪಿ ಸರ್ಕಾರದ ಸಾಧನೆಗಳನ್ನು ಸಹ ಜನರಿಗೆ ಮನವ-ರಿಕೆ ಮಾಡಿಕೊಡುವ ಕೆಲಸ ನಡೆಯಬೇಕಾಗಿದೆ ಎಂದು ಅವರು ತಿಳಿಸಿದರು.

ವೇದಿಕೆಯಲ್ಲಿ ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ, ಬಿಜೆಪಿ ರಾಜ್ಯ ಮಾಧ್ಯಮ ಸಂಚಾಲಕ ಎಫ್. ಎಸ್. ಸಿದ್ದನಗೌಡರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಮಾದಮ್ಮನವರ, ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ರಾಜ್ಯ ಯುವ ಮೋರ್ಚಾ ಉಪಾಧ್ಯಕ್ಷ ಈರಣ್ಣ ಅಂಗಡಿ, ಕಾರ್ಯದರ್ಶಿಗಳಾದ ಪರಸಪ್ಪ ಬಬಲಿ, ಮಹಾಂತೇಶ ಕುಡಚಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



# ರೈರತರ ಸುಲಿಗೆ ಮಾಡಿ ಮಧ್ಯರ್ತಿಗಳು ಶ್ರೀಮಂತ

**ಯರಗಟ್ಟಿ:** ಈಗಿನ ದಿನಗಳಲ್ಲಿ ಮಧ್ಯವರ್ತಿಗಳು ಹೆಚ್ಚಾಗುತ್ತಿದ್ದು ಅವರು ಕಮಿಷನ್ ತೆಗೆದುಕೊಂಡು ಶ್ರೀಮಂತರಾಗುತಿದ್ದಾರೆ ಆದರೆ ಹಗಲು ರಾತ್ರಿ ಎನ್ನದೆ ಕಷ್ಟ ಪಟ್ಟು ದುಡಿಯುತ್ತಿರುವ ವಾಹನ ಚಾಲಕರು ಮಾತ್ರ ಬಡವರಾಗಿ ಉಳಿದು ಮಾಡಿದ ಸಾಲವನ್ನು ಬರಿಸಲಾಗದೆ ಒದ್ದಾಡುವ ಪರಿಸ್ಥಿತಿ ಎದುರಾಗಿದೆ ಎಂದು ಸಂಘದ ಉಪಾಧ್ಯಕ್ಷ ಅಮೃತೇಶ ಹೇಳಿದರು.

ಪಟ್ಟಣದ ರತ್ನಸಂಗಮದ ಸಭಾಭವನದಲ್ಲಿ ಭಾರತ್ ಟ್ರಾನ್ಸ್ ಪೋರ್ಟ್ ಅಸೋಸಿಯೇಷನ್ ಗ್ರುಪ್ ಏರ್ಪಡಿಸಿದ್ದ ಚಾಲಕರ ಸಭೆ ಉದ್ದೇಶಿಸಿ ಮಾತನಾಡಿದರು. ಏಜೆಂಟರು ಎಸಿ ಆಫೀಸಿನಲ್ಲಿ ಕುಳಿತು ಕಂಪ್ಯೂಟರ್ ಮೇಲೆ ಬೆರಳು ಆಡಿಸುತ್ತಾ ಹಣ ಸಂಪಾದನೆ ಮಾಡುತ್ತಿದ್ದಾರೆ, ಓಲಾ,ಉಬರನಂತಹ ಕಂಪನಿಗಳು ಹುಟ್ಟಿಕೊಂಡು ದಿನದಿಂದ ದಿನಕ್ಕೆ ಅವರು ಬೆಳೆಯುತ್ತಿದ್ದಾರೆ. ಹೊರತು 100 200 ತೆಗೆದುಕೊಂಡು ಬಂದಂತಹ ಹಣದಲ್ಲಿ ಜೀವನ ಕಟ್ಟಿಕೊಳ್ಳುವುದು ಚಾಲಕರ ದುಶ್ ಸಂಗತಿಯಾಗಿದೆ. ಬೆಂಗಳೂರು ಮೈಸೂರು ಸೇರಿದಂತೆ ದೊಡ್ಡ ದೊಡ್ಡ ಪಟ್ಟಣಗಳಲ್ಲಿ ಈ ಏಜೆಂಟ್ ಕಂಪನಿಗಳು ಬೇರು ಬಿಟ್ಟಿವೆ. ಆದರೆ ನಾವು ನೀವೆಲ್ಲ ಹೀಗೆ ಸುಮ್ಮನೆ ಕೂಳಿತುಕೊಂಡರೆ ಒಂದಾನೊಂದು ದಿನ ಬೆಳಗಾವಿ ಜಿಲ್ಲೆಯಲ್ಲಿ ಕೂಡ ಇನ್ನೂ ನಾನಾ ತರಹದ ಕಂಪನಿಗಳು ಆವರಿಸಿಕೊಳ್ಳಬಹುದು ತಕ್ಷಣವೇ ಇಂದಿನಿಂದಲೇ ತಾವೆಲ್ಲರೂ ಎಚ್ಚೆತ್ತುಕೊಂಡ ಸಂಘದ ಸದಸ್ಯರಾಗಿ ಒಟ್ಟುಗೂಡಿ



ಬಹಿಷ್ಕಾರ ಮಾಡಬೇಕೆಂದು ಹೇಳಿದರು ಹಾಗೂ ಚಾಲಕರ ಸ್ವಾಭಿಮಾನಕ್ಕೆ ದಕ್ಕೆಯಾಗದಂತೆ ಪಿಡಿಎಮ್ ಕಾರು ಸಹಿತ ಮುಂದೆ ಹೋಗಲಾರದು ಯಾವುದೆ ಕಾರಣಕ್ಕೂ ಚಾಲಕರಿಗೆ ಅನ್ಯಾಯವಾದರೆ ನಮ್ಮ ಸಂಘಟನೆಯು ಸಹಿಸುವುದಿಲ್ಲ ಎಂದು ಸಂಘದ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದರು.

ನಂತರ ರಾಜ್ಯಾಧ್ಯಕ್ಷ ಶ್ರೀ ಜಯನ್ನನವರು ಮುಂಬರುವ ದಿನಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಭಾರತ್ ಟ್ರಾನ್ಪೋರ್ಟ್ ಸಂಘಟನೆಯನ್ನು ದೊಡ್ಡದಾಗಿ ಬೆಳಿಸಿ ಜಿಲ್ಲೆಯಲ್ಲಿ ರಾಜ್ಯಮಟ್ಟದ ಕಾರ್ಯಕ್ರಮವನ್ನು ಮಾಡುವುದಾಗಿ ಹೇಳಿದರು ಹಾಗೂ ಸಂಘಟನೆಯ ಮುಖಾಂತರ ಸರ್ಕಾರದಿಂದ ಬರುವಂತ ಸೌಲಭ್ಯಗಳನ್ನು ಚಾಲಕರಿಗೆ ಸವಿಸ್ತಾರವಾಗಿ ತಿಳಿಸಿದರು.

ಕಾರ್ಯಕ್ರಮದ ಸಂದರ್ಭದಲ್ಲಿ ಅಧ್ಯಕ್ಷರಿಗೆ ಮತ್ತು ಸದಸ್ಯ-ರಿಗೆ ಗೌರವ ಸನ್ಮಾನ ಮಾಡಲಾಯಿತು.ಈ ಸಂದರ್ಭದಲ್ಲಿ ಕಾರ್ಯಧ್ಯಕ್ಷ ಶೇಖರ್ ಎಸ್, ಉಪ ಕಾರ್ಯಧ್ಯಕ್ಷ ರಾಘವೇಂದ್ರ ಪಡುಕೋಣೆ, ನಾಗರಾಜ್ ಬಿ, ಕಾರ್ಯದರ್ಶಿ ಶ್ರೀನಿವಾಸ್, ಖಜಾಂಚಿ ಲೋಕೇಶ್ ಎಂ ಸಿ, ಬೆಳಗಾವಿ ಜಿಲ್ಲಾಧ್ಯಕ್ಷ ಲಿಂಗರಾಜ್ ಹಾದಿಮನಿ ಸೇರಿದಂತೆ ಸಂಘದ ಎಲ್ಲಾ ಸದಸ್ಯರು ಮತ್ತು ಚಾಲಕರು ಉಪಸ್ಥಿತರಿದ್ದರು.

# ರಾಣಿ ಚನ್ನಮ್ಮಳ ಜೀವನ ಎಲ್ಲರಿಗೂ ಸ್ಪೂರ್ತಿ

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಭೀಮಶಿ ಹಡಪದ

**ಬಸವನಬಾಗೇವಾಡಿ:** ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜನಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮಾಜೀಯ 246 ನೇ ಜಯಂತ್ಯೋತ್ಸವ ಹಾಗೂ 200 ನೇ ವಿಜಯೋತ್ಸವ ಸಂಭ್ರಮಾಚರಣೆ ನಿಮಿತ್ತ ವೀರರಾಣಿ ಕಿತ್ತೂರು ಚನ್ನಮ್ಮ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜಯಂತಿ, ಕಿತ್ತೂರು ವಿಜಯೋತ್ಸವ ಸಂಭ್ರಮಾಚರಣೆ ಕಾರ್ಯಕ್ರಮ ಆಚ-ರಿಸಲಾಯಿತು.

ಕಾಲೇಜಿನ ಇತಿಹಾಸ ಉಪನ್ಯಾಸಕ ಭೀಮಶಿ ಹಡಪದ ಮಾತನಾಡಿ, ಉತ್ತಮ ಆಡಳಿತ ನಡೆಸುವ ಮೂಲಕ ಕಿತ್ತೂರು ಸಂಸ್ಥಾನವನ್ನು ಸಮೃದ್ಧಿ ನಾಡನ್ನಾಗಿ ಪರಿವರ್ತಿಸಿದ ಕೀರ್ತಿ ಕಿತ್ತೂರು ರಾಣಿ ಚನ್ನಮ್ಮಳಿಗೆ ಸಲ್ಲುತ್ತದೆ. ಕಿತ್ತೂರು ರಾಣಿ ಚನ್ನಮ್ಮಳ ಜೀವನ ಎಲ್ಲರಿಗೂ ಸ್ಪೂರ್ತಿದಾಯಕವಾಗಿದೆ ಎಂದರು.



ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಭಾರಿ ಪ್ರಾಚಾರ್ಯ ಡಾ.ಎಚ್.ಎಂ.ನಾಟೀಕಾರ ಮಾತನಾಡಿ, ದೇಶದ ಇತಿಹಾಸದಲ್ಲಿ ಕಿತ್ತೂರು ರಾಣಿ ಚನ್ನಮ್ಮಳ ಹೋರಾಟ ಅಮರವಾಗಿದೆ. ಸಾಹಸ, ದಿಟ್ಟತನ ಹಾಗೂ ಕೆಚ್ಚೆದೆಯ ಹೋರಾಟದ ಮಹಿಳೆಯರಲ್ಲಿ ಚನ್ನಮ್ಮಳು ಮುಂಚೂಣಿಯಲ್ಲಿದ್ದಾಳೆ ಎಂದರು.

ಕನ್ನಡ ಸಹಾಯಕ ಪ್ರಾಧ್ಯಾಪಕ ಶ್ರೀಶೈಲ ಬಳವಾಟ ಪ್ರಾಸ್ತವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಐಕ್ಯೂಎಸಿ ಸಂಚಾಲಕ ಡಾ.ಅಮಿತ ಮಿರ್ಜಿ, ಡಾ.ಬಾನು ನಿಡಗುಂದಿ, ಲೀಲಾವತಿ, ಮಮತ, ಡಾ.ಪ್ರಶಾಂತ ನಾಯಕ ಟಿ.ಆರ್., ಬೋಧಕೇತರ ಸಿಬ್ಬಂದಿಗಳು ಇದ್ದರು. ಅವ್ವಣ್ಣ ಗೂಳಪ್ಪರ ಪ್ರಾರ್ಥಿಸಿದರು. ಎಸ್.ಬಿ.ವಾಲೀಕಾರ ಸ್ವಾಗತಿಸಿದರು. ಕುಮಾರ ಬಾಳಪ್ಪ ನಿರೂಪಿಸಿದರು. ಸುರೇಶ ಬಾರಿಕಾಯಿ ವಂದಿಸಿದರು.

# ಖಡ್ಗವಾಗಲಿ ಕಾವ್ಯ ಎಂದವರು ಬಸವರಾಜ ಕಟ್ಟೀಮನಿ: ಡಾ. ಆನಂದಕುಮಾರ

**ಮೂಡಲಗಿ** : ಖಡ್ಗವಾಗಲಿ ಕಾವ್ಯ ಎಂದು ಕನ್ನಡ ಸಾಹಿತ್ಯದಲ್ಲಿ ಬಂಡಾಯದ ದನಿ ಮೊಳಗುವುದಕ್ಕೂ ಮೊದಲೇ ಶೋಷಣೆ, ಅನ್ಯಾಯಗಳಿಗೆ ದನಿಯಾಗಬೇಕೆಂಬ ಬದ್ಧತೆಯಿಂದ ಸಾಮಾಜಿಕ ವಾಸ್ತವ ಮಾರ್ಗದಲ್ಲಿ ಕಥೆ-ಕಾದಂಬರಿಗಳನ್ನು ರಚಿಸಿದವರು ಬಸವರಾಜ ಕಟ್ಟೀಮನಿಯವರು ಎಂದು ಕಾಗವಾಡದ ಶಿವಾನಂದ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ಆನಂದಕುಮಾರ ಜಕ್ಕನ್ನವರ ಹೇಳಿದರು.

ಕಲ್ಲೋಳಿ ಪಟ್ಟಣದ ಶ್ರೀ ರಾಮಲಿಂಗೇಶ್ವರ ಪ್ರಥಮ ದರ್ಜೆ ಕಾಲೇಜು ಹಾಗೂ ಬೆಳಗಾವಿಯ ಬಸವರಾಜ ಕಟ್ಟೀಮನಿ ಪ್ರತಿಷ್ಠಾನದ ಸಹಯೋಗದಲ್ಲಿ ಆಯೋಜಿಸಿದ್ದ ಬಸವರಾಜ ಕಟ್ಟೀಮನಿ ಪುಣ್ಯಸ್ಮರಣೆ ನಿಮಿತ್ತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಮುಚ್ಚುಮರೆಯಿಲ್ಲದೆ, ಬಿಚ್ಚುಮಾತಿನಿಂದ ಸಾಹಿತ್ಯ ಬರೆದವರು ಕಟ್ಟೀಮನಿಯವರು. ಅವರು ಅತ್ಯಂತ



ಸ್ವಾಭಿಮಾನಿ ಮತ್ತು ರಾಷ್ಟ್ರಪ್ರೇಮಿ ಆಗಿದ್ದರು. ಅವರ ಸಾಹಿತ್ಯವನ್ನು ವಿದ್ಯಾರ್ಥಿಗಳು ಓದಿ ಅರ್ಥೈಸಿಕೊಳ್ಳಬೇಕು ಎಂದು ಕರೆ ನೀಡಿದರು. ಪ್ರತಿಷ್ಠಾನದ ಸದಸ್ಯ ಸಂಚಾಲಕ ಪ್ರೊ. ಚಂದ್ರಶೇಖರ ಅಕ್ಕಿಯವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕಟ್ಟೀಮನಿಯವರು ತುಂಬಾ ಸರಳ, ಸಜ್ಜನಿಕೆಯಿಂದ ಬಾಳಿ ಬದುಕಿದವರು. ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪದವಿ ಕಾಲೇಜು ವರ್ಷದುದ್ದಕ್ಕೂ ನೂರಾರು ಪಠ್ಯ ಪಠ್ಯೇತರ ಚಟುವಟಿಗಳನ್ನು ಆಯೋಜಿಸುವ ಮೂಲಕ ವಿಶ್ವವಿದ್ಯಾಲಯದ ಮಟ್ಟಕ್ಕೆ ಬೆಳೆಯುತ್ತಿರುವುದು ಸಂತೋಷದ ಸಂಗತಿ ಎಂದರು. ಅಧ್ಯಕ್ಷತೆ ವಹಿಸಿದ್ದ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಚೇರಮನ್ನ ಬಸಗೌಡ ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಒಳ್ಳೆಯ ಕಥೆ, ಕವನ, ಕಾದಂಬರಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಓದುವ ಮೂಲಕ ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದರು.

ಕಟ್ಟಿಮನಿ ಪ್ರತಿಷ್ಠಾನದ ಸದಸ್ಯರಾದ ಶಿವಕುಮಾರ್ ಕಟ್ಟಿಮನಿ ಮಾತನಾಡಿದರು. ಕಾಲೇಜಿನ ಪ್ರಾಚಾರ್ಯ ಡಾ. ಸುರೇಶ ಹನಗಂಡಿ ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಅಧ್ಯಾಪಕರುಗಳಾದ ಡಾ. ಎಂ.ಬಿ. ಕುಲಮೂರ, ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿ ಶಂಕರ ನಿಂಗನೂರ, ಆರ್. ಎಸ್. ಪಂಡಿತ, ವಿಲಾಸ ಕೆಳಗಡೆ, ಎಸ್.ಎಂ. ಬಂಡಿ, ಸಂತೋಷ ಜೋಡಕುರಳಿ, ವಸುಂದರಾ ಕಾಳೆ, ರಾಜಶ್ರೀ ತೋಟಗಿ, ಮಲ್ಲಪ್ಪ ಕರಗಣ್ಣಿ, ಬಿ.ಸಿ. ಮಾಳಿ, ಸಾಗರ ಐದಮನಿ, ಎಂ.ಬಿ. ಜಾಲಗಾರ, ಗ್ರಂಥಪಾಲಕ ಬಿ.ಬಿ. ವಾಲಿ, ಬಿ.ಕೆ. ಸೊಂಟನವರ ಹಾಗೂ ಬೋಧಕೇತರ ಸಿಬ್ಬಂದಿಗಳು ಉಪಸ್ಥಿತ-ರಿದ್ದರು.

ಡಾ. ಕೆ.ಎಸ್. ಪರವ್ವಗೋಳ ನಿರೂಪಿಸಿದರು. ಪ್ರೊ. ಡಿ.ಎಸ್. ಹುಗ್ಗಿ ಸ್ವಾಗತಿಸಿದರು. ಕು. ರಾಧಿಕಾ ಕರೆಪ್ಪಗೋಳ ಪ್ರಾರ್ಥಿಸಿದರು. ಪ್ರೊ. ವಿಲಾಸ ಕೆಳಗಡೆ ವಂದಿಸಿದರು.

# ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ:ರಾಜು ಕಾಗೆ ಭವಿಷ್ಯ



ಮೋಳೆ;- ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳು ಇಡೀ ದೇಶದಲ್ಲಿಯೇ ಜನಪ್ರೀಯತೆಯನ್ನು ಗಳಿಸಿದ್ದು, ದೇಶದ ವಿವಿಧ ರಾಜ್ಯಗಳಲ್ಲಿ ಕಾಂಗ್ರೆಸ್ ಪಕ್ಷ ಇದೇ ಮಾದರಿಯನ್ನು ಅನುಸರಿಸುತ್ತಿದ್ದು ಮಹಾರಾಷ್ಟ್ರದಲ್ಲೀ ಈ ಬಾರಿ ಕಾಂಗ್ರೆಸ್ ಪಕ್ಷ ಅಧಿಕಾರದ ಗದ್ದುಗೆ ಎರಲಿದೆ ಎಂದು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಹಾಗೂ ಕಾಗವಾಡ ಶಾಸಕರಾದ ರಾಜು ಕಾಗೆ ಹೇಳಿದರು.

ಅವರು ಗುರುವಾರ ಮಹಾರಾಷ್ಟ್ರದಲ್ಲಿ ನಡೆಯುತ್ತಿರುವ ವಿಧನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಜತ್ ವಿಧಾನಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವಿಕ್ರಂ ಸಾವಂತ ಅವರ ನಾಮಪತ್ರ ಸಲ್ಲಿಕೆ ತೆರಳಿ ನಾಮಪತ್ರ ಸಲ್ಲಿಸಿ ಅವರು ಬಹಿರಂಗ ಸಭೆಯನ್ನುದ್ದೇಶಿಸಿ ಮಾತನಾಡುತ್ತಿದ್ದರು.

ಮಹಾರಾಷ್ಟ್ರ ರಾಜ್ಯದಲ್ಲಿ 288 ವಿಧಾನಸಭಾ ಕ್ಷೇತ್ರಗಳಿದ್ದು, ಎಲ್ಲಾ ಕ್ಷೇತ್ರಘಲ್ಲಿಯೂ ಕಾಂಗ್ರೆಸ್ ಪಕ್ಷ ತನ್ನ ಅಭ್ಯರ್ಥಿಗಳನ್ನು ಸ್ಪರ್ದೆಗೆ ಇಳಿಸಲಿದೆ ಎಂದರು. ಮಹಾರಾಷ್ಟ್ರದಲ್ಲಿ ಹೊಂದಾಣಿಕೆ ರಾಜಕಾರಣ ಮಾಡಿ ಇಡೀಮಹಾರಾಷ್ಟ್ರ ರಾಜ್ಯವನ್ನು ಹಾಳು ಮಾಡಿ ಬಿಟ್ಟಿದ್ದಾರೆ. ಮತದಾರ ಪ್ರಭುಗಳು ಈ ಸರಕಾರಕ್ಕೆ ಬೇಸತ್ತು ಹೋಗಿದ್ದು ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 180 ಕ್ಕೂ ಅಧಿಕ ಸ್ಥಾನ ಗಳಿಸಲಿದೆ ಎಂದು ರಾಜು ಕಾಗೆ ವಿಶ್ವಾಸ ವ್ಯಕ್ತ ಪಡಿಸಿದರು.

ಮಹಾರಾಷ್ಟ್ರದ ಜತ್ ವಿಧಾನಸಭಾ ಮತಕ್ಷೇತ್ರದ ಕಾಂಗ್ರೆಸ ಅಭ್ಯರ್ಥಿ ವಿಕ್ರಂ ಸಾವಂತ ಅವರ ನಾಮಪತ್ರ ಸಲ್ಲಿಕೆಗೆ ಸುಮಾರು ಒಂದು ಲಕ್ಷಕ್ಕೂ ಅಧಿಕ ಮತದಾರರು ಭಾಗಿಯಾಗಿದ್ದಾರೆ ಎಂದರೆ ಅವರ ಗೆಲುವು ಮಹಾರಾಷ್ಟ್ರ ರಾಜ್ಯದಲ್ಲಿ ದಾಖಲೆ ಅಂತರದಲ್ಲಿ ಗೆಲ್ಲಲಿದ್ದಾರೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು.

ಮಾಜಿ ಉಪಮುಖ್ಯಮಂತ್ರಿಗಳು ಹಾಗೂ ಅಥಣಿ ಶಾಸಕರಾದ ಲಕ್ಷ್ಮಣ ಸವದಿ ಮಾತನಾಡಿ ಮಹಾರಾಷ್ಟ್ರ ರಾಜ್ಯದಲ್ಲಿ ಎನ್.ಸಿ,ಪಿ,ಬಿಜೆಪಿ, ಹಾಗೂ ಶಿವಸೇನೆಯ ದುರಾಡಳಿತದಿಂದ ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು. ಜತ್ ವಿಧಾನಸಭಾ ಮತಕ್ಷೇತ್ರೂ ಸಂಪೂರ್ಣ ಕನ್ನಡಿಗ ಕ್ಷೇತ್ರವಾಗಿದ್ದು ,ಇಲ್ಲಿಯ ಜನರ ಬಳಿ ನಾವು ಚುನಾವಣೆಗಳು ಬಂದ ಸಂದರ್ಭದಲ್ಲಿ ನಮ್ಮ ಮಾತಿಗೆ ಮನ್ನನೆ ನೀಡಿ ಮತ ಚಲಾಯಿಸಿದ್ದಾರೆ. ಈ ಬಾರಿಯೂ ಕೂಡ ಕಾಂಗ್ರೆಸ್ ಅಭ್ಯರ್ಥಿ ವಿಕ್ರಮ್ ಸಾವಂತ ಅವರನ್ನು 50 ಸಾವಿರಕ್ಕೂ ಅಧಿಕ ಮತಗಳಿಂದ ಗೆಲ್ಲಿಸಲಿದ್ದಾರೆ ಎಂಬ ವಿಶ್ವಾಸ ನನಗಿದೆ ಎಂದರು.

ಈ ವೇಳೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಮಾತನಾಡಿ ಇದೊಂದು ಬಾರಿಗೆ ನಿಮ್ಮ ಸೇವೆ ಮಾಡಲು ಅವಕಾಶ ಮಾಡಿ ಕೊಡುವಂತೆ ಮನವಿ ಮಾಡಿದರು.

ನಾಮಪತ್ರ ಸಲ್ಲಿಕೆಗೆ ಸಾವಿರಾರು ಪಕ್ಷದ ಕಾರ್ಯಕರ್ತರು, ಬೆಂಬಲಿಗರೊಂದಿಗೆ ತಹಸೀಲ್ದಾರ ಕಚೇರಿಗೆ ತೆರಳಿ ನಾಮಪತ್ರ ಸಲ್ಲಿಸಿ ಬಹಿರಂಗ ಸಭೆ ಏರ್ಪಡಿಸಿದ್ದರು.

## ಜಿ.ಎಸ್.ಅಂಗಡಿಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ



ಮುಧೋಳ: ಜನಶ್ರೀ ಫೌಂಡೇಶನ್(ರಿ) ಬೆಂಗಳೂರು ಇವರು ಇತ್ತಿಚಿಗೆ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಶಿಕ್ಷಕರ ಹಬ್ಬ ಸಮಾರಂಭದಲ್ಲಿ ಪ್ರಸಕ್ತ (2024.ನೇ) ವರ್ಷದ ರಾಜ್ಯಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಮತ್ತು ಶ್ರೀ ಲಕ್ಕಮ್ಮದೇವಿ ಕಲಾ ಪೋಷಕರ ಸಂಘ(ರಿ) ರಾಯಬಾಗ ಇವರು ಕೊಡಮಾಡುವ ಕರ್ನಾಟಕ ಶಿಕ್ಷಣ ಸಿರಿ ಪ್ರಶಸ್ತಿಯನ್ನು ಬಾಗಲಕೋಟೆ ಜಿಲ್ಲೆಯ ಮುಧೋಳ ನಗರದ ಪ್ರಗತಿ ಶಾಲೆಯ ಶಿಕ್ಷಕ ಜಿ. ಎಸ್. ಅಂಗಡಿ ಪಡೆದುಕೊಂಡಿದ್ದಾರೆ. ಇವೆರಡು ಪ್ರಶಸ್ತಿಗೆ ಭಾಜನರಾದ ಅಂಗಡಿ ಅವರಿಗೆ ಚಿತ್ರಕಲಾ ಸಂಘದವರು ಶುಭಹಾರೈಸಿದ್ದಾರೆ.

## ಕೊಜಾಗಿರಿಗಾನ ಸುಧಾ 2024 ಕಾರ್ಯಕ್ರಮ

ಬೆಳಗಾವಿ 24- ಬೆಳಗಾವಿಯ ಪಂ. ಬಿ.ವ್ಹಿ. ಕಡ್ಲಾಸ್ಕರಬುವಾ ಮೆಮೋರಿಯಲ್ ಟ್ರಸ್ಟ್ ಇವರು ಇದೇ ದಿನಾಂಕ 26 ಶನಿವಾರದಂದು ಸಾಯಂಕಾಲ 5-30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ 'ಕೊಜಾಗಿರಿಗಾನ ಸುಧಾ 2024' ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಹಿಂದೂಸ್ತಾನಿ ಶಾಸ್ತ್ರೀಯ ಹೊರ್ಮೋನಿಯಂ ವಾದಕ ಸುರೇಶ ಸರ್‌ದೇಸಾಯಿ ಮತ್ತು ಧಾರವಾಡದ ಶ್ರೀಮತಿ ಗೀತಾ ಆಲೂರ ಅವ-ರಿಂದ ಶಾಸ್ತ್ರೀಯ ಗಾಯನವನ್ನು ನೀಡಲಿದ್ದು ತಬಲಾ ಸಾಥ ನಾರಾಯಣ ಗಣಾಚಾರಿ ನೀಡಲಿದ್ದಾರೆ. ಸಂಗೀತಾಸಕ್ತರು ಈ ಕಾರ್ಯಕ್ರಮ ಸದುಪಯೋಗ ಪಡೆಯುವಂತೆ ಅಧ್ಯಕ್ಷ ಗುರುರಾಜ ಕುಲಕರ್ಣಿ ಮತ್ತು ಕಾರ್ಯದರ್ಶಿ ವಿಜಯ ಬಾಂದಿವಡೆಕರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಸಖಿ ಕೇಂದ್ರದ ವಾಹನಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಜಾನಕಿ

ಬಾಗಲಕೋಟೆ: : ಮಹಿಳೆಯರಿಗೆ ಒಂದೇ ಸೂರಿನಡಿ ಹಲವು ಸೇವೆಯನ್ನು ಸಖಿ ಒನ್ ಸ್ಟಾಪ್ ಸೆಂಟರ್ ಮೂಲಕ ನೀಡಲಾಗುತ್ತಿದ್ದು ನೊಂದ ಬಾಲಕಿಯರು ಮತ್ತು ಮಹಿಳೆಯರ ರಕ್ಷಣೆಗಾಗಿ ನೀಡಲಾಗಿರುವ ಸಖಿ ಕೇಂದ್ರದ ವಾಹನದ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಮ್ ಹೇಳಿದರು.

ಬುಧವಾರದಂದು ಜಿಲ್ಲಾಡಳಿತ ಭವನ ಮುಂಬಾಗದಲ್ಲಿ ಸಖಿ ಕೇಂದ್ರದ ವಾಹನಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಜಿಲ್ಲೆಯಲ್ಲಿ ನೊಂದ ಮಹಿಳೆಯರು , ಬಾಲಕಿಯರಿಗೆ ಸೂಕ್ತ ರಕ್ಷಣೆ, ಆಶ್ರಯ, ಕಾನೂನು ಸಲಹೆ, ಆಪ್ತ ಸಮಾಲೋಚನೆ, ಪೊಲೀಸ್ ನೆರವು ಇವೆಲ್ಲವೂ ಒಂದೇ ಸೂ-ರಿನಡಿ ಕಲ್ಪಿಸುವುದು ಸಖಿ ಕೇಂದ್ರದ ಮುಖ್ಯ ಧ್ಯೇಯವಾಗಿದೆ. ಆ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ವರ್ಗ



ಮತ್ತು ಸಖಿ ಕೇಂದ್ರದ ಸಿಬ್ಬಂದಿ ಉತ್ತಮ ಸೇವೆ ಒದಗಿಸಬೇಕು ಎಂದು ಸಲಹೆ ನೀಡಿದರು

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಪ್ರಭಾಕರ ಕವಿತಾಳ ಹಿರಿಯ ಸಹಾಯಕ ನಿರ್ದೇಶಕಿ ಸುಮಂಗಲಾ ಹಿರೇಮನಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ವೀಣಾ ಎಂ, ಕಚೇರಿ ಅಧೀಕ್ಷಕ ರಾಜಶೇಖರ್ ಜಂಬಗಿ, ಸಖಿ ಕೇಂದ್ರದ ಆಡಳಿತಾಧಿಕಾರಿ ಶಂಕ್ರಮ್ಮ ಜಮ್ಮನಕಟ್ಟಿ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಸಖಿ ಕೇಂದ್ರದ ಸಿಬ್ಬಂದಿ ಇದ್ದರು.

## ಉದ್ಯೋಗ ಖಾತರಿ ನಡೆ ಸಬಲತೆಯಡೆಗೆ ಅಭಿಯಾನಕ್ಕೆ ಚಾಲನೆ

# ನರೇಗಾ ಯೋಜನೆಯ ಸದುಪಯೋಗಪಡೆದುಕೊಳ್ಳಿ:ಇಒ ರಮೇಶ ಹೆಡಗೆ



**ಬೆಳಗಾವಿ** : ತಾಲ್ಲೂಕಿನಲ್ಲಿ ಉದ್ಯೋಗ ಖಾತರಿ ನಡೆ ಸಬಲತೆಯಡೆಗೆ ಅಭಿಯಾನ ಪ್ರಾರಂಭವಾಗಿದ್ದು. ಇದರ ಸದುಪಯೋಗವನ್ನು ಗ್ರಾಮೀಣ ಪ್ರದೇಶದ ಜನರು ಪಡೆದುಕೊಳ್ಳಬೇಕು. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಆದ-ೕಶದ ಮೇರೆಗೆ ಪ್ರತಿ ಗ್ರಾಮ ಪಂಚಾಯಿತಿಯಿಂದ 10 ರಿಂದ 50ರವರೆಗೆ ದನದ ಕೊಟ್ಟಿಗೆಗಳನ್ನು ಅರ್ಹಫಲಾನುಭವಿಗಳಿಗೆ ನೀಡಲು ಆದೇಶಿಸಿದ್ದು, ನಿಮ್ಮ ಹತ್ತಿರದ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ದನದ ಕೊಟ್ಟಿಗೆಗಳನ್ನು ಪಡೆದುಕೊಳ್ಳಿ ಎಂದು ಕಾರ್ಯನಿರ್ವಾಹಕ ಅಧಿಕಾರಿಗಳಾದ ರಮೇಶ ಹೆಡಗೆ ಅವರು ಹೇಳಿದರು.

ತಾಲ್ಲೂಕ ಪಂಚಾಯತ ಕಚೇರಿ ಆವರಣದಲ್ಲಿ ಗುರುವಾರ (ಅ.24) ಉದ್ಯೋಗ ಖಾತರಿ ನಡೆ ಸಬಲತೆಯಡೆಗೆ ಅಭಿಯಾನದ ನಿಮಿತ್ಯ ಉದ್ಯೋಗ ವಾಹಿನಿ ವಾಹನಕ್ಕೆ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಮೇಶ ಹೆಡಗೆ ಅವರು ಹಸಿರು ನಿಶಾನೆ ತೊರಿಸುವುದರ ಮೂಲಕ ಚಾಲನೆ ನೀಡಿದರು.

ಉದ್ಯೋಗ ವಾಹಿನಿಯು ಬೆಳಗಾವಿ ತಾಲ್ಲೂಕಿನ ಗ್ರಾಮಗಳಿಗೆ ಸಂಚರಿಸಿ ನರೇಗಾ ಯೋಜನೆಯಡಿ ದೊರೆಯುವ ಕೃಷಿ ಹೊಂಡ, ಅಲ್ಪ ಆಳದ ಬಾವಿ ಜಮೀನು ಸಮತಟ್ಟು, ಸೇ-ರಿದಂತೆ ವಿವಿಧ ವೈಯಕ್ತಿಕ ಕಾಮಗಾರಿಗಳ ಕು-ರಿತು ಪ್ರಚಾರ ಕೈಗೊಳ್ಳಲಿದೆ.

ಈ ಸಂದರ್ಭದಲ್ಲಿ ಪಂಚಗ್ಯಾರಂಟಿ ಯೋಜನೆಯ ತಾಲ್ಲೂಕ ಅಧ್ಯಕ್ಷರಾದ ಬೈರು ಕಾಂಬಳೆ, ಸಹಾಯಕ ನಿರ್ದೇಶಕರಾದ (ಗ್ರಾ.ಉ) ಬಿ.ಡಿ ಕಡೇಮನಿ, ತಾಲ್ಲೂಕಾ ಯೋಜನಾಧಿಕಾ-ರಿಗಳಾದ ಎನ್.ಎಸ್.ಹೂಗಾರ, ಡಿಎ ಸ್ ನಾಯಕರಾದ ಗುಂಡು ತಳವಾರ, ತಾಪಂ ತಾಂತ್ರಿಕ ಸಂಯೋಜಕ ಮುರುಗೇಶ ಯಕ್ಕಂಚಿ, ತಾಲ್ಲೂಕ ಐಇಸಿ ಸಂಯೋಜಕ ರಮೇಶ ಮಾದರ ಸೇರಿಂದತೆ ತಾಲ್ಲೂಕ ಪಂಚಾಯತ ಸಿಬ್ಬಂದಿಗಳು ವಿವಿಧ ಗ್ರಾಮಗಳ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾರ್ಮಿಕರನ್ನು ನಿರ್ಲಕ್ಷಿಸಬೇಡಿ : ನ್ಯಾ.ವಿಜಯ



ಬಾಗಲಕೋಟೆ: : ಪ್ರತಿನಿತ್ಯದ ಉಪಯುಕ್ತ ಕಾರ್ಯಗಳಿಗೆ ಸೇವೆ ಸಲ್ಲಿಸುತ್ತಿರುವ ಸಂಘಟಿತ ಅಸಂಘಡಿತ ದಿನಗೂಲಿ ಸೇರಿದಂತೆ ಕಾರ್ಮಿಕರನ್ನು ನಿರ್ಲಕ್ಷಿಸಬೇಡಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ ಹೇಳಿದರು.

ನೂತನ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ ಇಲಾಖೆ ಸೇರಿದಂತೆ ಇತರೆ ಇಲಾಖೆಗಳ ಸಹಯೋಗದಲ್ಲಿ ಉದ್ಯೋಗದಾತರು, ಗುತ್ತಿಗೆದಾರ, ಸಂಘಟಿ-ತ ಮತ್ತು ಅಸಂಘಟಿತ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳಿಗೆ ಹಾಗೂ ಕಾರ್ಮಿಕರಿಗೆ ಕಾರ್ಮಿಕರ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಮಿಕರ ಕಾಯ್ದೆಗಳ ಪರಿಣಾಮಕಾರಿ ಅನುಷ್ಠಾನ ಕುರಿತ ಜಿಲ್ಲಾ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಗುತ್ತಿಗೆದಾರರ ಬಳಿ ಕಾರ್ಯನಿರ್ವಹಿಸುತ್ತಿರುವ ಯಾವುದೇ ರೀತಿಯ ಭದ್ರತೆ ಇರುವದಿಲ್ಲ. ಅಂತಹ ಸಮಯದಲ್ಲಿ ಬಹುಮಹಡಿ ಕಟ್ಟಡಗಳ ಮೇಲಿಂದ ಬಿದ್ದು, ಅಲ್ಲದೇ ಇತರೆ ಅವಘಡಕ್ಕೆ ಒಳಗಾಗಿ ಜೀವ ಹಾನಿಯಾದ ವರದಿ ಇತ್ತೀಚೆಗೆ ನಡೆದಿದ್ದು, ಅಂತಹ ಕಾರ್ಮಿಕ-ರಿಗೆ ಗುತ್ತಿಗೆದಾರರದಿಂದ ಸೂಕ್ತ ಪರಿಹಾರ ನೀಡುವ ಕಾರ್ಯವಾಗಬೇಕು. ಅಂದಾಗ ಮಾತ್ರ ಕಾರ್ಮಿಕರಿಗೆ ಆತ್ಮಸ್ಥೈರ್ಯ ಬರಲು ಸಾಧ್ಯವೆಂದರು.

ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಮಾತನಾಡಿ ಸಂಘಟಿತರಾಗಲಿ ಹಾಗೂ ಅಸಂಘಟಿತರಾಗಲಿ ಯಾರು ಕನಿಷ್ಟರಲ್ಲ ಎಂಬುದನ್ನು ಅರಿತು ಕಾರ್ಮಿಕ ಇಲಾಖೆಯಿಂದ ದೊರೆಯಬಹುದಾದ ಸೌಲಭ್ಯಗಳನ್ನು ಒದಗಿಸಿ ಕೊಡಲು ತಿಳಿಸಿದರು. ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಸರಕಾರಿ ಇಲಾಖೆಯ ಗುತ್ತಿಗೆದಾರರಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ತೊಂದರೆಯಾದಲ್ಲಿ ಇಲಾಖಾ ಅಧಿಕಾರಿ ಹಾಗೂ ಗುತ್ತಿಗೆದಾರರ ಮೇಲೆ ಕಾನೂನು ಕ್ರಮ ಜರುಗಿಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಅಧಿಕಾರಿಗಳು ಕಾರ್ಮಿಕರಿಗೆ ನಿಗದಿಪಡಿಸಿದ ಸೌಲಭ್ಯಗಳನ್ನು ಒದಗಿಸುವ ಕಾರ್ಯ ಆಗಬೇಕು ಎಂದರು. ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ ಪ್ರಾಸ್ತಾವಿಕವಾಗಿ ಮಾತನಾಡಿ ಇದುವರೆಗೂ ಬಾಗಲಕೋಟೆ ಜಿಲ್ಲೆಯಲ್ಲಿ ಕಾರ್ಮಿಕರಿಗೆ ದೊರೆಯಬಹುದಾದ ಹಾಗೂ ಅವರವರ ಉದ್ಯೋಗಕ್ಕೆ ಅನುಗುಣವಾದ ಕಿಟ್‌ಗಳನ್ನು ವಿತರಿಸಲಾಗಿದ್ದು, ಇನ್ನುಳಿದ ಸೌಲಭ್ಯಗಳನ್ನು ಸಹ ಒದಗಿಸಿಕೊಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ವಕೀಲರ ಸಂಘದ ಅಧ್ಯಕ್ಷ ರಮೇಶ ಬದ್ನೂರ, ಕಾರ್ಮಿಕ ನಿರೀಕ್ಷಕರಾದ ಪಾಂಡುರಂಗ ಮಾವರಕರ, ರಾಜಶೇಖರ ಕುರಡಿಕೇರಿ, ರಮೇಶ ವಂಗಿ, ಜಿಲ್ಲಾ ಬಾಲ ಕಾರ್ಮಿಕ ಸಂಸ್ಥೆಯ ಯೋಜನಾ ನಿರ್ದೇಶಕ ಸುಧಾಕರ ಬಡಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಭಿವೃದ್ಧಿ ಕಾಮಗಾರಿಗಳಿಗೆ ಗ್ರಾಮಸ್ಥರಿಂದಲೇ ಭೂಮಿ ಪೂಜೆ

ಬೆಳಗಾವಿ : ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ವಿವಿಧೆಡೆ ಅಭಿವೃದ್ಧಿ ಕಾಮಗಾರಿಗೆ ಗ್ರಾಮಸ್ಥರಿಂದಲೇ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು.

ಕಾಂಗ್ರೆಸ್ ಯುವ ಮುಖಂಡ ಮೃಣಾಲ ಹೆಬ್ಬಾಳಕರ್ ಉಪಸ್ಥಿತಿಯಲ್ಲಿ ಗ್ರಾಮಸ್ಥರೇ ಪೂಜೆ ನೆರವೇರಿಸಿ ಕಾಮಗಾರಿ ಆರಂಭಿಸಿದರು.

ಕ್ಷೇತ್ರದ ಶಾಹು ನಗರದ ಬಂಜಾರಾ ಕಾಲೋನಿಯಲ್ಲಿ ನೂತನ ಸಮುದಾಯ ಭವನ ನಿರ್ಮಾಣದ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಯಿತು. ನಂತರ ಕಂಗ್ರಾಳಿ ಬಿ.ಕೆ ಗ್ರಾಮದ ಸಂತಾಜೀ ಗಲ್ಲಿಯ ರಸ್ತೆ ಹಾಗೂ ಚರಂಡಿ ನಿರ್ಮಾಣದ ಕಾಮಗಾ-ರಿಗಳಿಗೆ ಚಾಲನೆ ನೀಡಲಾಯಿತು. ಇದಾದ ನಂತರ, ಕಂಗ್ರಾಳಿ ಬಿ.ಕೆ ಗ್ರಾಮದಲ್ಲಿ ಅಭಿವೃದ್ಧಿ ಹಂತದಲ್ಲಿರುವ ವಿವಿಧ ಕಾಮಗಾ-ರಿಗಳ ಪ್ರಗತಿಗಳನ್ನು ಮೃಣಾಲ ಹೆಬ್ಬಾಳಕರ್ ಹಾಗೂ ಗ್ರಾಮಸ್ಥರು ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಆಯಾ ಗ್ರಾಮದ ಸ್ಥಳೀಯ ಜನಪ್ರತಿನಿಧಿಗಳು, ನಾಗರಿಕರು ಉಪಸ್ಥಿತರಿದ್ದರು.



# ಸ್ಥಳೀಯವಾಗಿ ಉದ್ಯೋಗ ದೊರಕಿಸುವ ಮೂಲಕ ಇಂಡಸ್ಟ್ರೀಯಲ್ ಲಿಂಕೆಜ್ ಸೆಲ್ ಯೋಜನೆ ಯಶಸ್ವಿಗೊಳಿಸಲು-ಜಿಲ್ಲಾಧಿಕಾರಿ ಸೂಚನೆ

**ವಿಜಯಪುರ,** : ಜಿಲ್ಲೆಯಲ್ಲಿರುವ ಕೈಗಾರಿಕೆಗಳಲ್ಲಿ ಅವಶ್ಯಕವಿರುವ ಹುದ್ದೆಗಳಿಗುಣವಾಗಿ ಸಂಸ್ಥೆಗಳಲ್ಲಿ ಅರ್ಹ ನಿರುದ್ಯೋಗಿಗಳಿಗೆ ಕೌಶಲ್ಯ ತರಬೇತಿ ನೀಡಿ, ತರಬೇತಿ ಪಡೆದ ಯುವಕರಿಗೆ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸುವ ಮೂಲಕ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಇಂಡಸ್ಟ್ರೀಯಲ್ ಲಿಂಕೇಜ್ ಸೆಲ್ (ಐಎಲ್‌ಸಿ) ಯೋಜನೆ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಜಿಲ್ಲೆಯಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಇಂ-ಡಸ್ಟ್ರೀ ಯಲ್ ಲಿಂಕೇಜ್ ಸೆಲ್ (ಐಎಲ್‌ಸಿ) ಯೋಜನೆ ಆರಂಬಿಸಿದ್ದು, ಕೈಗಾರಿಕೆಗಳಿಗೆ ಅಗತ್ಯವಿರುವ ಮಾನವ ಸಂಪನ್ಮೂಲವನ್ನು ತಮ್ಮ ಉದ್ದಿಮೆಗಳ ಅವಶ್ಯಕತೆಯಂತೆ ತಮ್ಮ ಸಂಸ್ಥೆಗಳಲ್ಲಿಯೇ



ತರಬೇತಿ ನೀಡುವ ಮೂಲಕ ತರಬೇತಿಯ ನಂತರ ತಮ್ಮ ಕೈಗಾರಿಕೆಗಳಲ್ಲಿಯೇ ಉದ್ಯೋಗ ನೀಡುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ನಿರುದ್ಯೋಗಿ ಯುವಕ-ಯುವತಿಯ-ರಿಗೆ ಸ್ಥಳೀಯವಾಗಿಯೇ ಉದ್ಯೋಗ ದೊರಕಿಸಿ ಅನುಕೂಲ ಕಲ್ಪಿಸಿಕೊಡುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಈ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಿ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಗೆ ಕ್ರಮ ವಹಿಸಬೇಕು ಎಂದು ಅವರು ಸೂಚಿಸಿದರು.

ಡೇ-ನಲ್ಮ್ ಯೋಜನೆಯ ಎಲ್ಲ ಉಪ-ಘಟಕಗಳ ಪ್ರಗತಿ ಪರಿಶೀಲನೆ ನಡೆಸಿದ ಅವರು, ಪಿ.ಎಂ. ಸ್ವ-ನಿಧಿ ಅಡಿ ಬಾಕಿ ಇರುವ ಫಲಾನುಭವಿಗಳ ಅರ್ಜಿಗಳನ್ನು ಪಡೆದು ಸಾಲ ಮಂಜೂರಾತಿ ಹಾಗೂ ವಿತರಣೆಗೆ ವಿಳಂಬವಿಲ್ಲದೇ ತುರ್ತಾಗಿ ಕ್ರಮವಹಿಸುವಂತೆ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾ-ರಿಗಳಿಗೆ ಸೂಚಿಸಿದರು. ಸ್ವ-ನಿಧಿ ಸೇ ಸಮೃದ್ಧಿ ಯೋಜನೆಯಡಿ ಎಂಟು ಸಾಮಾಜಿಕ ಭದ್ರತಾ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಒದಗಿಸಲು ಕ್ರಮ ವಹಿಸುವಂತೆ ಸಂಬಂಧಿಸಿದ ಇಲಾಖೆಗಳಿಗೆ ಹಾಗೂ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು.

2024-25ನೇ ಸಾಲಿನ ಡೇ-ನಲ್ಮ್ ಅಭಿಯಾನದಡಿ 420 ಮಹಿಳಾ ಸ್ವ-ಸಹಾಯ ಸಂಘಗಳ ರಚನೆ, 26 ಒಕ್ಕೂಟ ರಚನೆ, 171 ವೈಯಕ್ತಿಕ ಸ್ವಯಂ ಉದ್ಯೋಗ, 12 ಗುಂಪು ಉದ್ಯೋಗ, 234 ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಲಿಂಕೇಜ್ ಗುರಿ ನಿದಿಪಡಿಸಿದ್ದು, ನಿಗದಿತ ಸಮಯದಲ್ಲಿ ಪ್ರಗತಿ ಸಾಧಿಸುವಂತೆ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು.

ಡೇ-ನಲ್ಮ್ ಅಭಿಯಾನದಡಿ ದಿ ಅರ್ಬನ್ ಲರ್ನಿಂಗ್ ಇಂಟ-ರ್ನಷಿಫ್ ಪ್ರೊಗ್ರಾಮ ಯೋಜನೆಯಡಿ ಜಿಲ್ಲೆಗೆ 58 ಗುರಿ ನಿಗದಿಪಡಿಸಿದ್ದು, ನಿಗದಪಡಿಸಿದಂತೆ ಕಾಲಮಿತಿಯಲ್ಲಿಯೇ ಪ್ರಗತಿ ಸಾಧಿಸುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಸಿ.ಬಿ ಕುಂಬಾರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರೂದ್ದಿನ್ ಸೌದಾಗರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತ್ ಕುಮಾರ್ ಗುಣಾರಿ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ವಿಜಯಪುರ ಡಿಸ್ಟ್ರಿಕ್ಟ್ ಇಂಡಸ್ಟ್ರಿಯಲ್ ಓನರ್ ಅಸೋಷಿಯೇಶನ್‌ದ ಅಧ್ಯಕ್ಷರಾದ ಎಸ್.ವಿ.ಪಾಟೀಲ, ಜಿಲ್ಲಾ ಸಣ್ಣ ಕೈಗಾರಿಕಾ ಉದ್ಯಮಿದಾರರ ಸಂಘದ ಅಧ್ಯಕ್ಷರಾದ ಗಂಗಾಧರ ಸಂಬಣ್ಣಿ, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.


**ಕರ್ನಾಟಕ ಸರ್ಕಾರ**
**(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)**
**ಗ್ರಾಮ ಪಂಚಾಯತಿ ಬಿಜಗರ್ಣಿ**
ಖಾನಾಪೂರ ತಾ॥ ಬೆಳಗಾವಿ ಜಿ॥

ಕ್ರ.ಸಂ.ಗ್ರಾಪಂಬಿ/ನರೇಗಾ/2023-24/ಅಲ್ಪಾವಧಿ ಟೆಂಡರ- 01/2023-24/ ದಿನಾಂಕ:22-10-2024

**ಸಾಮಗ್ರಿ ಸರಭರಾಜು ಟೆಂಡರ ಪ್ರಕಟಣೆ (KPPP portal)**

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಬಿಜಗರ್ಣಿ ಗ್ರಾಮ ಪಂಚಾಯತಿ ಅಡಿಯಲ್ಲಿ ಐಟಂವಾರು ಗುತ್ತಿಗೆಗಳನ್ನು KPPP portal ವೇದಿಕೆ ಮೂಲಕ ಗ್ರಾಮ ಪಂಚಾಯತ್ ಇಲಾಖೆಯ ಚಾಲ್ತಿ ನೋಂದಾಯಿತ ಸಾಮಗ್ರಿ ಸರಭರಾಜುದಾರರಿಗೆ ಸ್ಟ್ಯಾಂಡರ್ಡ ಟೆಂಡರ ಡಾಕ್ಯೂಮೆಂಟ್ ಕೆ.ಜಿ-1 ರಲ್ಲಿ ಒಟ್ಟು 2 ಕಾಮಗಾರಿಗಳಿಗೆ ಸಾಮಗ್ರಿ ಸರಭರಾಜು ಗುತ್ತಿಗೆಯನ್ನು ಕರೆಯಲಾಗಿದ್ದು, ಗರಿಷ್ಠ ಅಂದಾಜು ಮೊತ್ತ ರೂ. 13.20 ಲಕ್ಷ ಹಾಗೂ ಅದರಂತೆ ಗರಿಷ್ಠ ಮುಂಗಡ ಠೇವಣಿ ಮೊತ್ತ ಅನುಕ್ರಮವಾಗಿ ರೂ. 0.33 ಲಕ್ಷ ಆಗಿರುತ್ತದೆ ಹಾಗೂ ಕನಿಷ್ಠ ಅಂದಾಜು ಮೊತ್ತ ರೂ. 12.46 ಲಕ್ಷ ಹಾಗೂ ಅದರಂತೆ ಗರಿಷ್ಠ ಮುಂಗಡ ಠೇವಣಿ ಮೊತ್ತ ಅನುಕ್ರಮವಾಗಿ ರೂ. 0.315 ಲಕ್ಷ ಆಗಿರುತ್ತದೆ ಆಕ್ಷೇಪಣೆಗಳಿದ್ದಲ್ಲಿ ಖುದ್ದಾಗಿ ಕಚೇರಿಗೆ ಹಾಜರಾಗಿ ಸಲ್ಲಿಸುವ ಕೊನೆಯ ದಿನಾಂಕ: 29-10-2024 ಸಂಜೆ 17.28 ರೊಳಗಾಗಿ, ಗುತ್ತಿಗೆದಾರರಿಂದ ಅರ್ಜಿಗಳನ್ನು ಆನ್ ಲೈನ್ ಮೂಲಕ ಮನವಿ ಮಾಡಿಕೊಳ್ಳುವ ಕೊನೆಯ ದಿನಾಂಕ: 30-10-2024 ಸಂಜೆ 17.30 ಗಂಟೆಯವರೆಗೆ, ಹಾಗೂ ತಾಂತ್ರಿಕ ಬಿಡ್‌ತೆರೆಯುವ ದಿನಾಂಕ: 04-11-2024 ರಂದು 10.30 ಗಂಟೆಗೆಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ: 14-11-2024 ರಂದು 11.30 ಗಂಟೆಗೆ ಇರುತ್ತದೆ. ಪರಿಷ್ಕೃತ ವೇಳಾ ಪಟ್ಟಿ/ತಿದ್ದುಪಡಿಗಳು/ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಹಾಗೂ ಅಂತರ್‌ಜಾಲದ ಮೂಲಕ ವೆಬ್‌ಸೈಟ್ ವಿಳಾಸ https://kppp.karnataka.gov.in ರಲ್ಲಿ ಪಡೆಯಬಹುದು.

ಸಹಿ/-ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು,
ಗ್ರಾಮ ಪಂಚಾಯತಿ ಬಿಜಗರ್ಣಿ
ಖಾನಾಪೂರ ತಾ॥ ಬೆಳಗಾವಿ ಜಿ॥

DIPR/BGM/RO-NO-1027/KSMCA/2024-25


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 218 Postal Reg No. PMG/KA/NK/BM/135/22-24 / POST AT Vantamury Colony Post Office